ಸಂಪುಟ: 22, ಸಂಚಿಕೆ: 104, ಪುಟಗಳು: 8, ಶುಕ್ರವಾರ, 24 ಜನವರಿ 2025 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

### ಸುಭಾಷಿತ

ತಾಯಿಯ ಪ್ರೀತಿ ಅತ್ಯಂತ ಆಳವಾದದ್ದು ಏಕೆಂದರೆ ಅದರಲ್ಲಿ ಯಾವುದೇ ಸ್ವಾರ್ಥವಿಲ್ಲ ಮತ್ತು ನಾವು ಅದನ್ನು ಎಂದಿಗೂ ಹೋಲಿಸಲಾಗುವುದಿಲ್ಲ.

। ಸುಭಾಷ್ ಚಂದ್ರ ಬೋಸ್

### ಪಂಚಾಂಗ

(ಶುಕ್ರವಾರ 24, ಜನವರಿ-2025)

- ಶ್ರೀ ಕ್ರೋಧಿನಾಮ ಸಂವತ್ಸರ,
- ಉತ್ತರಾಯಣ, ಹೇಮಂತ ಋತು,
- ಪುಷ್ಯ ಮಾಸ, ಕೃಷ್ಣಪಕ್ಷ, ದಶಮಿ,
- ಶುಕ್ರವಾರ, ಅನುರಾಧ ನಕ್ಷತ್ರ
- ರಾಹುಕಾಲ - 11:09 ರಿಂದ 12:35
- ಗುಳಿಕಕಾಲ - 08:16 ರಿಂದ 09:42
- ಯಮಗಂಡಕಾಲ - 03:28 ರಿಂದ 04:55




# ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines

# ಇಂಗ್ಲಿಷ್ ಪರೀಕ್ಷೆಗೆ ಹೆದರಿ ಮನೆ ಬಿಟ್ಟ ಮಕ್ಕಳು

## ಸಕಲೇಶಪುರದಲ್ಲಿ ನಾಪತ್ತೆಯಾದವರು ಬೆಂಗಳೂರಲ್ಲಿ ಪತ್ತೆ

**ಹಾಸನ:** ಸಕಲೇಶಪುರದಲ್ಲಿ ನಾಪತ್ತೆಯಾಗಿದ್ದ ಮೂವರು ವಿದ್ಯಾರ್ಥಿಗಳನ್ನು ಬೆಂಗಳೂರಿನಲ್ಲಿ ಪತ್ತೆ ಹಚ್ಚುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಶರತ್ (16), ಧನಂಜಯ್ (16), ಮುರುಳಿ (16) ಮೂವರು ಶಾಲೆಗೆ ಹೋಗುವುದಾಗಿ ತಿಳಿಸಿ ಹೋಗಿದ್ದವರು, ಮರಳಿ ಮನೆಗೆ ಬಂದಿರಲಿಲ್ಲ. ಬುಧವಾರ ಎಲ್ಲೆಡೆ ಹುಡುಕಾಡಿದ್ದ ಪೋಷಕರು ಆ ದಿನ ರಾತ್ರಿ ಸಕಲೇಶಪುರ ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಕೂಡಲೇ ಕಾರ್ಯಪ್ರವೃತ್ತರಾದ ಪೊಲೀಸರು ವಿದ್ಯಾರ್ಥಿಗಳಿಗಾಗಿ ಹುಡುಕಾಟ ನಡೆಸಿದ್ದರು.

ಮೂವರು ವಿದ್ಯಾರ್ಥಿಗಳು ಮೈಸೂರಿನಲ್ಲಿ ಇರುವ ಬಗ್ಗೆ ಮಾಹಿತಿ ಪಡೆದು ಗುರುವಾರ ಮೈಸೂರಿಗೆ ತೆರಳಿದ್ದ ಪೊಲೀಸರು ಹಲವೆಡೆ ಹುಡುಕಾಡಿದ್ದರು. ಆದರೆ ಮೂವರು ಬಾಲಕರು ಪೊಲೀಸರಿಗೆ ಸಿಗದೆ ಮೈಸೂರಿನಿಂದ ಬೆಂಗಳೂರಿಗೆ ತೆರಳಿದ್ದರು. ಖಚಿತ



ಮಾಹಿತಿ ಮೇರೆಗೆ ನಿನ್ನೆ ರಾತ್ರಿ ಬೆಂಗಳೂರಿಗೆ ತೆರಳಿದ ಪೊಲೀಸರು ಯಶವಂತಪುರ ರೈಲ್ವೆ ನಿಲ್ದಾಣದಲ್ಲಿ ಓರ್ವ ವಿದ್ಯಾರ್ಥಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಇನ್ನಿಬ್ಬರು ವಿದ್ಯಾರ್ಥಿಗಳು ಅವರ ಸಂಬಂಧಿಕರ ಮನೆಯಲ್ಲಿರುವುದು ಗೊತ್ತಾಗಿದ್ದು, ಮೂವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ತಮ್ಮ ಮಕ್ಕಳು ಪತ್ತೆಯಾಗಿದ್ದರಿಂದ ಪೋಷಕರು ನಿಟ್ಟುಸಿರು ಬಿಟ್ಟಿದ್ದಾರೆ.

ವಿಚಾರಣೆಯ ಬಳಿಕ ಶಾಲೆಯಲ್ಲಿ ಪೂರ್ವ ಸಿದ್ಧತಾ ಪರೀಕ್ಷೆ ನಡೆಯುತ್ತಿದ್ದು, ಬುಧವಾರ ಇಂಗ್ಲೀಷ್ ಪರೀಕ್ಷೆಯಿತ್ತು. ಅದಕ್ಕೆ ಹೆದರಿ ವಿದ್ಯಾರ್ಥಿಗಳು ಮನೆಬಿಟ್ಟು ಹೋಗಿರುವುದಾಗಿ ತಿಳಿದುಬಂದಿದೆ.

**ಘಟನೆ ಏನು?:** ಶಾಲೆಗೆ ಹೋಗುವುದಾಗಿ ಹೇಳಿ ಮನೆಯಿಂದ ತೆರಳಿದ್ದ ಮೂವರು ಮಕ್ಕಳು ನಾಪತ್ತೆಯಾಗಿರುವ ಘಟನೆ ಹಾಸನ ಜಿಲ್ಲೆಯ ಸಕಲೇಶಪುರ ತಾಲೂಕಿನ ಕುನಿಗನಹಳ್ಳಿ ಗ್ರಾಮದಲ್ಲಿ ನಡೆದಿತ್ತು. ಮೂವರು ವಿದ್ಯಾರ್ಥಿಗಳು ಕುನಿಗನಹಳ್ಳಿ ಗ್ರಾ.ಪಂ. ವ್ಯಾಪ್ತಿಯ ಆದರವಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಹತ್ತನೇ ತರಗತಿ ವ್ಯಾಸಂಗ ಮಾಡುತ್ತಿದ್ದರು. ಬುಧವಾರ ಬೆಳಿಗ್ಗೆ 7:30ಕ್ಕೆ ಶಾಲೆಗೆ ಹೋಗುವುದಾಗಿ ಹೇಳಿ ಮನೆಯಿಂದ ತೆರಳಿದ್ದರು. ಮೂವರು ಶಾಲೆಗೆ ಬಾರದ ಹಿನ್ನೆಲೆ ಶಿಕ್ಷಕರು ಪೋಷಕರಿಗೆ ಕರೆ ಮಾಡಿ ವಿಷಯ ತಿಳಿಸಿದ್ದರು.

## ಇನ್ನು ಮುಂದೆ ಅರಣ್ಯದಲ್ಲಿ ಯಾವುದೇ ಚಿತ್ರೀಕರಣಕ್ಕೆ ಸರ್ಕಾರದ

# ಅನುಮತಿ ಕಡ್ಡಾಯ

**ಬೆಂಗಳೂರು:** ಅರಣ್ಯ ಪ್ರದೇಶದಲ್ಲಿ ಇನ್ನು ಮುಂದೆ ಸಿನಿಮಾ, ಸಾಕ್ಷ್ಯಚಿತ್ರ, ಧಾರಾವಾಹಿ ಸೇರಿದಂತೆ ಯಾವುದೇ ಚಿತ್ರೀಕರಣಕ್ಕೆ ಸರ್ಕಾರದ ಅನುಮತಿ ಪಡೆಯುವುದನ್ನು ಕಡ್ಡಾಯಗೊಳಿಸಿ ಆದೇಶ ಹೊರಡಿಸಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ, ಸೂಚನೆ ನೀಡಿದ್ದಾರೆ.

ಈ ಸಂಬಂಧ ಅರಣ್ಯ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಸಚಿವರು ಸೂಚನೆ ನೀಡಿದ್ದಾರೆ.

**ಸೂಚನೆಯಲ್ಲಿ ಏನಿದೆ?:** ಚಲನಚಿತ್ರ, ದೂರದರ್ಶನ ಸಾಕ್ಷ್ಯಚಿತ್ರ, ಧಾರಾವಾಹಿ ಇತ್ಯಾದಿ ಚಿತ್ರೀಕರಣಕ್ಕೆ ಸಂಬಂಧಿತ



ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ನಿಗದಿತ ಶುಲ್ಕ ಕಟ್ಟಿಸಿಕೊಂಡು ಅನುಮತಿ ನೀಡುತ್ತಿದ್ದಾರೆ ಇದಲ್ಲದೆ ಸ್ಥಳೀಯ ಮಟ್ಟದಲ್ಲೂ ಅಧಿಕಾರಿಗಳು ಅನುಮತಿ ನೀಡುತ್ತಿರುವುದರಿಂದ ಅರಣ್ಯ ಪ್ರದೇಶದ ಗೌಪ್ಯ ಮಾಹಿತಿ

ಪುಟ 2

## ಸಂಕ್ಷಿಪ್ತ ಸುದ್ದಿ

### ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ವ್ಯಕ್ತಿ

# ಬಲಿ

**ರಾಯಚೂರು:** ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ವ್ಯಕ್ತಿಯೋರ್ವ ಆತ್ಮಹತ್ಯೆ ಮಾಡಿಕೊಂಡಿದ್ದು, ನ್ಯಾಯಕ್ಕಾಗಿ ಆಗ್ರಹಿಸಿ ಮೃತನ ಪತ್ನಿ ಗೃಹಸಚಿವರಿಗೆ ಮಾಂಗಲ್ಯಸರ ಸಮೇತ ಮನವಿ ಪತ್ರವನ್ನು ಪೋಸ್ಟ್ ಮಾಡಿದ್ದಾರೆ. ಮೃತನನ್ನು ಶರಣಬಸವ (35) ಎಂದು ಗುರುತಿಸಲಾಗಿದೆ. ಈ ಘಟನೆ ರಾಯಚೂರಿನ ಮಾನ್ವಿ ತಾಲೂಕಿನ ಕಪಗಲ್ ಗ್ರಾಮದಲ್ಲಿ ನಡೆದಿದೆ.

**» ಗೃಹ ಸಚಿವರಿಗೆ ಮಾಂಗಲ್ಯಸರ ಪೋಸ್ಟ್ ಮಾಡಿದ ಮೃತನ ಪತ್ನಿ**

ಮೇಸ್ತ್ರಿ ಕೆಲಸ ಜೊತೆಗೆ ಟಂಟಂ ಚಾಲಕರಾಗಿದ್ದ ಶರಣಬಸವ, ವಿವಿಧ ಫೈನಾನ್ಸ್‌ಗಳಲ್ಲಿ ಲಕ್ಷಾಂತರ ರೂಪಾಯಿ ಸಾಲ ಮಾಡಿಕೊಂಡಿದ್ದರು. ಆದರೆ ಅವುಗಳ ಟಾರ್ಚರ್ ತಾಳದೇ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದು, ಮನೆಗೆ ಆಧಾರವಾಗಿದ್ದವರನ್ನು ಕಳೆದುಕೊಂಡು ಪತ್ನಿ, ಮೂವರು ಮಕ್ಕಳು, ತಂದೆ, ತಾಯಿ ಕಂಗಾಲಾಗಿದ್ದಾರೆ.

ಪುಟ 2

### ಪತ್ರ ಬರೆದು ಬಿಕಾಂ ವಿದ್ಯಾರ್ಥಿ

# ನಾಪತ್ತೆ

**ಬೆಂಗಳೂರು:** ಅಧರ್ಮದ ಜಗತ್ತನ್ನ ತೊರೆದು ಸತ್ಯದ ಕಡೆ ಹೋಗುತ್ತಿದ್ದೇನೆ, ನಾನು ವಿಷ್ಣುವಿನ ಮಗ, ನನ್ನನ್ನು ಹುಡುಕಬೇಡಿ ಎಂದು ಬರೆದು ಬೆಂಗಳೂರಿನ ವಿದ್ಯಾರ್ಥಿಯೊಬ್ಬ ನಾಪತ್ತೆಯಾಗಿದ್ದಾನೆ.



ಮೋಹಿತ್ ಋಷಿ ನಾಪತ್ತೆಯಾದ ವಿದ್ಯಾರ್ಥಿ. ವಿದ್ಯಾರಣ್ಯ ಪುರದ ನಿವಾಸಿ ಅರ್ಜುನ್ ಕುಮಾರ್ ಎಂಬುವವರ ಪುತ್ರ, ಮೋಹಿತ್ ಋಷಿ ಬಿಇಎಲ್ ಕಾಲೇಜಿನಲ್ಲಿ ಬಿಕಾಂ ಓದುತ್ತಿದ್ದ. ಜನವರಿ 16ರ ಬೆಳಗಿನ ಜಾವ 4 ಗಂಟೆ ಸುಮಾರಿಗೆ ಮನೆಯಲ್ಲೇ ಮೊಬೈಲ್ ಬಿಟ್ಟು ಇದ್ದಕ್ಕಿದ್ದಂತೆ ಮನೆ ಬಿಟ್ಟು ಹೋಗಿದ್ದಾನೆ. ಪುಸ್ತಕದಲ್ಲಿ ಅಸತ್ಯದ ಪ್ರಪಂಚದಲ್ಲಿ ಸತ್ಯ ಹುಡುಕಲು ಹೋಗುತ್ತಿದ್ದೇನೆ ಎಂದು ಬರೆದಿದ್ದಾನೆ.

**» ಅಧರ್ಮದ ಜಗತ್ತನ್ನು ತೊರೆಯುತ್ತಿದ್ದೇನೆ, ನನ್ನನ್ನು ಹುಡುಕಬೇಡಿ**

ಪುಟ 2

# ನಿಶಾಚರರ ನಿಗೂಢ ದಂಧೆ!

## ಅಪವೇಳೆಯಲ್ಲಿ ರಾಹು-ಕೇತು ಮಿಲನ!

ಭಾನಗಡಿ 2

■ ಸಂಜೆ ಮುಗಿಲು ಬೆಂಗಳೂರು

ಬಿಡಿಎ ಉತ್ತರ ಅಭಿಯಂತರ ವಿಭಾಗದಲ್ಲಿ ಕಮಾಯಿಗಾಗಿ ಕೆಲ ಅಭಿಯಂತತರು ಹೇಗೆಲ್ಲಾ ಕೈ-ಬಾಯಿ ಹೇಸಿಗೆ ಮಾಡಿಕೊಳ್ಳುತ್ತಿದ್ದಾರೆಂದು ನಿನ್ನೆಯ ಸಂಚಿಕೆಯಲ್ಲಿ ಪರಿಚಯಿಸಲಾಗಿತ್ತು. ಅಪವೇಳೆಯಲ್ಲಿ ಸಕ್ರಿಯಗೊಳ್ಳುವ ಸುಲಿಗೆ ಗ್ಯಾಂಗ್ ಮತ್ತದರ ಸಾರಥಿಯಾರೆಂಬುದನ್ನು ಇಂದು ನೋಡುವ.

ನಿಜಕ್ಕೂ ಇದು ಕೌತುಕದ ವಿಚಾರವೇ! ಬಹುತೇಕ ಸರ್ಕಾರಿ ಅಧಿಕಾರಿಗಳು ಡ್ಯೂಟಿ ಸಮಯದಲ್ಲಿಯೇ ಸಮಯಕ್ಕೆ ಸರಿಯಾಗಿ ಬಂದು ಮಾಡಬೇಕಾದ ಕೆಲಸವನ್ನು ಮಾಡಲು ತಿಣುಕಾಡುವ ಪರಿಸ್ಥಿತಿ ಇರುವಾಗ, ಬಿಡಿಎ ಉತ್ತರ ಅಭಿಯಂತರ ವಿಭಾಗದಲ್ಲಿ ಮಾತ್ರ ಕೆಲ ಇಂಜನೀಯರ್‌ಗಳು ಓವರ್‌ಡ್ಯೂಟಿ ಮಾಡಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವನ್ನೇ ಅಭಿವೃದ್ಧಿ ಪಡಿಸುತ್ತಿದ್ದಾರೆ.

ಬಿಡಿಎ ಉತ್ತರ ಅಭಿಯಂತರ ಉಪ-ವಿಭಾಗ 3 ರಿಂದ 6ರ ವ್ಯಾಪ್ತಿಗೆ ಒಳಪಡುವ ಪ್ರದೇಶಗಳಲ್ಲಿ ತಲೆ ಎತ್ತುವ ಅಕ್ರಮ ಕಟ್ಟಡಗಳು, ಒತ್ತುವರಿ ಜಾಗದಲ್ಲಿ ಬಾಹು ಚಾಚಿ ಸುಣ್ಣಬಣ್ಣ ಬಳಿದುಕೊಳ್ಳುತ್ತಿರುವ ಕಟ್ಟಡಗಳ ಮಾಲೀಕರೇ ಈ ಅಪವೇಳೆಯಲ್ಲಿ ಬೆವರು ಸುರಿಸುವ ಇಂಜನೀಯರ್‌ಗಳ ಅಸಲಿ ಗಿರಾಕಿಗಳು. ಕಚೇರಿ ಸಮಯ ಮುಗಿದ ತರುವಾಯ ಸಂಜೆ 7ರ ನಂತರ ಮತ್ತೆ ಅಂಗಡಿ ತೆರೆಯುವ ಈ ಸುಲಿಗೆಕೋರರು ಭೂಗಳ್ಳರು ನೀಡುವ ಹೇಸಿಗೆಗಾಗಿ ಕಾದುಕುಳಿತುಕೊಳ್ಳುತ್ತಾರೆ.




### ಅಕ್ರಮ ಕಟ್ಟಡಗಳ ಪಿತಾಮಹರು!

ಬೆಂಗಳೂರಿನ ಈ ಉತ್ತರ ವಿಭಾಗದ ವ್ಯಾಪ್ತಿಯಲ್ಲಿ ಅನಧಿಕೃತ ಕಟ್ಟಡಗಳು ಯಾವುದೇ ನಕ್ಷೆ ಮಂಜೂರಾತಿ ಇಲ್ಲದೇ ಮುಗಿಲೆತ್ತ ಎದ್ದು ನಿಲ್ಲುತ್ತಿದ್ದರೆ ಇನ್ನು ಕೆಲವು ಕಟ್ಟಡಗಳು ಅನುಮೋದಿತ ನಕ್ಷೆಗೆ ಸಂಪೂರ್ಣ ವ್ಯತಿರಿಕ್ತವಾಗಿ ನಿರ್ಮಾಣಗೊಳ್ಳುತ್ತಿದೆ. ಈ ವಿಚಾರದಲ್ಲಿ ಸಂಪೂರ್ಣ ಅಭಿಯಂತರರ ವಲಯವೇ ಒಟ್ಟಾಗಿ ಕಲೆತು ಸಹಪಂಕ್ತಿ ಭೋಜನಕ್ಕೆ ಕುಳಿತಂತಿದೆ. ಕ್ಷಣಕ್ಕೊಂದು ದಿನಕ್ಕೊಂದು ಭಾನಗಡಿ ಸೃಷ್ಟಿಸುತ್ತಿರುವ ಈ ಮಹಾಶಯರ ಪಡೆ ಬಿಡಿಎ ಆರೋಗ್ಯವನ್ನೇ ಹಳ್ಳ ಹಿಡಿಸಿದ್ದಾರೆ. ಇವರ ಖತರ್ನಾಕ್ ದಂಧೆಗಳಿಂದಾಗಿ ನಗರಾಭಿವೃದ್ಧಿ ಯೋಜನೆಯ ಆಶಯವೇ ತಲೆಕೆಳಗಾಗಿದೆ. ಒಂದರ್ಥದಲ್ಲಿ ಇವರೇ ಅಕ್ರಮ ಕಟ್ಟಡಗಳ ಪಿತಾಮಹರು!

ಇನ್ನು ಈ ಭ್ರಷ್ಟ ಇಂಜಿನಿಯರ್‌ಗಳು, ಅಕ್ರಮವಾಗಿ ನಿರ್ಮಾಣವಾಗುವ ಕಟ್ಟಡಗಳ ಮಾಲೀಕರಿಗೆ ಹೆದರಿಸಿ ಬೆದರಿಸಿ ಲಕ್ಷ ಲಕ್ಷ ಹಣ ವಸೂಲಿ ಮಾಡುತ್ತಿರುವುದು ಬೆಳಕಿನಷ್ಟೇ ಸತ್ಯ. ರಾತ್ರಿ 7ರ ನಂತರ ಬಿಡಿಎ ಉತ್ತರ ಅಭಿಯಂತರ ವಿಭಾಗಕ್ಕೆ ಖುದ್ದಾಗಿ ಆಗಮಿಸುವ ಅಕ್ರಮ ಹಾಗೂ ಒತ್ತುವರಿ ಕಟ್ಟಡಗಳ ಮಾಲೀಕರ ಜೊತೆಗೆ ಈ ಭ್ರಷ್ಟರು ವ್ಯವಹರಿಸಿ ಸಿಕ್ಕಷ್ಟು ಕಮಾಯಿ ಕಿತ್ತುಕೊಂಡು ಅಪವೇಳೆಯಲ್ಲಿ ಪೇರಿ ಕೀಳುತ್ತಾರೆ.

### ರಾಘವೇಂದ್ರ ದರ್ಶನ!

ಅಧಿಕೃತವಾಗಿ ಎರವಲು ಸೇವೆಯ ಮೇಲೆ ಪ್ರಾಧಿಕಾರಕ್ಕೆ ವಕ್ಕರಿಸಿರುವ ಕೆಲವು ಇಂಜನೀಯರ್‌ಗಳ ಅಟ್ಟಹಾಸ, ಭ್ರಷ್ಟಾಚಾರದ ಪ್ರವರ ಒಂದೆಡೆಯಾದರೆ, ಮತ್ತೊಂದು ಕಡೆಗೆ ಔಟ್‌ಸೋರ್ಸ್ ಇಂಜನೀಯರ್‌ಗಳ ಅಬ್ಬರ ಹೇಳತೀರದು. ಗುತ್ತಿಗೆ ಆಧಾರಿತ ಅಭಿಯಂತರರ ಕೈಚಳಕ, ಕಿಲಾಡಿ ಕರಾಮತ್ತಿನಿಂದಾಗಿ ಬಹಳಷ್ಟು ಜನ ಅಧಿಕೃತ ಇಂಜನೀಯರ್‌ಗಳು ಕಾಲು ಕಸವಾಗಿ ಬಿಟ್ಟಿದ್ದಾರೆ. ಬಿಡಿಎ ಉತ್ತರ ಅಭಿಯಂತರ ವಿಭಾಗದಲ್ಲಿ ರಾಘವೇಂದ್ರ, ಮದನ್, ಖಾಜಲ್, ವಂದನಾ ಹಾಗೂ ಪ್ರೀತಂ ಎಂಬ ಐದು ಜನ ಔಟ್‌ಸೋರ್ಸ್ ಇಂಜನೀಯರ್‌ಗಳು ಇದ್ದಾರೆ. ಆ ಪೈಕಿ ರಾಘವೇಂದ್ರ, ಎಂಬಾತ ಇಇ ಸಾಹೇಬರಿಗೆ ಅಧಿಕೃತ ಇಂಜನೀಯರ್‌ಗಳಿಗಿಂತಲೂ ಹೆಚ್ಚು ಅಚ್ಚುಮೆಚ್ಚಂತೆ. ಕಟ್ಟಡ ಪರಿಶೀಲನೆ ವೇಳೆಯಲ್ಲಿ ಆಯಾ ಸಬ್‌ಡಿವಿಜನ್‌ನ ಎಇಇ ಗಳು ಹಾಜರು ಇರುತ್ತಾರೋ ಇಲ್ಲವೋ... ಆದರೆ, ಈ ರಾಯರು ಮಾತ್ರ ಇದ್ದೇ ಇರುತ್ತಾರಂತೆ. ಅಧಿಕೃತ ಎಇಇಗಳನ್ನು ನಿರಾಕರಿಸಿ ಔಟ್ ಸೋರ್ಸ್ ರಾಘವೇಂದ್ರರಿಗೆ ಅಷ್ಟರ ಮಟ್ಟಿಗೆ ಮಾನ್ಯತೆ ಇದೆ! ಇದಕ್ಕೆ ಕಾರಣ ಏನೆಂಬುದನ್ನು ಮುಂದೆ ನೋಡುವ...

### ಇಇ ಸಾಹೇಬರ ಜಾಣ ಮೌನ!

ಇಇ ಸಾಹೇಬರ ನಜರಿನಡಿಯಲ್ಲಿಯೇ ಬಿಡಿಎ ಉತ್ತರ ಅಭಿಯಂತರ ವಿಭಾಗದಲ್ಲಿ ಈ ಮಹತ್ಕಾರ್ಯ ನಡೆಯುತ್ತಿದೆ ಎಂದು ಆರೋಪಿಸಲಾಗುತ್ತಿದೆ. ಪ್ಲ್ಯಾನ್ ಮಂಜೂರಾತಿ ಮಾತ್ರವಲ್ಲದೇ ಅನೇಕ ಕೆಲಸಗಳಲ್ಲಿ ಅವ್ಯವಹಾರಗಳು ತಾಂಡವಾಡುತ್ತಿವೆ. ಇನ್ನು ತಮ್ಮ ಕೈ ಕೆಳಗಿನ ಕೆಳ ಹಂತದ ಸಿಬ್ಬಂದಿಗಳಿಗೆ ನ್ಯಾಯಯುತವಾಗಿ ವರ್ಕ್ ಅಲೋಕೇಷನ್ ಮಾಡದೇ ತಾರತಮ್ಯ ಮಾಡುತ್ತಿದ್ದಾರೆಂಬುದು ಅನೇಕ ಸಿಬ್ಬಂದಿಗಳ ಆರೋಪ. ಈ ಬಗ್ಗೆ ಸಂತ್ರಸ್ತ ಸಿಬ್ಬಂದಿ ವರ್ಗ ಇವರ ಧೋರಣೆ ವಿರುದ್ಧ ಮೂಗುಮುರಿಯುತ್ತಿದ್ದಾರೆ. ಆದರೂ ಕ್ಯಾರೆ ಎನ್ನದೇ ಸ್ವಹಿತಾಸಕ್ತಿಗಾಗಿ ಅವರಿಗೆಲ್ಲಾ ಅನ್ಯಾಯವನ್ನೇ ಮಾಡುತ್ತಾ ನಿವೃತ್ತಿಯ ಅಂಚಿಗೆ ಬಂದು ನಿಂತಿದ್ದಾರೆನ್ನಲಾಗುತ್ತಿದೆ. ಸೇವಾವಧಿಯಲ್ಲಿದ್ದ ಮನಸ್ಥಿತಿಯನ್ನೇ ನಿವೃತ್ತಿಯ ಅಂಚಿನಲ್ಲೂ ಅನಾವರಣಗೊಳಿಸುತ್ತಿದ್ದಾರೆಂದು ಸಂತ್ರಸ್ತ ಸಿಬ್ಬಂದಿ ಹಿಡಿ ಶಾಪ ಹಾಕುತ್ತಿದ್ದಾರೆ.

ಇಷ್ಟಲ್ಲದೇ ವರ್ಕ್‌ಆರ್ಡರ್ ವಿಷಯದಲ್ಲೂ ಸಾಕಷ್ಟು ಅಧ್ವಾನಗಳು ಸೃಷ್ಟಿಯಾಗಿವೆ. ಕಳೆದ ವಿಧಾನಸಭೆ ಚುನಾವಣೆಗೂ ಮೊದಲೇ ಗುತ್ತಿಗೆದಾರರಿಗೆ ಬಡಾವಣೆ ಅಭಿವೃದ್ಧಿ ಕಾರ್ಯಗಳಿಗೆ ವರ್ಕ್‌ಆರ್ಡರ್ ಕೊಡಬೇಕಿತ್ತು. ಆದರೆ, ಈತನಕವೂ ಆ ಕೆಲಸವಾಗಿಲ್ಲ. ನಿಗದಿತ ಕಮಾಯಿ ಬಂದು ಸೇರುತ್ತಿಲ್ಲ ಎಂಬ ಕಾರಣಕ್ಕೆ ಈ ಕೆಲಸ ತಟಸ್ಥವಾಗಿರಬಹುದೆಂಬ ಅನುಮಾನ ಎಂತವರಿಗಾದರೂ ಸಹಜವಾಗಿಯೇ ಮೂಡುತ್ತದೆ.

### ವೈದ್ಯ ಡಾ. ಸುರೇಶ್ ಹನಗವಾಡಿಗೆ ರಾಷ್ಟ್ರಪತಿ ಔತಣಕೂಟಕ್ಕೆ

# ಆಹ್ವಾನ

**ದಾವಣಗೆರೆ:** ದಾವಣಗೆರೆಯ ವೈದ್ಯ ಡಾ. ಸುರೇಶ್ ಹನಗವಾಡಿಗೆ ರಾಷ್ಟ್ರಪತಿಗಳ ಔತಣಕೂಟಕ್ಕೆ ಆಹ್ವಾನ ಬಂದಿದೆ. ಅಂಚೆ ಕಚೇರಿಯ ಮುಖ್ಯಾಧಿಕಾರಿಗಳೇ ಆಹ್ವಾನ ಪತ್ರಿಕೆಯನ್ನು ತಲುಪಿಸಿದ್ದಾರೆ. ಇದೀಗ ಕ್ರಿಕೆಟ್ ದೇವರು ಎಂದೇ ಕರೆಯಲ್ಪಡುವ ಸಚಿನ್ ತೆಂಡೂಲ್ಕರ್ ಅವರಂಥ ದಿಗ್ಗಜರ ಜತೆ ಡಾ. ಸುರೇಶ್ ಹನಗವಾಡಿ ರಾಷ್ಟ್ರಪತಿಗಳ ಔತಣಕೂಟದಲ್ಲಿ ಪಾಲ್ಗೊಳ್ಳಲಿದ್ದಾರೆ. ಒಟ್ಟಾರೆಯಾಗಿ ದೇಶದ 528 ಗಣ್ಯರಿಗೆ ಔತಣಕೂಟದ ಆಹ್ವಾನ ಬಂದಿದೆ. ಇದೇ ಜನವರಿ 26ರ ಗಣರಾಜ್ಯೋತ್ಸವ ಸಮಾರಂಭ ದಿನ ಔತಣಕೂಟ ನಡೆಯಲಿದೆ.



ಡಾ. ಸುರೇಶ್ ಹನಗವಾಡಿ ಹಿಮೋಫಿಲಿಯಾ ಪೀಡಿತರ ಬಾಳಿನ ಆಶಾಕಿರಣ. ಇತ್ತೀಚಿಗೆ ರಾಷ್ಟ್ರಪತಿಗಳಿಂದ ಡಾ.ಸುರೇಶ ಹನಗವಾಡಿಗೆ ಶ್ರೇಷ್ಠ ದಿವಾಂಜನ್ ರಾಷ್ಟ್ರೀಯ ಪ್ರಶಸ್ತಿ ಕೂಡಾ ದೊರೆತಿದೆ. ದಾವಣಗೆರೆಯ ಹಿಮೋಫಿಲಿಯಾ ಸಂಸ್ಥೆಯ ಅಧ್ಯಕ್ಷರಾದ ಡಾ.ಸುರೇಶ ಹನಗವಾಡಿ ಸ್ವತಹ ಹಿಮೋಫಿಲಿಯಾ ಎಂಬ ವಿಚಿತ್ರ ಕಾಯಿಲೆಯಿಂದ ಬಳಲಿದವರು.

ಪುಟ 2

### ಪೊಲೀಸ್ ಭದ್ರತೆಯಲ್ಲಿ

# ಗಣರಾಜ್ಯೋತ್ಸವ

**ಬೆಂಗಳೂರು:** ಜನವರಿ 26 ಗಣರಾಜ್ಯೋತ್ಸವ ಹಿನ್ನೆಲೆಯಲ್ಲಿ ಬೆಂಗಳೂರಿನ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಜನವರಿ 26ರ ಬೆಳಗ್ಗೆ 9 ಗಂಟೆಗೆ ರಾಜ್ಯಪಾಲರು ಧ್ವಜಾರೋಹಣ ನೆರವೇರಿಸಲಿದ್ದಾರೆ. ಈ ಸಂಬಂಧ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ ದಯಾನಂದ್ ಮಾತನಾಡಿ, ಈ ಭಾರಿ ಗಣರಾಜ್ಯೋತ್ಸವಕ್ಕೆ ಸಕಲ ತಯಾರಿಯಾಗಿದೆ. ಯಾವುದೇ ಸಮಸ್ಯೆಯಾಗದಂತೆ ರಾಜ್ಯೋತ್ಸವ ಆಚರಣೆಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಹೇಳಿದರು.



**ಪೊಲೀಸ್ ಭದ್ರತೆ:** 8 ಮಂದಿ ಡಿಸಿಪಿ, 17 ಮಂದಿ ಎಸಿಪಿ, 44 ಮಂದಿ ಪಿಐ, 114 ಮಂದಿ ಪಿಎಸ್ ಐ, 58 ಮಂದಿ ಎಎಸ್‌ಐ, 80 ಮಂದಿ ಸಿಬ್ಬಂದಿ, 30 ಜನ ಕ್ಯಾಮೆರಾ ಸಿಬ್ಬಂದಿ ಸೇರಿದಂತೆ ಒಟ್ಟು 1051 ಜನ ಅಧಿಕಾರಿಗಳು ಭದ್ರತೆಗೆ ಇರುತ್ತಾರೆ.

ಪುಟ 2

### ಸುಳ್ವಾಡಿ ದುರಂತದಲ್ಲಿ ಬದುಕಿದವರಿಗೆ ನರಕಯಾತನೆ

# 6 ವರ್ಷ ಕಳೆದರೂ ಕಾಡುತ್ತಿದೆ ಅನಾರೋಗ್ಯ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಸುಳ್ವಾಡಿ ಮಾರಮ್ಮನ ದೇಗುಲದಲ್ಲಿ ಪ್ರಸಾದಕ್ಕೆ ವಿಷ ಹಾಕಿದ್ದರಿಂದಿಂದಾಗಿ 2018 ರ ಡಿಸೆಂಬರ್ 14 ರಂದು 17 ಮಂದಿ ಸಾವಿಗೀಡಾಗಿದ್ದರು. 120 ಕ್ಕೂ ಹೆಚ್ಚು ಜನ ಅಸ್ವಸ್ಥರಾಗಿದ್ದರು. ಸುಳ್ವಾಡಿ ಪ್ರಾಸಾದ ದುರಂತ ಸಂಭವಿಸಿ 6 ವರ್ಷದ ಕಳೆದರೂ ಸಂತ್ರಸ್ತರ ಗೋಳು ಮಾತ್ರ ಹೇಳತೀರದಾಗಿದೆ. ಅನಾರೋಗ್ಯ ಪೀಡೀತರ ಬಗ್ಗೆ ಆರೋಗ್ಯ ಇಲಾಖೆ ಕಾಳಜಿ ವಹಿಸಿದೆ. ಆದರೂ ಸಂತ್ರಸ್ತರು ಇಂದಿಗೂ ಮೈಕೈ ನೋವು, ತಲೆನೋವು, ವಾಂತಿ, ಬೇಧಿ, ದೃಷ್ಟಿಹೀನತೆ ಸೇರಿದಂತೆ ನಾನಾ ರೀತಿಯ ಅನಾರೋಗ್ಯದಿಂದ ಬಳಲುತ್ತಿದ್ದಾರೆ.

ಆರೋಗ್ಯ ಸಮಸ್ಯೆಗಳಿಂದಾಗಿ ಕೂಲಿ ಕೆಲಸ ಮಾಡುವುದಕ್ಕೆ ಆಗುತ್ತಿಲ್ಲ. ಆರೋಗ್ಯ ಸಮಸ್ಯೆಯಿಂದ ಬದುಕೇ ಸರ್ವನಾಶವಾಗಿದೆ ಎಂದು ಸಂತ್ರಸ್ತರು ಕಣ್ಣೀರು ಹಾಕುತ್ತಿದ್ದಾರೆ.

ಅನಾರೋಗ್ಯದಿಂದ ಬಳಲುತ್ತಿರುವ ಹನೂರು ತಾಲೂಕಿನ ಎಂಜಿ ದೊಡ್ಡಿಯ 23 ಮಂದಿಯನ್ನು ಸಿಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಮಹಿಳೆಯರು, ಪುರುಷರು, ಮಕ್ಕಳು, ವೃದ್ಧೆಯರ ಮೇಲೆ ವೈದ್ಯರು ನಿಗಾ



ಇಟ್ಟಿದ್ದಾರೆ. ಆದರೆ, ಪ್ರಾಣಕ್ಕೆ ಹಾನಿಯಾಗುವ ಯಾವುದೇ ಸಮಸ್ಯೆಗಳು ಇಲ್ಲ. ಮನೋರೋಗದ ಸಮಸ್ಯೆಯಿಂದಾಗಿ ಅವರಿಗೆ ಈ ರೀತಿ ಆಗುತ್ತಿದೆ ಎಂದು ವೈದ್ಯ ಮಹೇಶ್ ಹೇಳಿದ್ದಾರೆ.

ಏನೇ ಆದರೂ ಕಿಚ್ಚಗುತ್ತಿ ಮಾರಮ್ಮನ ದೇಗುದಲ್ಲಿ ವಿಷ ಪ್ರಸಾದವನ್ನು ತಿಂದು ಪ್ರಾಣ ಉಳಿಸಿಕೊಂಡವರ ಕಥೆ ಕರುಣಾಜನಕವಾಗಿದೆ. ನಿತ್ಯ ನರಕ ಅನುಭವಿಸ್ತಾ ಕಣ್ಣೀರು ಹಾಕುವಂತಾಗಿದೆ.

### ಆಡಳಿತ ಗೊಂದಲ, ಸಂಘರ್ಷಕ್ಕೆ 17 ಅಮಾಯಕ ಜೀವಗಳು ಬಲಿ

ಚಾಮರಾಜನಗರದ ಸುಳ್ವಾಡಿ ಗ್ರಾಮದ ಕಿಚ್ಚಗುತ್ತಿ ಮಾರಮ್ಮ ದೇವಲಯಕ್ಕೆ ಉತ್ತಮ ಆದಾಯ ಬರುತ್ತಿದ್ದು, ಆಡಳಿತ ಮಂಡಳಿಯಲ್ಲಿ ಹಿಡಿತಕ್ಕೆ ಎರಡು ಬಣಗಳ ನಡುವೆ ಸಂಘರ್ಷ ಇತ್ತು. ಮಂಡಳಿ ಇಬ್ಭಾಗವಾಗಿತ್ತು. ಇಂಥ ಸಂದರ್ಭದಲ್ಲೇ ನೂತನ ಗೋಪುರ ನಿರ್ಮಾಣಕ್ಕೆ ಶಂಕುಸ್ಥಾಪನೆ, ಪೂಜೆ ಹಮ್ಮಿಕೊಳ್ಳಲಾಗಿತ್ತು. ಆ ಸದರ್ಭದಲ್ಲಿ ದೇವಸ್ಥಾನದ ಆಡಳಿತ ಮಂಡಳಿಯ ಹೆಸರು ಕೆಡಿಸಬೇಕು ಹಾಗೂ ಗೋಪುರ ನಿರ್ಮಾಣ ತಡೆ ಹಿಡಿಯಬೇಕೆಂಬ ಉದ್ದೇಶದಿಂದ ಕೆಲವರು ಪ್ರಸಾದಕ್ಕೆ ಕ್ರಿಮಿನಾಶಕ ಬೆರೆಸಿದ್ದರು.

ಪ್ರಸಾದಕ್ಕೆ ವಿಷ ಬೆರೆಸಿದ ಪರಿಣಾಮ ಅದನ್ನು ಸೇವಿಸಿದ 17 ಮಂದಿ ಮೃತಪಟ್ಟು, 120ಕ್ಕೂ ಹೆಚ್ಚು ಜನ ಅಸ್ವಸ್ಥಗೊಂಡಿದ್ದರು. ಅಸ್ವಸ್ಥರ ಪೈಕಿ ಅನೇಕರು ಇಂದಿಗೂ ಅನಾರೋಗ್ಯ ಎದುರಿಸುತ್ತಿದ್ದಾರೆ.

### ವಿಕ್ಟೋರಿಯಾ, ವಾಣಿವಿಲಾಸ್ ಆಸ್ಪತ್ರೆಗಳಲ್ಲಿ ವೈದ್ಯ, ಸಿಬ್ಬಂದಿ ಕೊರತೆ

# ರೋಗಿಗಳಿಗೆ ಸಂಕಷ್ಟ

**ಬೆಂಗಳೂರು:** ವಿಕ್ಟೋರಿಯಾ, ವಾಣಿ ವಿಲಾಸ್ ಆಸ್ಪತ್ರೆಗಳು ಸರ್ಕಾರಿ ಆಸ್ಪತ್ರೆಗಳಲ್ಲೇ ದೊಡ್ಡವು. ಇಲ್ಲಿ ಸಾಮಾನ್ಯವಾಗಿ ಎಲ್ಲಾ ರೀತಿಯ ಚಿಕಿತ್ಸೆಗಳು ಸಿಗುತ್ತವೆ. ಇದರ ಜೊತೆಗೆ ಗ್ಯಾಸ್ಟ್ರೋಎಂಟ್ರಾಲಜಿ, ಸ್ಕಿನ್ ಡಿಪಾರ್ಟ್ಮೆಂಟ್, ಟ್ರಾಮ ಕೇರ್ ಸೆಂಟರ್, ಸೇರಿದಂತೆ ವಿವಿಧ ಪ್ರಮುಖ ಚಿಕಿತ್ಸೆಗಳನ್ನು ಕಡಿಮೆ ವೆಚ್ಚದಲ್ಲಿ ನೀಡಲಾಗುತ್ತದೆ. ಅದರಲ್ಲೂ ವಾಣಿ ವಿಲಾಸ್ ಆಸ್ಪತ್ರೆ ಹೆರಿಗೆ, ತಾಯಿ ಮಗುವಿನ ಆರೈಕೆಯಲ್ಲಿ ಮುಂದು. ಇದೇ ಕಾರಣದಿಂದ ಕೇವಲ ಕರ್ನಾಟಕವಲ್ಲದೆ ಬೇರೆ ರಾಜ್ಯಗಳಿಂದಲೂ ರೋಗಿಗಳು ಚಿಕಿತ್ಸೆಗೆ ಬರುತ್ತಾರೆ. ಆದರೆ ಇಲ್ಲಿ ರೋಗಿಗಳ ಸಂಖ್ಯೆಗೆ ತಕ್ಕಂತೆ ವೈದ್ಯರು, ಸಿಬ್ಬಂದಿ ಮಾತ್ರ ಇಲ್ಲ.

ರಾಜಧಾನಿಯ ಪ್ರತಿಷ್ಠಿತ ಸರ್ಕಾರಿ ಆಸ್ಪತ್ರೆಗಳಿಗೆ ವೈದ್ಯಕೀಯ ಸಿಬ್ಬಂದಿ




ಕೊರತೆ ಎದುರಾಗಿದೆ. ಹೆಸರಿಗೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು. ಆದರೆ ವೈದ್ಯಕೀಯ ಸಿಬ್ಬಂದಿಗಳೇ ಸಾಕಷ್ಟು ಇಲ್ಲ. ಸಾಕಷ್ಟು ಪ್ರಮಾಣದಲ್ಲಿ ವೈದ್ಯರು, ಸಿಬ್ಬಂದಿ ಇಲ್ಲದೆ ಬಡ ರೋಗಿಗಳ ಪರದಾಟ ಶುರುವಾಗಿದೆ. ಬೆಂಗಳೂರಿನ ವಿಕ್ಟೋರಿಯಾ ಅಸ್ಪತ್ರೆ, ವಾಣಿ ವಿಲಾಸ್, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ವೈದ್ಯಕೀಯ ಸಿಬ್ಬಂದಿಯೇ ಇಲ್ಲ. ರಾಷ್ಟ್ರೀಯ ವೈದ್ಯಕೀಯ ಆಯೋಗದ ಮಾನದಂಡದ ಪ್ರಕಾರ ಇರಬೇಕಾದಷ್ಟು ವೈದ್ಯರೇ ಈ ಆಸ್ಪತ್ರೆಗಳಲ್ಲಿ ಇಲ್ಲ. ರೋಗಿಗಳ ಸಂಖ್ಯೆಗೆ ಅನುಗುಣವಾಗಿ ವೈದ್ಯರ ಹುದ್ದೆಗಳನ್ನು ಸೃಷ್ಟಿಸಲಾಗಿಲ್ಲ. ಈಗಾಗಲೇ ಮಂಜೂರಾಗಿರುವ ಹುದ್ದೆಗಳು ಪೂರ್ಣ ಪ್ರಮಾಣದಲ್ಲಿ ಭರ್ತಿಯಾಗದ ಪರಿಣಾಮ ರೋಗಿಗಳ ದಟ್ಟಣೆಯ ನಿರ್ವಹಣೆಗೆ ಇರುವ ವೈದ್ಯರು ಪರದಾಡುವಂತಾಗಿದೆ.

ಪುಟ 2

# 4 ವರ್ಷದ ಮಗಳ ಹತ್ಯೆ 8 ತಿಂಗಳ ಬಳಿಕ ಮಲತಾಯಿ ಅರೆಸ್ಟ್!



**ಬೆಳಗಾವಿ:** ಮಗಳ ಹೊಟ್ಟೆಗೆ ಹೊಡೆದು ಹತ್ಯೆ ಮಾಡಿದ್ದ ಮಲತಾಯಿಯನ್ನು 8 ತಿಂಗಳ ಬಳಿಕ ಬೆಳಗಾವಿ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಯನ್ನು ಸಪ್ನಾ ನಾವಿ ಎಂದು ಗುರುತಿಸಲಾಗಿದೆ. ಆರೋಪಿ, 4 ವರ್ಷದ ಮಗಳ ಮೇಲೆ ಹಲ್ಲೆ ಮಾಡಿ ಹತ್ಯೆಗೈದು ತಾನೇನೂ ಮಾಡಿಲ್ಲ ಎಂಬಂತೆ ಇದ್ದಳು. ಮರಣೋತ್ತರ ಪರೀಕ್ಷೆಯಲ್ಲಿ ಮಹಿಳೆಯ ಕ್ರೌರ್ಯ ಬೆಳಕಿಗೆ ಬಂದಿದ್ದು, ಮಲತಾಯಿಯ ಅಸಲಿ ಬಣ್ಣ ಬಯಲಾಗಿದೆ. 2024ರ ಮೇ ತಿಂಗಳಲ್ಲಿ ಸಮೃದ್ಧಿ ರಾಯಣ್ಣ ನಾವಿ (4) ಸಾವನ್ನಪ್ಪಿದ್ದಳು. ಮಗುವಿನ ಅಜ್ಜ ಹಾಗೂ ಅಜ್ಜಿ ಸಪ್ನಾ ನಾವಿ ವಿರುದ್ಧ ಕೊಲೆ ಆರೋಪ ಮಾಡಿದ್ದರು. ಈ ಸಂಬಂಧ ಅಸಹಜ ಸಾವು ಪ್ರಕರಣ ದಾಖಲಾಗಿತ್ತು. ಬಳಿಕ ಮೃತಪಟ್ಟ ಮಗುವಿನ ಶವವನ್ನು ಬಿಮ್ಸ್ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಗಿತ್ತು. ಇದಾದ ಬೆನ್ನಲ್ಲೇ ಸಪ್ನಾ ನಾವಿ ನಿರೀಕ್ಷಣಾ ಜಾಮೀನು ಪಡೆದಿದ್ದಳು. ಸದ್ಯ ಮರಣೋತ್ತರ ಪರೀಕ್ಷೆ ವರದಿಯಲ್ಲಿ ಮಗುವಿನ ಹೊಟ್ಟೆಗೆ ಹೊಡೆದು, ಅಥವಾ ಒದ್ದು ಗಾಯಗೊಳಿಸಿ ಕೊಲೆ ಎಂದು ಸಾಬೀತಾಗಿದೆ. ಈ ಹಿನ್ನೆಲೆ ನಿರೀಕ್ಷಣಾ ಜಾಮೀನನ್ನು ರದ್ದು ಮಾಡುವಂತೆ ಪೊಲೀಸರು ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಿದ್ದರು. ಜಾಮೀನು ರದ್ದಾಗುತ್ತಿದ್ದಂತೆ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಸೇನೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ರಾಯಣ್ಣ, ಸಮೃದ್ಧಿ ಹೆತ್ತ ತಾಯಿ ಸಾವಿನ ನಂತರ ಎರಡನೇ ಮದುವೆ ಆಗಿದ್ದರು ಎಂದು ತಿಳಿದು ಬಂದಿದೆ.

# ಕಾರು ನಿಂತಲ್ಲೇ ನಿಂತಿರುತ್ತೆ, ಚಕ್ರ ಮಾತ್ರ ಮಾಯವಾಗಿರುತ್ತೆ!



**ಬೆಂಗಳೂರು:** ಪಾರ್ಕಿಂಗ್ ಸಮಸ್ಯೆ ಎಂದು ಹೇಳಿ ಬೆಂಗಳೂರಿನಲ್ಲಿ ನಿಮ್ಮ ಕಾರನ್ನು ಹೊರಗಡೆ ನಿಲ್ಲುಸುತ್ತಿದ್ದೀರಾ? ಹಾಗಾದ್ರೆ ಎಚ್ಚರವಾಗಿರಿ. ನಿಮ್ಮ ಕಾರು ನಿಂತಲ್ಲೇ ನಿಂತಿರುತ್ತದೆ ಆದರೆ ಕಾರಿನ ಚಕ್ರ ಮಾತ್ರ ಮಾಯವಾಗಿರುತ್ತದೆ. ಮನೆ ಮುಂದೆ ನಿಲ್ಲಿಸಿರುವ ಕಾರಿನ ಟಯರ್ ಕದಿಯುವ ಗ್ಯಾಂಗ್ ಈಗ ನಗರದಲ್ಲಿ ಹುಟ್ಟಿಕೊಂಡಿದೆ. ರಾತ್ರಿ ವೇಳೆ ಸ್ಕೂಟಿಯಲ್ಲಿ ಬರುವ ಕಳ್ಳರು ಟಯರ್ ಕದ್ದು ಪರಾರಿಯಾಗುತ್ತಿದ್ದಾರೆ. ಒಬ್ಬ ಟಯರ್ ಬಿಚ್ಚಿದರೆ ಇನ್ನೊಬ್ಬ ಅಕ್ಕ ಪಕ್ಕ ಯಾರು ಬರುತ್ತಿದ್ದಾರೆ ಎಂಬುದನ್ನು ಗಮನಿಸುತ್ತಿರುತ್ತಾನೆ. ಈಗಾಗಲೇ ಜಯನಗರ ಠಾಣೆಯಲ್ಲಿ ಎರಡು ಪ್ರತ್ಯೇಕ ಪ್ರಕರಣ ದಾಖಲಾಗಿದೆ. ಕಳ್ಳರು ಬಂದ ಕೆಲ ಕ್ಷಣದಲ್ಲಿ ಅಲ್ಲಿದ್ದ ಬೀದಿ ನಾಯಿಗಳು ಸ್ಥಳಕ್ಕೆ ಬಂದು ಬೊಗಳಲು ಆರಂಭಿಸಿದ್ದವು. ರಾತ್ರಿಯ ವೇಳೆ ಎಲ್ಲರೂ ನಿದ್ದೆಯಲ್ಲಿದ್ದ ಕಾರಣ ಯಾರಿಗೂ ವಿಚಾರ ಗೊತ್ತಾಗಲಿಲ್ಲ. ಟಯರ್ ಕದ್ದು ಪರಾರಿ ಆಗುತ್ತಿರುವ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಪ್ರಕರಣ ದಾಖಲಿಸಿಕೊಂಡು ಆರೋಪಿಗಳ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.

# ಚಾಲಕನ ನಿಯಂತ್ರಣ ತಪ್ಪಿ ಕಾರು ಪಲ್ಟಿ, 3ಸಾವು

**ವಿಜಯಪುರ:** ಚಾಲಕನ ನಿಯಂತ್ರಣ ತಪ್ಪಿ ಕಾರು ಪಲ್ಟಿಯಾಗಿ ಮೂವರು ಮೃತಪಟ್ಟ ಘಟನೆ ವಿಜಯಪುರ ತಾಲೂಕಿನ ಕನ್ನಾಳ ಕ್ರಾಸ್ ಬಳಿ ಎನ್‌ಎಚ್-50 ರಲ್ಲಿ ನಡೆದಿದೆ. ಘಟನೆಯಲ್ಲಿ ಕೆಲವರಿಗೆ ಗಂಭೀರ ಗಾಯಗಳಾಗಿವೆ. ಸ್ಥಳಕ್ಕೆ ವಿಜಯಪುರ ಗ್ರಾಮೀಣ ಠಾಣೆ ಪೊಲೀಸರ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಶವಗಳನ್ನು ಜಿಲ್ಲಾಸ್ಪತ್ರೆಗೆ ರವಾನಿಸಲಾಗಿದ್ದು, ಗಾಯಾಳುಗಳಿಗೆ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಅಪಘಾತದಲ್ಲಿ ಮೃತಪಟ್ಟವರನ್ನು ಅಭಿಷೇಕ್ ಸಾವಂತ್ (23), ವಿಜಯಕುಮಾರ್ ಔರಂಗಾಬಾದ್ (24), ರಾಜು ಬಿರಾದಾರ (23) ಎಂದು ಗುರುತಿಸಲಾಗಿದೆ. ರಾಜು ಕಾಂಬಳೆ, ಪೋಳ ಎಂಬವರು ಗಾಯಗೊಂಡಿದ್ದಾರೆ. ಈ ಐವರು ಕಾರಿನಲ್ಲಿ ಸೊಲ್ಲಾಪುರಕ್ಕೆ ಹೋಗಿದ್ದರು. ಅಲ್ಲಿಂದ ಮರಳಿ ಬರುವಾಗ ಅಪಘಾತ ಸಂಭವಿಸಿದೆ.

### ಕ್ರಿಮಿನಲ್ ಬ್ಯಾಗ್ರೌಂಡ್ ಬಗ್ಗೆ ಸಾಚಾ ಅಂತಾರೆ, ಸಮಯ ಬಂದಾಗ ಜನರ ಮುಂದೆ ಬಿಚ್ಚಿಡ್ತೀನಿ

# ರೆಡ್ಡಿಗೆ ರಾಮುಲು ವಾರ್ನಿಂಗ್



**ಬಳ್ಳಾರಿ:** ಆ ವ್ಯಕ್ತಿ ನನ್ನನ್ನ ಒಬ್ಬ ಕ್ರಿಮಿನಲ್ ರೀತಿ ಬಿಂಬಿಸಲು ಹೊರಟಿದ್ದಾರೆ. ನನ್ನ ಮೇಲೆ ಒಂದೇ ಒಂದು ಕ್ರಿಮಿನಲ್ ಕೇಸ್ ಇಲ್ಲ. ಆದ್ರೆ ನನ್ನ ವಿರುದ್ಧ ಆರೋಪ ಮಾಡಿದವರು ಕ್ರಿಮಿನಲ್ ಬ್ಯಾಗ್ರೌಂಡ್ ಬಗ್ಗೆ ಸಾಚಾರಂತೆ ಮಾತಾಡ್ತಾರೆ. ಆ ವ್ಯಕ್ತಿಯ ದಾಖಲೆಗಳು ನನ್ನ ಬಳಿಯಿದೆ. ಸಮಯ ಬಂದಾಗ ಸಾಕ್ಷಿ ಸಮೇತ ಜನರ ಮುಂದೆ ಬಿಚ್ಚಿಡ್ತೀನಿ ಅಂತ ಮಾಜಿ ಸಚಿವ ಶ್ರೀರಾಮುಲು ಅವರು ಪರೋಕ್ಷವಾಗಿ ಜನಾರ್ದನ ರೆಡ್ಡಿ ಅವರಿಗೆ ಎಚ್ಚರಿಕೆ ಕೊಟ್ಟರು.

ಬಳ್ಳಾರಿಯ ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿ ನಡೆಸಿದ ಮಾಜಿ ಸಚಿವ ಶ್ರೀರಾಮುಲು ಜನಾರ್ದನ ರೆಡ್ಡಿ ಆರೋಪಗಳಿಗೆ ಕೌಂಟರ್ ಕೊಟ್ಟಿದ್ದಾರೆ. ಇದೇ ವೇಳೆ ಡಿಕೆ ಶಿವಕುಮಾರ್, ಸತೀಶ್ ಜಾರಕಿಹೊಳಿಯನ್ನು ಮಣಿಸಲು ಹೇಗಾದರೂ ಮಾಡಿ ಶ್ರೀರಾಮುಲು ಅವರನ್ನು ಪಕ್ಷಕ್ಕೆ ಕರೆದುಕೊಳ್ಳುವ ಸಂಬಂಧ ಮಾತುಕತೆ ನಡೆಸುತ್ತಿದ್ದಾರೆ ಎಂಬ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ್ದಾರೆ. ಸತೀಶ್ ಜಾರಕಿಹೊಳಿಯನ್ನ ಮಟ್ಟ ಹಾಕೋದಕ್ಕೆ ನಾನ್ಯಾರು? ಕಾಂಗ್ರೆಸ್ ನಲ್ಲೂ ವಾಲ್ಮೀಕಿ ಸಮುದಾಯದ ನಾಯಕರಿದ್ದಾರೆ. ನಾನು ಸೋತಿದ್ದರೂ ನನ್ನ ಪಾರ್ಟಿಯಲ್ಲಿ ಪ್ರಬಲವಾಗಿದ್ದೇನೆ. ಸತೀಶ್ ಅವರನ್ನ ತೊಂದ್ರೆ ಕೊಡೋದಕ್ಕೆ ಡಿಕೆಶಿ ನನ್ನ ಬಳಕೆ ಮಾಡಿಕೊಳ್ತಾರೆ ಅನ್ನೋದು ಸುಳ್ಳು ಸೃಷ್ಟಿ ಎಂದು ಸ್ಪಷ್ಟನೆ ನೀಡಿದ್ದಾರೆ.

ಮೊನ್ನೆ ನಡೆದಂತ ಕೋರ್ ಕಮಿಟಿಯಲ್ಲಿ ಉಸ್ತುವಾರಿ ರಾಧಾ ಮೋಹನ್ ಅಗರವಾಲ್ ಸಭೆ ಕರೆದಿದ್ರು. ಸಂಜೆ 7 ಗಂಟೆಗೆ ಸಭೆ ಆರಂಭವಾಗಿತ್ತು. ಆ ಬಳಿಕ ಬೇರೆ ಬೇರೆ ವಿಚಾರ ಜಿಲ್ಲಾ ಅಧ್ಯಕ್ಷರು, ಸಂಘಟನೆ ವಿಚಾರಗಳ ಬಗ್ಗೆ ಚರ್ಚೆ ಆಯಿತು. ಈ ವೇಳೆ ಒಬ್ಬರು ನನ್ನತ್ತ ಅಸಹ್ಯವಾಗಿ ನೋಡಿ ಸಂಡೂರು ಸೋಲಲು ನೀನೇ ಕಾರಣ ಅಂತ ಆರೋಪ ಮಾಡಿದ್ರು. ನಾನು ಇದು ಸರಿ ಅಲ್ಲ ಎಂದು ಹೇಳಿದೆ. ಶಿಗ್ಗಾಂವಿ ಜೊತೆಗೆ ಸಂಡೂರಿನಲ್ಲೂ ಕೆಲಸ ಮಾಡಿದ್ದೇನೆ ಅಂತ ಹೇಳಿದೆ. ಈ ರೀತಿ ಹೇಳಿದ್ರೆ ಕಳಂಕ ಹೊತ್ತುಕೊಂಡಂತೆ ಆಗುತ್ತದೆ ಅಂತ ಹೇಳಿದೆ. ಅದಕ್ಕೆ ಆ ವ್ಯಕ್ತಿಗೆ ನೀವು ಸರಿಯಿಲ್ಲ, ಡಬಲ್ ಗೇಮ್ ಆಡ್ತೀರಿ ಎಂದು ಗಟ್ಟಿಯಾಗಿ ವಾದಿಸಿದೆ ಎಂದರು.

ಮುಂದುವರಿದು ಕಳಂಕ ಇಲ್ಲದೇ ರಾಜಕಾರಣ ಮಾಡಿಕೊಂಡು ಬಂದಿದ್ದೇನೆ. ಇದನ್ನ ಸ್ಪಷ್ಟವಾಗಿ ಹೇಳಿದೆ, ನನಗೆ ಅಪಮಾನ ಮಾಡ್ತಿದ್ದೀರಿ. ಎರಡು ಬಾರಿ ಸೋತಿದ್ದೇನೆ. ಗಾಯದ ಮೇಲೆ ಬರೆ ಎಳೆಯಬೇಡಿ ಎಂದು ಸಭೆಯಿಂದ ಎದ್ದು ಹೋಗಲು ಮುಂದಾದೆ, ಆಗ ನಮ್ಮ ನಾಯಕರು ಇದು ಶೋಭೆಯಲ್ಲ ಎಂದು ನನ್ನ ಸಮಾಧಾನ ಮಾಡಿದ್ರು ಎಂದು ಹೇಳಿದರು.

ರಾಜ್ಯಾಧ್ಯಕ್ಷರು ನನ್ನ ರಕ್ಷಣೆಗೆ ನಿಲ್ಲಬೇಕಿತ್ತು. ಅದ್ರೆ ಸಂಪೂರ್ಣ ಸೋಲು ನಿನ್ನಿಂದಲೇ ಆಗಿದೆ ಎಂದಾಗಲೂ ಸುಮ್ಮನಿದ್ರು, ರಕ್ಷಣೆಗೆ ಬರಲಿಲ್ಲ. ನಾನೇನು ಮಾಡಲಿ ಎಂದು ರಾಜ್ಯಾಧ್ಯಕ್ಷ ಹೇಳಿದ್ರು. ಆಗ ಸದಾನಂದಗೌಡ ಮಾತಾಡಿದ್ರು, ನಾನೇ ಸಂಡೂರಿಗೆ ಹೋಗಿ ಬಂದಿದ್ದೇನೆ ಅಂದ್ರು. ಆಗ ಉಸ್ತುವಾರಿ ತಮ್ಮ ಮಾತು ವಾಪಾಸ್ ತಗೋತೀನಿ ಅಂದ್ರು. ಜನಾರ್ದನರೆಡ್ಡಿ ಮಾತು ಕೇಳಿಕೊಂಡು, ಸುಳ್ಳಿನ ಕೋಟೆ ಕಟ್ಟಿದ್ದಾರೆ. ಬಂಗಾರು ಹನುಮಂತು ಮಾತು ಕೇಳಿ ಆರೋಪ ಮಾಡಿದ್ದಾರೆ ಎಂದು ನೇರಾ ನೇರಾ ಆರೋಪ ಮಾಡಿದರು.

ಅಲ್ಲೇ ಮಾಧ್ಯಮಗಳಿಗೆ ಮಾತಾಡೋದು ಬೇಡ ಅಂದಾಗ ನಾನು ವಾಪಸ್ ಬಂದೆ. ಈಗ ಮಾಧ್ಯಮದಲ್ಲಿ ಬಂದಾಗ ನಾನು ಮಾತನಾಡಿದೆ. ನನ್ನ ವಿರುದ್ಧ ಹೇಳಿಕೆ ನೀಡಿದಾಗಲೂ ನಾನು ಮಾತನಾಡದೇ ಇದ್ದರೆ ತಪ್ಪಿತಸ್ಥನಾಗುತ್ತೇನೆ. ಏಕೆಂದರೆ ನನ್ನ ಪಕ್ಷ ನನಗೆ ತಾಯಿ ಇದ್ದಂತೆ, ತಾಯಿಗೆ ದ್ರೋಹ ಮಾಡೋ ಕೆಲಸ ಮಾಡಲ್ಲ, ಆ ಸಂಸ್ಕೃತಿಯನ್ನ ನಮ್ಮ ಹಿರಿಯರೂ ನನಗೆ ಹೇಳಿಕೊಟ್ಟಿಲ್ಲ ಎಂದು ಭಾವುಕರಾದರು.

ಇನ್ನೂ ಪಕ್ಷ ಬಿಡ್ತಾರಾ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಶ್ರೀರಾಮುಲು, ನನಗೆ ತುಂಬ ಜನ ಈ ಪ್ರಶ್ನೆ ಕೇಳಿದ್ರು, ನಾನು ಪಕ್ಷ ತೊರೆಯಲ್ಲ. ಪ್ರಧಾನಿಗಳನ್ನ, ವರಿಷ್ಠರನ್ನ ಭೇಟಿ ಮಾಡ್ತೀನಿ ಅಂತ ಹೇಳಿದೆ. ಪ್ರಧಾನಿ, ಅಮಿತ್ ಶಾ ಅವರ ವಿಶ್ವಾಸ ಕಳೆದುಕೊಳ್ಳಲ್ಲ ಎಂದು ಹೇಳಿದೆ. ಎಲ್ಲಾ ಕೇಂದ್ರ ನಾಯಕರಿಗೆ ತಿಳಿಸ್ತೇನೆ ಎಂದು ಹೇಳಿದೆ. ಸುಳ್ಳು ಬಲಾಢ್ಯರ ಕೈಯಲ್ಲಿದ್ದಾಗ ಅದು ಸತ್ಯ ಆಗ್ತದೆ. ಸುಳ್ಳಿನ ಮುಂದೆ ಸತ್ಯ ಸೋಲುತ್ತೆ ಎಂದು ಕಳವಳ ವ್ಯಕ್ತಪಡಿಸಿದರು.

**ಈತನೇ ಗೆಲ್ಲಿಸಿಬಿಟ್ನಾ?:** ನಮ್ಮದು ಪೊಲಿಟಿಕಲ್ ಫ್ಯಾಮಿಲಿ, ನಾನು ಹಾದಿ-ಬೀದಿಯಿಂದ ಬಂದವನಲ್ಲ. ನಮ್ಮ ಮಾವನವರಿಂದ, ಅಜ್ಜಿ ಕಾಲದಿಂದಲೂ ರಾಜಕೀಯದಲ್ಲಿದ್ದೀನಿ. ಹೋರಾಟದಿಂದ ಮೇಲೆ ಬಂದಿದ್ದೇನೆಯೇ ಹೊರತು, ಯಾರದ್ದೋ ಕೃಪಾಕಟಾಕ್ಷದಿಂದ ಮೇಲೆ ಬಂದಿಲ್ಲ. ನಮಗೆ ಪಕ್ಷದ ಕ್ರೆಡಿಬಲಿಟಿ ಮುಖ್ಯವೇ ಹೊರತು. ಸೋಲು-ಗೆಲುವಲ್ಲ. ಮೊಣಕಾಲ್ಮೂರಿನಲ್ಲಿ ಮ್ಯಾಜಿಕ್ ಮಾಡಿ 43,000 ವೋಟ್‌ನಿಂದ ಗೆಲ್ಲಿಸಿದ್ದೀನಿ ಎಂದು ಹೇಳಿದ್ದಾರೆ. ಆಗ ಪಕ್ಷ ಎರಡೂ ಕಡೆ ನಿಲ್ಲಲು ಅವಕಾಶ ಮಾಡಿಕೊಟ್ಟಿತು. ಏನೂ ಇಲ್ಲದೇ ಈತ ಮ್ಯಾಜಿಕ್ ಮಾಡಿ ಗೆಲ್ಲಿಸಿಬಿಟ್ನಾ? ಈತನೇ ಗೆಲ್ಲಿಸಿಬಿಟ್ನಾ? ಯಾರೂ ಯಾರನ್ನೂ ಗೆಲ್ಲಿಸಿಲ್ಲ, ಸೋಲಿಸಿಲ್ಲ. 2018ರಲ್ಲಿ ರಾಮುಲು ಅಲ್ಲಿ ನಿಂತಿದ್ದಕ್ಕೆ 6 ಕ್ಷೇತ್ರದಲ್ಲಿ ಗೆದ್ವಿ. ರಾಮುಲು ಪ್ರಭಾವದಿಂದಲೇ ಅಲ್ಲಿ ಅಷ್ಟು ಸ್ಥಾನ ಬಂದ್ವು ಎಂದು ಹೆಸರು ಹೇಳದೆಯೇ ಜನಾರ್ದನ ರೆಡ್ಡಿ ವಿರುದ್ಧ ಕಿಡಿ ಕಾರಿದರು.

ಎಲ್ಲದಕ್ಕಿಂತ ಸ್ವಾಭಿಮಾನ ದೊಡ್ಡದು ಅದಕ್ಕೆ ನಾನು ಪಾರ್ಟಿ ಬಿಡೀನಿ ಅಂತ ಹೇಳಿದ್ದೆ. ಜನಾರ್ದನರೆಡ್ಡಿಗೆ ಸುಪ್ರೀಂ ಕೋರ್ಟ್ ಬಳ್ಳಾರಿಗೆ ನಿಷೇಧ ಹೇರಿದಾಗ ಪಾರ್ಟಿ ಬೆಳೆಸಿದ್ದು ನಾನು. ನು 6 ಬಾರಿ ಶಾಸಕನಾಗಿದ್ದೇನೆ, ಜನಾರ್ದನರೆಡ್ಡಿ ಒಂದು ಬಾರಿ ಆಗಿದ್ದಾನೆ. ಹಿಂದೆ ಎನ್‌ಡಿಎ ಸರ್ಕಾರ ಇದ್ದಾಗ, ನಾನು ಸಂದನಾಗಿದ್ದೆ. ಆಗ ರೆಡ್ಡಿ ಜೈಲಿನಲ್ಲಿದ್ದರು. ಜೈಲಿನಲ್ಲಿದ್ದಾಗ ಅವರನ್ನ ಹೊರ ತರೋದಕ್ಕೆ ಸಾಕಷ್ಟು ಪ್ರಯತ್ನಿಸಿದೆ. ಎಲ್ಲರೂ ಸೇರಿ ಪಾರ್ಟಿ ಕಟ್ಟಿದ್ದೇವೆ. ಜನಾರ್ದನರೆಡ್ಡಿ 2018ರಲ್ಲಿ ಜೈಲಿನಿಂದ ಮೊದಲ ಬಾರಿಗೆ ಬಳ್ಳಾರಿಗೆ ಬಂದಿದ್ರು. ಆಗ ನಾನು ಮಂತ್ರಿ ಇದ್ದೆ. ಆಗ 25,000 ಜನರನ್ನ ಸೇರಿಸಿ ಭವ್ಯ ಸ್ವಾಗತ ಮಾಡಿ ಕರೆತಂದಿದ್ದು ನಾನು. ಮೊನ್ನೆ ಬಂದಾಗ ಅವರನ್ನ ಸ್ವಾಗತಿಸಲು ಬಂದಿಲ್ಲ ಅನ್ನೋದು ಕೋಪ ಎಂದು ವ್ಯಂಗ್ಯವಾಡಿದ್ರು.

## ಸತೀಶ್ ಜಾರಕಿಹೊಳಿಯನ್ನು ಮಣಿಸಲು ಡಿಕೆಶಿಯಿಂದ ಶ್ರೀ ರಾಮುಲು ಆಪರೇಷನ್

# ರೆಡ್ಡಿ ಬಾಂಬ್

**ಬೆಂಗಳೂರು:** ಜನಾರ್ದನ ರೆಡ್ಡಿ ಮತ್ತು ಶ್ರೀರಾಮುಲು ಮಧ್ಯೆ ನಡೆಯುತ್ತಿರುವ ಕಿತ್ತಾಟಕ್ಕೆ ಈಗ ಡಿಕೆ ಶಿವಕುಮಾರ್ ಹೆಸರು ಎಂಟ್ರಿಯಾಗಿದೆ.



ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಜನಾರ್ದನ ರೆಡ್ಡಿ, ಡಿಕೆ ಶಿವಕುಮಾರ್, ಸತೀಶ್ ಜಾರಕಿಹೊಳಿಯನ್ನು ಮಣಿಸಲು ಹೇಗಾದರೂ ಮಾಡಿ ಶ್ರೀರಾಮುಲು ಅವರನ್ನು ಪಕ್ಷಕ್ಕೆ ಕರೆದುಕೊಳ್ಳುವ ಸಂಬಂಧ ಮಾತುಕತೆ ನಡೆಸುತ್ತಿದ್ದಾರೆ ಎಂದು ಬಾಂಬ್ ಸಿಡಿಸಿದ್ದಾರೆ.

ಬುಧವಾರ ಮಾಧ್ಯಮಗಳ ಜೊತೆ ಮಾತನಾಡಿದ್ದ ಶ್ರೀರಾಮುಲು ನಾನು ಪಕ್ಷ ಬಿಡಲು ಸಿದ್ಧ ಎಂದು ಹೇಳಿದ್ದರು. ಈಗ ಜನಾರ್ದನ ರೆಡ್ಡಿ ಬಾಂಬ್ ಸಿಡಿಸುವ ಮೂಲಕ ಶ್ರೀರಾಮುಲು ಕಾಂಗ್ರೆಸ್ ಹೋಗುವ ಸುಳಿವನ್ನು ನೀಡಿದ್ದಾರೆ.

ಶ್ರೀರಾಮುಲು ಪಕ್ಷ ಬಿಡುವುದು ಅವರ ವೈಯಕ್ತಿಕ ವಿಚಾರ. ಹೋಗುವುದಾದರೆ ಅವರು ಹೋಗಲಿ. ಶ್ರೀರಾಮುಲು ಪಕ್ಷ ಬಿಟ್ಟು ಹೋಗುವುದು ಹೊಸದೇನಲ್ಲ. ಈ ಹಿಂದೆ ಬಿಎಸ್‌ಆರ್ ಪಕ್ಷ ಮಾಡುವಾಗಲೇ ನಾನು ಬಿಜೆಪಿ ಪಕ್ಷ ಬಿಡಬೇಡ ಅಂತ ಹೇಳಿದ್ದೆ. ಈ ಸಂದರ್ಭದಲ್ಲಿ ಸಿಬಿಐ ನನ್ನನ್ನು ಬಂಧಿಸುತ್ತದೆ, ನಮಗೆ ಬಹಳ ಕಷ್ಟ ಇದೆ. ಹೀಗಾಗಿ ಸುಮ್ಮನಿದ್ದು ಪಕ್ಷ ತೊರೆಯಬೇಡ ಎಂದು ಸಲಹೆ ನೀಡಿದ್ದೆ. ರಾಜಕೀಯ ಸಂಕಷ್ಟದ ಸಮಯದಲ್ಲಿ ನನ್ನ ಮಾತನ್ನು ಕೇಳಲಿಲ್ಲ. ಈಗ ಯಾರದ್ದೋ ಮಾತು ಕೇಳಿ ಬಿಜೆಪಿ ಬಿಡುವುದಾದರೆ ಬಿಡಲಿ. ನನ್ನ ಮೇಲೆ ಆರೋಪ ಮಾಡಿ ಹೋಗುವುದು ಬೇಡ. ಬಳ್ಳಾರಿ ಭಾಗದಲ್ಲಿ ಅವರು ಪಕ್ಷ ಬಿಡುವ ಬಗ್ಗೆ ಚರ್ಚೆ ನಡೆಯುತ್ತಿದೆ ಎಂದು ಹೇಳಿದರು.

ಜನಾರ್ದನ ರೆಡ್ಡಿ ಹೇಳುವಂತೆ ಶ್ರೀರಾಮುಲು ಕಾಂಗ್ರೆಸ್‌ಗೆ ಹೋಗುತ್ತಾರಾ? ಕಾಂಗ್ರೆಸ್‌ನಲ್ಲಿ ಸತೀಶ್ ಜಾರಕಿಹೊಳಿ ಪರ್ಯಾಯವಾಗಿ ಶ್ರೀರಾಮುಲು ಬೆಳೆಸಲು ಡಿಕೆಶಿ ಸಂಚು ರೂಪಿಸಿದ್ದಾರಾ ಎಂಬ ಪ್ರಶ್ನೆಗೆ ಡಿಕೆ ಶಿವಕುಮಾರ್ ಮತ್ತು ಶ್ರೀರಾಮುಲು ಈಗ ಉತ್ತರ ಹೇಳಬೇಕಿದೆ.

# ನೇತಾಜಿ ಸುಭಾಷ್ ಚಂದ್ರ ಬೋಸ್ ಭಾರತವನ್ನು ಸ್ವತಂತ್ರಗೊಳಿಸಲು ಹೋರಾಡಿದ ಅಪ್ರತಿಮ ದೇಶಭಕ್ತ



**ಬೆಂಗಳೂರು:** ಭಾರತವನ್ನು ಬ್ರಿಟೀಷರ ಆಳ್ವಿಕೆಯಿಂದ ಮುಕ್ತಗೊಳಿಸಿ, ಭಾರತೀಯರೆಲ್ಲರೂ ಬ್ರಿಟೀಷರ ಗುಲಾಮಗಿರಿಯಿಂದ ಸ್ವತಂತ್ರರಾಗ ಬೇಕೆನ್ನುವುದು ಎಂಬ ಹೆಗ್ಗುರಿಯಿಂದ ಹೋರಾಡಿದ ಸುಭಾಷ್ ಚಂದ್ರ ಬೋಸ್‌ರವರು ದೇಶಕ್ಕಾಗಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ಅಪ್ರತಿಮ ದೇಶಭಕ್ತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಜನ್ಮ ದಿನದ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ಇಂದು ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ 128 ನೇ ಜನ್ಮ ದಿನ. ದೇಶದ ಬಗ್ಗೆ ಅಪಾರ ಗೌರವಾಭಿಮಾನ ಹೊಂದಿದ್ದ ಮಹಾನ್ ದೇಶಭಕ್ತ. ಈಗಿನ ಐಎಎಸ್ ನಂತೆ ಬ್ರಿಟೀಷರ ಕಾಲದಲ್ಲಿದ್ದ ಐಸಿಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದರು. ಆದರೆ ತಮ್ಮ ಉಜ್ವಲ ಭವಿಷ್ಯವನ್ನು ತ್ಯಾಗ ಮಾಡಿ ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಬದುಕನ್ನು ಮೀಸಲಾಗಿಟ್ಟರು. ಎರಡು ಬಾರಿ ಕಾಂಗ್ರೆಸ್‌ನ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು. ಮಹಾತ್ಮಾ ಗಾಂಧಿಯವರು ಪ್ರತಿಪಾದಿಸುತ್ತಿದ್ದ ಸತ್ಯ ಹಾಗೂ ಅಹಿಂಸೆಯ ಮಾರ್ಗದಲ್ಲಿ ನಡೆದು ಭಾರತ ಸ್ವಾತಂತ್ರ್ಯ ಹೊಂದುವುದು ಕಷ್ಟಸಾಧ್ಯ ಎಂಬುದು ಸುಭಾಷರ ಅಭಿಪ್ರಾಯವಾಗಿತ್ತು. ಆದ್ದರಿಂದ ಶಸ್ತ್ರಾಸ್ತ್ರಗಳನ್ನು ಬಳಸಿಯೇ ಬ್ರಿಟೀಷರನ್ನು ಭಾರತದಿಂದ ಹೊರದೂಡುವ ಉದ್ದೇಶದಿಂದ ಐಎನ್‌ಎ (ಇಂಡಿಯನ್ ನ್ಯಾಷನಲ್ ಆರ್ಮಿ) ಸ್ಥಾಪಿಸಿದರು. ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಜನ್ಮದಿಂದು ಅವರ ಜೀವನ-ಸಾಧನೆಗಳನ್ನು ಸ್ಮರಿಸುವ ಜೊತೆಗೆ ಅವರ ಆದರ್ಶಗಳ ಹಾದಿಯಲ್ಲಿ ನಡೆಯುವ ಸಂಕಲ್ಪ ಮಾಡಬೇಕಿದೆ. ಈ ದೆಸೆಯಲ್ಲಿ ಸರ್ಕಾರ ಈ ಮಹಾನ್ ನಾಯಕನಿಗೆ ಗೌರವ ಸಲ್ಲಿಸಿದೆ ಎಂದರು.

ದಾವೋಸ್ ಶೃಂಗಸಭೆಯಲ್ಲಿ ಭಾಗವಹಿಸುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಈ ಸಾಲಿನ ಆಯವ್ಯಯದ ಸಿದ್ಧತೆಯಲ್ಲಿ ತೊಡಗಿಸಿಕೊಳ್ಳಬೇಕಾಗಿರುವುದರಿಂದ 2025ರ ದಾವೋಸ್ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿದರು.

# ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಅಶ್ಲೀಲ ಪದ ಬಳಕೆ ಆರೋಪ: ಸಿಟಿ ರವಿಗೆ ಹೈಕೋರ್ಟ್ ರಿಲೀಫ್

**ಬೆಂಗಳೂರು:** ವಿಧಾನಪರಿಷತ್ತಿನಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಅವಾಚ್ಯ ಶಬ್ದಗಳಿಂದ ನಿಂದಿಸಿದ ಆರೋಪದಲ್ಲಿ ಬಿಜೆಪಿ ಎಂಎಲ್‌ಸಿ ಸಿ.ಟಿ.ರವಿಗೆ ಕರ್ನಾಟಕ ಹೈಕೋರ್ಟ್ ಗುರುವಾರ ಬಿಗ್ ರಿಲೀಫ್ ನೀಡಿದೆ. ಸಿ.ಟಿ.ರವಿ ವಿರುದ್ಧ ಜನವರಿ 30 ರವರೆಗೆ ಬಲವಂತದ ಕ್ರಮ ಕೈಗೊಳ್ಳದಂತೆ ಹೈಕೋರ್ಟ್ ಸೂಚಿಸಿದೆ.



ಶಾಸಕರ ನಡುವೆ ಸದನದಲ್ಲಿ ನಡೆದ ವಿಚಾರಕ್ಕೆ ವಿನಾಯಿತಿ ಇದೆ ಎಂದು ಸಿ.ಟಿ.ರವಿ ಪರವಾಗಿ ಹಿರಿಯ ವಕೀಲ ಸಿವಿ ನಾಗೇಶ್ ವಾದ ಮಂಡಿಸಿದರು. ಇದಕ್ಕೆ ಪ್ರತಿಯಾಗಿ ಕ್ರಿಮಿನಲ್ ಕೃತ್ಯಗಳಿಗೆ ವಿನಾಯಿತಿ ಇಲ್ಲವೆಂದು ಎಸ್‌ಪಿಪಿ ಬಿಎ ಬೆಳ್ಳಿಯಪ್ಪ ವಾದ ಮಂಡಿಸಿದರು.

ತನಿಖೆ ವ್ಯಾಪ್ತಿಯ ಪ್ರಶ್ನೆಯನ್ನು ನಾವು ತೀರ್ಮಾನಿಸಬೇಕಿದೆ ಎಂದ ಹೈಕೋರ್ಟ್, ಬಲವಂತದ ಕ್ರಮ ಕೈಗೊಳ್ಳದಂತೆ ಆದೇಶ ನೀಡಿದೆ. ಸಿಟಿ ರವಿ ವಾಯ್ಸ್ ಸ್ಯಾಂಪಲ್ ತೆಗೆದುಕೊಳ್ಳಬೇಕಿದೆ ಎಂದು ಎಸ್‌ಪಿಪಿ ವಾದ ಮಂಡಿಸಿದರು. ಆದಾಗ್ಯೂ ಮುಂದಿನ ಪ್ರಶ್ನೆ ಬಗ್ಗೆ ತೀರ್ಮಾನಿಸುವವರೆಗೆ ಕಾಯುವಂತೆ ಹೈಕೋರ್ಟ್ ಸೂಚನೆ ನೀಡಿತು.

**ಏನಿದು ಪ್ರಕರಣ?:** ಬೆಳಗಾವಿ ಅಧಿವೇಶನದ ಸಂದರ್ಭದಲ್ಲಿ ವಿಧಾನ ಪರಿಷತ್ತಿನಲ್ಲಿ ಸಿ.ಟಿ ರವಿ ಸಚಿವೆ ಹೆಬ್ಬಾಳ್ಕರ್ ಅವರನ್ನು ಅಶ್ಲೀಲವಾಗಿ ನಿಂದಿಸಿದ್ದಾರೆ ಎಂದು ಆರೋಪವಿದೆ. ಆದರೆ ಈ ಆರೋಪವನ್ನು ಸಿ.ಟಿ ರವಿ ಅಲ್ಲಗಳೆದಿದ್ದಾರೆ. ಮತ್ತೊಂದೆಡೆ, ಅಶ್ಲೀಲವಾಗಿ ನಿಂದಿಸಿರುವುದು ಸರ್ಕಾರಿ ಟಿವಿಯಲ್ಲಿ ದಾಖಲಾಗಿರುವುದು ಇತ್ತೀಚೆಗೆ ದೃಢಪಟ್ಟಿದೆ. ಆದರೆ ಅದು ಸಿಟಿ ರವಿ ಅವರ ಧ್ವನಿಯೇ ಎಂಬುದನ್ನು ಖಚಿತಪಡಿಸಲು ಅವರ ವಾಯ್ಸ್ ಸ್ಯಾಂಪಲ್ ಕೋರಲಾಗಿತ್ತು. ವಾಯ್ಸ್ ಸ್ಯಾಂಪಲ್ ನೀಡಲು ಅವರು ನಿರಾಕರಿಸಿದ್ದರು. ಈ ವಿಚಾರದ ಬಗ್ಗೆಯೂ ಹೈಕೋರ್ಟ್‌ನಲ್ಲಿ ವಾದ ಪ್ರತಿವಾದ ನಡೆಯುತ್ತಿದೆ. ಪ್ರಕರಣದ ತನಿಖೆಯನ್ನು ಸಿಐಡಿ ನಡೆಸುತ್ತಿದೆ.

ಘಟನೆ ರಾಜ್ಯದಾದ್ಯಂತ ರಾಜಕೀಯ ಕೋಲಾಹಲಕ್ಕೆ ಕಾರಣವಾಗಿತ್ತು. ಸಿ.ಟಿ.ರವಿ ಅವರನ್ನು ಬಂಧಿಸಿದ್ದ ಬೆಳಗಾವಿ ಪೊಲೀಸರು ರಾತ್ರಿ ಇಡೀ ಅವರನ್ನು ಪೊಲೀಸ್ ವಾಹನದಲ್ಲಿ ಸುತ್ತಾಡಿಸಿದ್ದರು. ಈ ವಿಚಾರವಾಗಿ ಸರ್ಕಾರದ ವಿರುದ್ಧ ಬಿಜೆಪಿ ತೀವ್ರ ವಾಗ್ದಾಳಿ ನಡೆಸಿತ್ತು. ಸಿ.ಟಿ ರವಿ ಅವರನ್ನು ಎನ್‌ಕೌಂಟರ್ ಮಾಡಲು ಸರ್ಕಾರ ಸಂಚು ಹೂಡಿತ್ತು ಎಂದು ಕೆಲವು ಮಂದಿ ಬಿಜೆಪಿ ನಾಯಕರು ಗಂಭೀರ ಆರೋಪ ಮಾಡಿದ್ದರು.

# ಕುರಿ ವ್ಯಾಪಾರಿಗಳಿಂದ 4 ಲಕ್ಷ ಕಿತ್ತು ಪರಾರಿ 21 ಪ್ರಕರಣದಲ್ಲಿದ್ದ 3 ಆರೋಪಿಗಳು ಅರೆಸ್ಟ್



**ಯಾದಗಿರಿ:** ಕುರಿ ವ್ಯಾಪಾರಿಗಳನ್ನು ಅಡ್ಡಗಟ್ಟಿ 4 ಲಕ್ಷ ರೂ. ಕಿತ್ತುಕೊಂಡು ಪರಾರಿಯಾಗಿದ್ದ ಡಕಾಯಿತರ ಗುಂಪಿನ ಮೂವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಗಳನ್ನು ಯಲ್ಲಪ್ಪ ಕುಂಚಿಕೊರವರ್, ಕೃಷ್ಣ ಕುಂಚಿಕೊರವರ್, ಸಿದ್ದರಾಮಪ್ಪ ಕುಂಚಿಕೊರವರ್ ಎಂದು ಗುರುತಿಸಲಾಗಿದ್ದು, ಇನ್ನುಳಿದ 7 ಆರೋಪಿಗಳನ್ನು ಬಂಧಿಸುವಲ್ಲಿ ಪೊಲೀಸರು ನಿರತರಾಗಿದ್ದಾರೆ.

ಈ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜ.3 ರಂದು ಚಟ್ನಳ್ಳಿ ಕ್ರಾಸ್ ಬಳಿ ತೆಲಂಗಾಣದ ಸೂರ್ಯಪೇಟದಲ್ಲಿ ಕುರಿ ವ್ಯಾಪಾರಿಗಳನ್ನು ಅಡ್ಡಗಟ್ಟಿ ಹಲ್ಲೆ ಮಾಡಿ 4 ಲಕ್ಷ ಕಿತ್ತುಕೊಂಡು ಪರಾರಿಯಾಗಿದ್ದರು. ಜೊತೆಗೆ ಈ ಡಕಾಯಿತರ ಗುಂಪು ರಾಜ್ಯದಾದ್ಯಂತ 21 ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ. 7 ಆರೋಪಿಗಳನ್ನು ಆದಷ್ಟು ಬೇಗ ಬಂಧಿಸಲಾಗುವುದು ಎಂದು ಮಾಹಿತಿ ನೀಡಿದರು.

ಆರೋಪಿಗಳ ಪತ್ತೆಗಾಗಿ ತಂಡ ರಚಿಸಲಾಗಿದ್ದು, ಈಗಾಗಲೇ ಬಂಧಿತ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ. ಬಾಗಲಕೋಟೆ, ಗದಗ, ರಾಯಚೂರು, ವಿಜಯನಗರ, ಕೊಪ್ಪಳ, ಬೆಳಗಾವಿ, ವಿಜಯಪುರ, ಧಾರವಾಡ ಜಿಲ್ಲೆಗಳಲ್ಲಿ ಈ ಆರೋಪಿಗಳ ವಿರುದ್ಧ ಕಳ್ಳತನ, ಪೊಲೀಸರ ಮೇಲೆ ಹಲ್ಲೆ, ಡಕಾಯಿತಿ, ಮನೆಗಳ್ಳತನ, ವಾಹನ ಕಳ್ಳತನ ಹೀಗೆ 21 ಪ್ರಕರಣಗಳು ದಾಖಲಾಗಿದ್ದವು ಎಂದು ತಿಳಿಸಿದರು.

**ಘಟನೆ ಏನು?:** ಜ.3ರಂದು ಬೆಳಗಿನ ಜಾವ 3:30ರ ಸುಮಾರಿಗೆ ಯಾದಗಿರಿ-ಶಹಾಪುರ ರಸ್ತೆಯ ಗುಂಡಳ್ಳಿ ದಾಟಿದ ನಂತರ ಚಟ್ನಳ್ಳಿ ಕ್ರಾಸ್ ಬಳಿ ನಾಗರಾಜ, ನವೀನ್ ಮತ್ತು ಸಾಯಿಕೃಷ್ಣ ಪಿಕಪ್ ವಾಹನದಲ್ಲಿ ಕುರಿಗಳನ್ನು ಶಹಾಪುರಕ್ಕೆ ತೆಗೆದುಕೊಂಡು ಹೋಗುತ್ತಿದ್ದರು. ಈ ವೇಳೆ ಡಕಾಯಿತರ ಗುಂಪು ಏಕಾಏಕಿ ವಾಹನ ಅಡ್ಡಗಟ್ಟಿ ನಿಲ್ಲಿಸಿ ಗಾಜಿನ ಬಾಟಲಿಗಳನ್ನು ಎಸೆದು ಹಲ್ಲೆ ಮಾಡಿದ್ದರು. ಜೊತೆಗೆ 4 ಲಕ್ಷ ರೂ. ಹಣವನ್ನು ಕಿತ್ತುಕೊಂಡು ಹೋಗಿದ್ದರು.

# ಅನುಮತಿ ಕಡ್ಡಾಯ

ಹೊರ ಜಗತ್ತಿಗೆ ಲಭಿಸುವ ಸಂಭವ ಇರುತ್ತದೆ.

ಇದು ಪರಿಸರ ಹಾಗೂ ಜೀವವೈವಿಧ್ಯಕ್ಕೂ ಧಕ್ಕೆ ತರುತ್ತದೆ. ಅರಣ್ಯ ಹಾಗೂ ವನ್ಯ ಜೀವಿಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಉತ್ತಮ ಪರಿಸರ, ಪ್ರಕೃತಿ ಹಸ್ತಾಂತರಿಸುವ ನಿಟ್ಟಿನಲ್ಲಿ ರಾಜ್ಯದ ಯಾವುದೇ ಅರಣ್ಯ ಪ್ರದೇಶದಲ್ಲಿ ಯಾವುದೇ ಬಗೆಯ ಚಿತ್ರೀಕರಣಕ್ಕೆ ಕಡ್ಡಾಯವಾಗಿ ಸರ್ಕಾರದ ವತಿಯಿಂದ ಅನುಮತಿ ಪಡೆಯಲು ಸೂಕ್ತ ಆದೇಶ ಹೊರಡಿಸಬೇಕು.

# ಆಹ್ವಾನ

ದಾವಣಗೆರೆ ಜೆಜೆಎಂ ಮೆಡಿಕಲ್ ಕಾಲೇಜ್ ಪೇಥಾಲಜಿ ವಿಭಾಗದ ಪ್ರಾಧ್ಯಾಪಕರೂ ಹೌದು. ಇತ್ತೀಚಿಗೆ ದೆಹಲಿಯ ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗಿದೆ.

**ಪ್ರಶಸ್ತಿ, ಪದಕದ ಜತೆ ಡಾ. ಸುರೇಶ್ ಹನಗವಾಡಿ:** ಸ್ವತಹ ಹಿಮೋಫಿಲಿಯಾ ಪೀಡತರಾದ ಡಾ. ಸುರೇಶ್ ಹನಗವಾಡಿ ಕಳೆದ ನಾಲ್ಕು ದಶಲಗಳಿಂದ ಹಿಮೋಫಿಲಿಯಾ ಪೀಡಿತರಿಗಾಗಿ ಮಾಡಿದ ಸೇವೆ ಪರಿಗಣಿಸಿ ಪ್ರಶಸ್ತಿ ನೀಡಲಾಗಿದೆ. ಇದೇ ಕಾರಣಕ್ಕೆ ಇದೀಗ ರಾಷ್ಟ್ರಪತಿಗಳ ಔತಣಕೂಟಕ್ಕೆ ಡಾ. ಸುರೇಶ್ ಹನಗವಾಡಿಗೆ ಆಹ್ವಾನ ಬಂದಿದೆ.

**ಹಿಮೋಫಿಲಿಯಾ ಎಂದರೇನು?:** ಹಿಮೋಫಿಲಿಯಾ ಎಂಬುದೊಂದು ವಿಚಿತ್ರ ಕಾಯಿಲೆ. ಇದರಿಂದ ಬಳಲುತ್ತಿರುವವರ ರಕ್ತದಲ್ಲಿ ಹೆಪ್ಪುಗಟ್ಟುವ ಅಂಶ ಇರುವುದಿಲ್ಲ. ಏನಾದರೂ ಸಣ್ಣ ಪುಟ್ಟ ಗಾಯವಾದರೆ ದೇಹದ ಒಳಭಾಗದಲ್ಲಿ ರಕ್ತಸ್ರಾವ ಆಗಿ ಗಂಟುಗಳಾಗುತ್ತವೆ. ಇದಕ್ಕೆ ರಕ್ತ ಹೆಪ್ಪುಗಟ್ಟುಲು ಫ್ಯಾಕ್ಟರ್ ಎನ್ನುವ ಔಷಧಿ ನೀಡಬೇಕು. ಈ ಸಮಸ್ಯೆ ಹತ್ತು ಸಾವಿರ ಜನರಲ್ಲಿ ಒಬ್ಬರಿಗೆ ಆನುವಂಶಿಕವಾಗಿ ಹೆಚ್ಚಾಗಿ ಬರುತ್ತದೆ. ಇದರಿಂದ ಬಳಲುವ ಡಾ. ಸುರೇಶ್ ತನ್ನಂತೆ ಇನ್ನುಳಿದವರೂ ಸಹ ಅಂಗವಿಕಲಾಗಬಾರದು ಎಂದು ಸಂಸ್ಥೆ ಆರಂಭಿಸಿ, ಸರ್ಕಾರ, ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರ ನೆರವಿನಿಂದ ಅದನ್ನು ಮುನ್ನಡೆಸುತ್ತಿದ್ದಾರೆ.

ರಾಜ್ಯದ ಬಹುತೇಕ ಭಾಗಗಳ ನೂರಾರು ಜನ ಹಿಮೋಫಿಲಿಯಾ ರೋಗಿಗಳು ಡಾ. ಸುರೇಶ್ ಸಂಸ್ಥೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

**ರಾಷ್ಟ್ರಪತಿಗಳ ಔತಣಕೂಟದ ಆಹ್ವಾನ ಪತ್ರಿಕೆಯೂ ವಿಶಿಷ್ಟ:** ಡಾ. ಸುರೇಶ್ ಅವರಿಗೆ ಬಂದ ಆಹ್ವಾನ ಪತ್ರಿಕೆ ಕೂಡ ಬಲು ವಿಶೇಷವಾಗಿದೆ. ದೇಶದ ಸಂಸ್ಕೃತಿ ಹಾಗೂ ಸಂಪ್ರದಾಯ ಬಿಂಬಿಸುವ ರೀತಿಯಲ್ಲಿ ಆಹ್ವಾನ ಪತ್ರಿಕೆ ವಿನ್ಯಾಸಗೊಳಿಸಲಾಗಿದೆ. ಬಿದಿರಿನಿಂದ ಸಿದ್ಧಪಡಿಸಿದ ಬಾಕ್ಸ್, ಚನ್ನಪಟ್ಟಣದ ಗೊಂಬೆ ಹೋಲುವ ತೆಲಂಗಾಣದ ಗೊಂಬೆಗಳು, ಕರ್ನಾಟಕದ ವಿಶಿಷ್ಟ ಸಂಪ್ರದಾಯ ಹೇಳುವ ಪಗಡೆ ಚಿತ್ರದಂತಿರುವ ವಸ್ತು, ಪ್ರವೇಶ ಪತ್ರ, ಬ್ಯಾಡ್ಜ್ ಹೀಗೆ ಆಹ್ವಾನ ಪತ್ರಿಕೆಯಲ್ಲಿ ಹತ್ತಾರು ವಿಶೇಷಗಳಿವೆ.

## ಮೊದಲನೇ ಪುಟದಿಂದ...

ಇದೇ 24 ರಂದು ಸಂಜೆ ದೆಹಲಿಗೆ ಸುರೇಶ ಹನಗವಾಡಿ ತೆರಳಲಿದ್ದಾರೆ. ಗಣರಾಜ್ಯೋತ್ಸವ ದಿನ ರಾಷ್ಟ್ರಪತಿಗಳ ಔತಣಕೂಟದಲ್ಲಿ ಪಾಲ್ಗೊಳ್ಳಲಿದ್ದಾರೆ.

# ಗಣರಾಜ್ಯೋತ್ಸವ

ಬಂದೋಬಸ್ತ್‌ಗೆ 10 ಕೆಎಸ್ ಆರ್ ಪಿ ತುಕಡಿ, 2 ಅಗ್ನಿಶಾಮಕ ವಾಹನ, ಕ್ಷಿಪ್ರ ಕಾರ್ಯಾಚರಣೆ ತಂಡ ಇರುತ್ತದೆ. ಮೈದಾನದ ಸುತ್ತ 103 ಸಿಸಿಟಿವಿ ಕ್ಯಾಮರಾ ಅಳವಡಿಸಲಾಗಿದೆ.

**ಪ್ರವೇಶ ದ್ವಾರಗಳ ವಿವರ:** ಕಲರ್ ಕೋಡ್ ಗಳ ಮೂಲಕ ಪಾಸ್ ವಿತರಿಸಿ ಪ್ರವೇಶಕ್ಕೆ ಅವಕಾಶ ನೀಡಲಾಗುತ್ತದೆ. ಕಾರ್ಯಕ್ರಮಕ್ಕೆ ಆಗಮಿಸುವವರಿಗೆ ಪಿಂಕ್ ಬಣ್ಣದ ಪಾಸ್ ನೀಡಲಾಗುತ್ತದೆ. ವಿಐಪಿ ಪಾಸ್ ಗೇಟ್-2ರ ಮೂಲಕ ಪ್ರವೇಶಿಸಬಹುದಾಗಿದೆ. ಮುಖ್ಯ ಅತಿಥಿಗಳು, ಗಣ್ಯರು ಗೇಟ್-3 ಮೂಲಕ ಪ್ರವೇಶಿಸಬಹುದು. ಗೇಟ್-4ರಲ್ಲಿ ಬಿಳಿ ಪಾಸ್ ನೀಡಲಾಗುತ್ತದೆ, ಇಲ್ಲಿ ಮಾಧ್ಯಮದವರಿಗೆ ಪ್ರವೇಶಕ್ಕೆ ಅವಕಾಶ ನೀಡಲಾಗಿದೆ.

**ವಾಹನ ಸಂಚಾರ ನಿರ್ಬಂಧ:** ಜ.26ರಂದು ಬೆಳಗ್ಗೆ 8.30 ರಿಂದ 10.30ರವರೆಗೆ ಕಬ್ಬನ್ ರಸ್ತೆ, ಕಾಮರಾಜ ರಸ್ತೆ, ಬಿಆರ್ ವಿ ರಸ್ತೆಯಲ್ಲಿ ವಾಹನ ಸಂಚಾರ ನಿರ್ಬಂಧಿಸಲಾಗಿದೆ. ಪರ್ಯಾಯ ರಸ್ತೆಗಳಲ್ಲಿ ಸಂಚರಿಸಲು ನಗರ ಸಂಚಾರ ಪೊಲೀಸರ ಸೂಚನೆ ನೀಡಿದ್ದಾರೆ.

**ವಾಹನ ನಿಲುಗಡೆಗೆ ನಿಷೇಧ:** ಸೆಂಟ್ರಲ್ ಸ್ಟ್ರೀಟ್, ಅನಿಲ್ ಕುಂಬ್ಳೆ ವೃತ್ತ, ಶಿವಾಜಿನಗರ ಬಸ್ ನಿಲ್ದಾಣ, ಕಬ್ಬನ್ ರಸ್ತೆ, ಸಿಟಿಒ ವೃತ್ತದಿಂದ ಕೆ.ಆರ್. ರಸ್ತೆ, ಕಬ್ಬನ್ ಜಂಕ್ಷನ್ ವರೆಗೆ, ಎಂ.ಜಿ.ರಸ್ತೆ, ಅನಿಲ್ ಕುಂಬ್ಳೆ ವೃತ್ತದಿಂದ ಕ್ವೀನ್ಸ್ ವೃತ್ತದವರೆಗೆ ವಾಹನ ನಿಲುಗಡೆ ನಿಷೇಧಿಸಲಾಗಿದೆ.

# ರೋಗಿಗಳಿಗೆ ಸಂಕಷ್ಟ

ಎನ್‌ಎಂಸಿ ಗೈಡ್ ಲೈನ್ಸ್ ಪ್ರಕಾಣ ಆಸ್ಪತ್ರೆಯ ಗ್ಯಾಸ್ಟ್ರೋಎಂಟರಾಲಜಿ ವಿಭಾಗದಲ್ಲಿ ಮೂರು ಸಹಾಯಕ ಪ್ರಾಧ್ಯಾಪಕರು ಹಾಗೂ ಎರಡು ಹಿರಿಯ ಸ್ಥಾನಿಕ ವೈದ್ಯಾಧಿಕಾರಿ ಹುದ್ದೆಗಳು ಸೃಷ್ಟಿಯಾಗಬೇಕಿದೆ ಎಂದು ವಿಕ್ಟೋರಿಯಾ ಆಸ್ಪತ್ರೆ ಡೀನ್ ಹಾಗೂ ನಿರ್ದೇಶಕ ಡಾ. ರಮೇಶ್ ಕೃಷ್ಣ ತಿಳಿಸಿದ್ದಾರೆ.

ರೋಗಿಗಳ ಸಂಖ್ಯೆ ಹೆಚ್ಚಳ: ವೈದ್ಯರ, ಸಿಬ್ಬಂದಿ ಸಂಖ್ಯೆ ಇಳಿಕೆ

ಇದೇ ರೀತಿ ಪ್ಲಾಸ್ಟಿಕ್ ಸರ್ಜರಿ, ಹೃದ್ರೋಗ ವಿಜ್ಞಾನ, ನರ ವಿಜ್ಞಾನ ಸೇರಿ ವಿವಿಧ ವಿಭಾಗಗಳಲ್ಲಿ ಹುದ್ದೆಗಳ ಕೊರತೆ ಹಾಗೂ ಮಂಜೂರಾಗಿರುವ ಹುದ್ದೆಗಳಲ್ಲಿ ಕೆಲವು ಖಾಲಿ ಇರುವುದರಿಂದ ರೋಗಿಗಳ ನಿರ್ವಹಣೆಗೆ ಕರ್ತವ್ಯನಿರತ ವೈದ್ಯರು ಒದ್ದಾಡುವಂತಾಗಿದೆ. ಅತ್ಯಾಧುನಿಕ ಶಸ್ತ್ರಚಿಕಿತ್ಸಾ ಕೊಠಡಿ ಸೇರಿ ವಿವಿಧ ಸೌಲಭ್ಯವನ್ನು ಆಸ್ಪತ್ರೆ ಹೊಂದಿದೆ. ಯಕೃತ್ ಕಸಿ ಮತ್ತು ಬ್ಯಾರಿಯಾಟ್ರಿಕ್ ಶಸ್ತ್ರಚಿಕಿತ್ಸೆ, ಲ್ಯಾಪರೊಸ್ಕೋಪಿಕ್ ಶಸ್ತ್ರಚಿಕಿತ್ಸೆ, ಸೀಳು ತುಟಿ ಮತ್ತು ಅಂಗುಳಿನ ಚಿಕಿತ್ಸೆ, ಕೈ ಶಸ್ತ್ರಚಿಕಿತ್ಸೆ, ಆ?ಯಂಜಿಯೋಪ್ಲ್ಯಾಸ್ಟಿ, ವಾಲ್ವುಲೋಪ್ಲ್ಯಾಸ್ಟಿ, ಪೇಸ್‌ಮೇಕರ್ ಸೇರಿ ವಿವಿಧ ಸೌಲಭ್ಯಗಳಿವೆ. ಆದರೆ, ಚಿಕಿತ್ಸೆ ನೀಡಲು ವೈದ್ಯರು ಹಾಗೂ ವೈದ್ಯಕೀಯ ಸಿಬ್ಬಂದಿ ಇಲ್ಲವಾಗಿದ್ದಾರೆ. ರೋಗಿಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಳವಾಗುತ್ತಿದೆ. ಆದರೆ ವೈದ್ಯರು ಹಾಗೂ ಹಾಸಿಗೆಗಳ ಸಂಖ್ಯೆ ರೋಗಿಗಳ ಅನುಪಾತಕ್ಕೆ ಅನುಗುಣವಾಗಿ ಹೆಚ್ಚಳವಾಗಿಲ್ಲ.

ಒಟ್ಟಿನಲ್ಲಿ ವೈದ್ಯರ ನೇಮಕಾತಿಗಾಗಿ ಆಸ್ಪತ್ರೆಗಳು ಸರ್ಕಾರಕ್ಕೆ ಪತ್ರ ಬರೆದು ಮಾನವಿ ಮಾಡಿದರೂ ಪ್ರಯೋಜನವಾಗಿಲ್ಲ. ಹೀಗಾಗಿ ಬಡ ರೋಗಿಗಳು ವೈದ್ಯರು ಇಲ್ಲದೆ ಉತ್ತಮ ಚಿಕಿತ್ಸೆ ಸಿಗದೆ ಸಂಕಷ್ಟಕ್ಕೆ ಸಿಲುಕುವಂತಾಗಿದೆ.

# ಬಲಿ

ಈ ಕುರಿತು ಮೈಕ್ರೋ ಫೈನಾನ್ಸ್‌ಗಳ ಕಿರುಕುಳಕ್ಕೆ ಬೇಸತ್ತು ಶರಣಬಸವ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಉಲ್ಲೇಖಿಸಿ, ಮಾನ್ವಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಮನೆಗೆ ಆಸರೆಯಾಗಿದ್ದ ವ್ಯಕ್ತಿಯನ್ನು ಕಳೆದುಕೊಂಡ ಕುಟುಂಬ ಹೋರಾಟಕ್ಕೆ ಮುಂದಾಗಿದೆ. ಪತಿ ಸಾವಿನಿಂದ ಕಣ್ಣೀರಲ್ಲಿ ಕೈತೊಳೆಯುತ್ತಿರುವ ಮೃತನ ಪತ್ನಿ ಪಾರ್ವತಿ, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರಿಗೆ ಮಾಂಗಲ್ಯ ಸರ ಹಾಗೂ ಮನವಿ ಪತ್ರವನ್ನು ಸ್ಪೀಡ್ ಪೋಸ್ಟ್ ಮಾಡಿದ್ದಾರೆ. ಮನೆಗೆ ಆಧಾರವಾಗಿದ್ದ ಪತಿಯನ್ನು ಕಳೆದುಕೊಂಡಿರುವುದರಿಂದ ಪರಿಹಾರಕ್ಕೆ ಮನವಿ ಮಾಡಿದ್ದಾರೆ. ಸಾಲ ವಸೂಲಿಗಾಗಿ ಕಿರುಕುಳ ಕೊಡುವ ಮೈಕ್ರೋ ಫೈನಾನ್ಸ್‌ಗಳ ವಿರುದ್ಧ ಕ್ರಮಕ್ಕೆ ಆಗ್ರಹಿಸಿದ್ದಾರೆ.

ಸಾಲ ತೀರಿಸಲು ಸಮಯಾವಕಾಶವನ್ನೂ ಕೊಡದೆ ಮನೆ ಬಾಗಿಲು ಬಡಿಯುತ್ತಿರುವುದಕ್ಕೆ ಬಡ ಜನರು ಕಂಗಾಲಾಗಿದ್ದಾರೆ. ಸರ್ಕಾರ ಹಾಗೂ ಪೊಲೀಸ್ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

# ನಾಪತ್ತೆ

ಈ ಬಗ್ಗೆ ಕೋಡಿಗೆಹಳ್ಳಿ ಪೊಲೀಸ್ ಠಾಣೆಯಲ್ಲಿ ವಿದ್ಯಾರ್ಥಿಯ ಪೋಷಕರು ದೂರು ನೀಡಿದ್ದಾರೆ. ಸದ್ಯ ಉತ್ತರ ಪ್ರದೇಶದ ಪ್ರಯಾಜ್ ರಾಜ್‌ನಲ್ಲಿ ಕುಂಭಮೇಳ ನಡೆಯುತ್ತಿರುವುದರಿಂದ ಮೋಹಿತ್ ಪ್ರಯಾಗ್ ರಾಜ್‌ಗೆ ಹೋಗಿರುವ ಶಂಕೆ ವ್ಯಕ್ತವಾಗಿದೆ. ಹೀಗಾಗಿ ಸಿಸಿಟಿವಿ ಪರಿಶೀಲನೆ ಮಾಡಿ ಹುಡುಕಾಡುತ್ತಿರುವ ಪೊಲೀಸರು, ಮೋಹಿತ್ ಪ್ರಯಾಗ್‌ರಾಜ್‌ಗೆ ಹೋಗಿರುವ ಸಾಧ್ಯತೆ ಬಗ್ಗೆಯೂ ತನಿಖೆ ನಡೆಸುತ್ತಿದ್ದಾರೆ.

ವಿದ್ಯಾರ್ಥಿಯ ಪೋಷಕರು ಸೋಷಿಯಲ್ ಮೀಡಿಯಾದಲ್ಲಿಯೂ ಫೋಟೋ ಹಾಕಿ ಮಾಹಿತಿ ನೀಡುವಂತೆ ಮನವಿ ಮಾಡಿದ್ದಾರೆ.

# ಶ್ರೀರಾಮುಲು ಕಾಂಗ್ರೆಸ್‌ಗೆ ಕಳುಹಿಸಲು ಅವರೇ ಪ್ರಯತ್ನಿಸ್ತಿರಬಹುದು



**ಬೆಂಗಳೂರು:** ಸಚಿವ ಸತೀಶ್ ಜಾರಕಿಹೊಳಿಯನ್ನು ಹಳಿಯುವುದಕ್ಕೆಂದು ಡಿಸಿಎಂ ಡಿಕೆ ಶಿವಕುಮಾರ್ ಬಿಜೆಪಿಯಿಂದ ಶ್ರೀರಾಮುಲುರನ್ನು ಸೆಳೆಯುತ್ತಿದ್ದಾರೆ ಎಂದು ಬಿಜೆಪಿ ನಾಯಕ ಜನಾರ್ದನ ರೆಡ್ಡಿ ಆರೋಪಿಸಿದ್ದು, ರಾಜ್ಯ ರಾಜಕೀಯದಲ್ಲಿ ಕೋಲಾಹಲಕ್ಕೆ ಕಾರಣವಾಗಿದೆ. ಈ ಬಗ್ಗೆ ಇದೀಗ ಡಿಕೆ ಶಿವಕುಮಾರ್ ಪ್ರತಿಕ್ರಿಯೆ ನೀಡಿದ್ದಾರೆ. ನನ್ನನ್ನು ಯಾರೂ ಭೇಟಿ ಮಾಡಿಲ್ಲ. ಅವರ ಪಕ್ಷದ ಆಂತರಿಕ ಸಂಘರ್ಷವೇ ಹೊರತು ನನಗೂ ಅದಕ್ಕೂ ಯಾವ ಸಂಬಂಧವೂ ಇಲ್ಲ. ಅವರೇ ಬಹುಶಃ ಪಕ್ಷಕ್ಕೆ ಕಳುಹಿಸಬೇಕು ಎಂದು ಪ್ರಯತ್ನಿಸುತ್ತಿರಬಹುದು ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ.

# ಗೃಹರಕ್ಷಕರು ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಲು

**ಚಾಮರಾಜನಗರ:** ಸಾರ್ವಜನಿಕ ರಕ್ಷಣೆ, ಕಾನೂನು ಸುವ್ಯವಸ್ಥೆಗೆ ಸಂಬಂಧಿಸಿದಂತೆ ಎಂತಹುದೇ ಕಠಿಣ ಪರಿಸ್ಥಿತಿಯಲ್ಲಿ ಪೊಲೀಸರಿಗೆ ನೆರವಾಗುವ ಗೃಹರಕ್ಷಕರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ ಅವರು ತಿಳಿಸಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿಂದು ಜಿಲ್ಲಾ ಗೃಹರಕ್ಷಕರ ದಳ ಆಯೋಜಿಸಿದ್ದ ಅಖಿಲ ಭಾರತ ಗೃಹರಕ್ಷಕ ದಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ಉತ್ಸವ, ಬಂದೋಬಸ್ತ್ ಸೇರಿದಂತೆ ಇತರೆ ಸಂದರ್ಭಗಳಲ್ಲಿ ಪೊಲೀಸರ ಮಾದರಿಯಲ್ಲಿ ಸಮವಸ್ತ್ರ ಧರಿಸಿ ಶಿಸ್ತುಬದ್ಧವಾಗಿ ಶ್ರದ್ಧೆಯಿಂದ ಕೆಲಸ ನಿರ್ವಹಿಸುವ ಗೃಹರಕ್ಷಕ ದಳವನ್ನು ಪೊಲೀಸ್ ಇಲಾಖೆಯ ಒಂದು ಭಾಗವಾಗಿ ಪರಿಗಣಿಸಲಾಗಿದೆ. ದೇಶದ ಗಡಿ ಭದ್ರತಾ ಪಡೆಯು ಅಗತ್ಯ ಸಮಯದಲ್ಲಿ ಗೃಹರಕ್ಷಕರ ಸಹಾಯ ಪಡೆಯಲಿದೆ. ಇಂತಹ ಮಹತ್ವದ ಕಾರ್ಯಗಳಲ್ಲಿ ತೊಡಗುವ ಗೃಹರಕ್ಷಕರು ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಗಮನ ಹರಿಸಬೇಕು ಎಂದರು.

ಪೊಲೀಸರಂತೆ ಗೃಹರಕ್ಷಕರಿಗೂ ಒತ್ತಡಗಳಿವೆ. ಒತ್ತಡದ ಜೀವನಕ್ರಮದಿಂದ ಗೃಹರಕ್ಷಕರು ಎದೆಗುಂದದೇ ಉತ್ತಮ ಜೀವನಶೈಲಿಯನ್ನು ರೂಢಿಸಿಕೊಳ್ಳಬೇಕು. ಸದೃಢ ದೇಹದಲ್ಲಿ ಸದೃಢ ಮನಸ್ಸಿರುತ್ತದೆ. ಅದಕ್ಕಾಗಿ ದೈಹಿಕ ಆರೋಗ್ಯವನ್ನು ಸದೃಢಗೊಳಿಸಿ ದೃಢಕಾಯರಾಗಬೇಕು. ಜೊತೆಗೆ ತಮ್ಮಲ್ಲಿರುವ ಕೌಶಲ್ಯಗಳನ್ನು ವೃದ್ಧಿಸಿಕೊಳ್ಳಬೇಕು. ರಾಜ್ಯದಲ್ಲಿಯೇ ಉತ್ತಮ ಕಾರ್ಯನಿರ್ವಹಣೆ ಮಾಡುವ ಮೂಲಕ ಜಿಲ್ಲೆಗೆ ಹೆಮ್ಮೆ ತರಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ ಅವರು ಗೃಹರಕ್ಷಕರಿಗೆ ಕಿವಿಮಾತು ಹೇಳಿದರು.



ಗೃಹರಕ್ಷಕ ದಳ ದಿನಾಚರಣೆಯ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಎನ್. ಶಶಿಧರ್ ಅವರು ಗೃಹರಕ್ಷಕರು ಸಾರ್ವಜನಿಕ ಸೇವೆಗೆ ತಮ್ಮನ್ನು ಅರ್ಪಿಸಿಕೊಳ್ಳುವ ನಿಟ್ಟಿನಲ್ಲಿ ಪೊಲೀಸರಿಗೆ ಸಹಾಯಹಸ್ತ ಚಾಚಬೇಕು. ಕೌಟುಂಬಿಕ ಜೀವನ ಹಾಗೂ ವೈಯಕ್ತಿಕ ಆರೋಗ್ಯದ ಬಗ್ಗೆಯೂ ನಿಗಾ ವಹಿಸಬೇಕು. ಪೊಲೀಸ್ ಮಾದರಿಯಲ್ಲಿ ಉತ್ತಮ ಸೇವೆಯನ್ನು ಪರಿಗಣಿಸಿ ಗೃಹರಕ್ಷಕರಿಗೂ ವಾರ್ಷಿಕ ಪ್ರಶಸ್ತಿ ದೊರೆಯುವಂತಾಗಬೇಕು ಎಂದರು.

ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್ ಅವರು ಮಾತನಾಡಿ ಶಿಸ್ತುಬದ್ಧ ಸೇವಾಕಾರ್ಯಕ್ಕೆ ಹೆಸರಾಗಿರುವ ಗೃಹರಕ್ಷಕರನ್ನು ಪೊಲೀಸರಂತೆ ಗೌರವಿಸಲಾಗುತ್ತಿದೆ. ಇದಕ್ಕೆ ಗೃಹರಕ್ಷಕರ ಸಮವಸ್ತ್ರವೇ ಕಾರಣವಾಗಿದೆ. ಬಂದೋಬಸ್ತ್ ಹಾಗೂ ಪ್ರಕೃತಿ ವಿಕೋಪ ಸಮಯದಲ್ಲಿ ಗೃಹರಕ್ಷಕರ ಸೇವೆ ಅನನ್ಯವಾಗಿದೆ. ಯಾವುದೇ ಸಂದರ್ಭದಲ್ಲಿ ಎದುರಾಗುವ ಒತ್ತಡವನ್ನು ಬದಿಗೊತ್ತಿ ಕರ್ತವ್ಯನಿಷ್ಠೆ ಮೆರೆಯುವ ಗೃಹರಕ್ಷಕರ ಸಾಮಾಜಿಕ ಕಳಕಳಿ ಮಾದರಿಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗೃಹರಕ್ಷಕರ ದಳ ಜಿಲ್ಲಾ ಸಮಾದೇಷ್ಟರಾದ ಎಸ್.ಜಿ. ಮಹಾಲಿಂಗಸ್ವಾಮಿ ಮಾತನಾಡಿ ಜಿಲ್ಲೆಯಲ್ಲಿ ಗೃಹರಕ್ಷಕ ದಳದ 9 ಘಟಕಗಳು ಸಾರ್ವಜನಿಕ ಸೇವಾಕಾರ್ಯದಲ್ಲಿ ಅವಿರತವಾಗಿ ಕಾರ್ಯನಿರ್ವಹಿಸುತ್ತಿವೆ. ಮುಂದಿನ ದಿನಗಳಲ್ಲಿ ಗೃಹರಕ್ಷಕ ದಳದ ಘಟಕಗಳನ್ನು ಹೆಚ್ಚು ಸುಸಜ್ಜಿತಗೊಳಿಸಲು ಶ್ರಮಿಸಲಾಗುವುದು ಎಂದರು.

ಇದೇ ವೇಳೆ ನಿವೃತ್ತ ಗೃಹರಕ್ಷಕರನ್ನು ಹಾಗೂ ಗೃಹರಕ್ಷಕರ ವೃತ್ತಿಯಲ್ಲಿ ಸಾಧನೆಗೈದವರನ್ನು ಸನ್ಮಾನಿಸಲಾಯಿತು.

ಗೃಹರಕ್ಷಕ ದಳದ ಎಲ್ಲಾ ಘಟಕಾಧಿಕಾರಿಗಳು, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



## ಮುಖ್ಯಮಂತ್ರಿಗಳ ಜತೆ ಸ್ಯಾಫ್ರಾನ್ ಕಂಪನಿ ಅಧ್ಯಕ್ಷ ರಾಸ್ ಭೇಟಿ

**ಬೆಂಗಳೂರು:** ರಾಜ್ಯದಲ್ಲಿ ವೈಮಾಂತರಿಕ್ಷ ಮತ್ತು ರಕ್ಷಣಾ ವಲಯದಲ್ಲಿ ಹೂಡಿಕೆ ಮಾಡಿರುವ ಜಾಗತಿಕ ಶ್ರೇಣಿಯ ಸ್ಯಾಫ್ರಾನ್ ಸಮೂಹದ ಅಧ್ಯಕ್ಷ ರಾಸ್ ಮ್ಯಾಕಲ್ನೆಸ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಇಂದು ವಿಧಾನಸೌಧದ ಕಚೇರಿಯಲ್ಲಿ ಭೇಟಿಯಾದರು.

ಈ ಸೌಜನ್ಯದ ಭೇಟಿ ಸಂದರ್ಭದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಕೂಡ ಉಪಸ್ಥಿತರಿದ್ದರು.

ಭೇಟಿಯ ವೇಳೆಯಲ್ಲಿ ರಾಜ್ಯದ ಕೈಗಾರಿಕಾಸ್ನೇಹಿ ನೀತಿ, ಹೂಡಿಕೆ ಕಾರ್ಯಪರಿಸರ, ವಿಷನ್ ಗ್ರೂಪ್ ಚಟುವಟಿಕೆಗಳು ಇತ್ಯಾದಿಗಳನ್ನು ಕುರಿತು ವಿಚಾರ ವಿನಿಮಯ ನಡೆಸಲಾಯಿತು.

ಕಂಪನಿಯು ಬೆಂಗಳೂರಿನಲ್ಲಿ ಹೊಂದಿರುವ ಸ್ಯಾಫ್ರಾನ್ ಡೇಟಾ ಸಿಸ್ಟಮ್ಸ್ ಮತ್ತು ಸ್ಯಾಫ್ರಾನ್ ಹೆಲಿಕಾಪ್ಟರ್ ಎಂಜಿನ್ಸ್ ಕಚೇರಿಗಳು ನಡೆಸುತ್ತಿರುವ ಚಟುವಟಿಕೆಗಳ ಬಗ್ಗೆ ರಾಸ್ ಅವರು ಈ ಸಂದರ್ಭದಲ್ಲಿ ವಿಸ್ತೃತ ಮಾಹಿತಿ ನೀಡಿದರು.

ಕೃಷಿಸಚಿವ ಚೆಲುವರಾಯಸ್ವಾಮಿ, ಮುಖ್ಯಮಂತ್ರಿಯವರ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎಲ್. ಕೆ.ಅತೀಕ್, ಕೈಗಾರಿಕಾ ಇಲಾಖೆ ಆಯುಕ್ತೆ ಗುಂಜನ್ ಕೃಷ್ಣ ಸೇರಿದಂತೆ ಇತರರು ಇದ್ದರು.

## ಎನ್.ಜಿ.ಒ ಸಂಸ್ಥೆಗಳಿಗೆ ಸಹಾಯಧನ : ಅರ್ಜಿ ಆಹ್ವಾನ

**ಚಾಮರಾಜನಗರ:** 2024–25ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಎನ್.ಜಿ.ಒ ಸಂಸ್ಥೆಗಳಿಂದ (ಹೊಸ ಪ್ರಾಜೆಕ್ಟ್) ಕೇಂದ್ರ ಸರ್ಕಾರದಿಂದ ಸಹಾಯಧನ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಕೇಂದ್ರ ಸರ್ಕಾರದ ಪರಿಷ್ಕೃತ ಮಾರ್ಗಸೂಚಿಯಂತೆ ಕಾರ್ಯನಿರ್ವಹಿಸುತ್ತದ್ದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಎನ್.ಜಿ.ಒ. ಪೋರ್ಟಲ್ ತೆರೆಯಲಾಗಿದ್ದು ಎನ್.ಜಿ.ಒ ಸಂಸ್ಥೆಗಳ ಅಗತ್ಯ ದಾಖಲೆಗಳೊಂದಿಗೆ ಫೆಬ್ರವರಿ 15ರವರೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಂಡ್ಯದಲ್ಲಿ ಸ್ವಾಯತ್ತ ಕೃಷಿ ವಿಶ್ವವಿದ್ಯಾನಿಲಯ ನಿರ್ಮಾಣ

**ಬೆಂಗಳೂರು:** ಮಂಡ್ಯ ಜಿಲ್ಲೆಯಲ್ಲಿ ಸ್ವಾಯತ್ತ ಕೃಷಿ ವಿಶ್ವವಿದ್ಯಾನಿಲಯವನ್ನು ನಿರ್ಮಾಣ ಮಾಡಲು ತೀರ್ಮಾನ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಇಂದು ತ್ರಿಪುರವಾಸಿನಿ ಅರಮನೆ ಮೈದಾನದಲ್ಲಿ ಕೃಷಿ ಇಲಾಖೆ ವತಿಯಿಂದ ಅಂತರಾಷ್ಟ್ರೀಯ ವಾಣಿಜ್ಯ ಮೇಳ ಸಾವಯವ ಮತ್ತು ಸಿರಿಧಾನ್ಯ – 2025ರ ಉದ್ಘಾಟನೆ ಮಾಡಿ ಮಾತನಾಡಿದ ಮುಖ್ಯಮಂತ್ರಿಗಳು, ಮಂಡ್ಯ ಜಿಲ್ಲೆಯಲ್ಲಿ ಕೃಷಿ ವಿಶ್ವವಿದ್ಯಾನಿಲಯವನ್ನು ನಿರ್ಮಾಣ ಮಾಡುವುದರಿಂದ ಮಂಡ್ಯ, ಹಾಸನ, ಮೈಸೂರು, ಚಾಮರಾಜನಗರ ರೈತರಿಗೆ ಅನುಕೂಲವಾಗುತ್ತದೆ. ರೈತರು ಹೊಸ ತಳಿಯ ಪರಿಚಯ ಅತ್ಯಾಧಯನಿಕ ತಾಂತ್ರಿಕ ಸಲಹೆಗಳನ್ನು ಪಡೆಯಬಹುದು.

ಭಾರತ ಕೃಷಿ ಪ್ರಧಾನ ದೇಶವಾಗಿದ್ದು ಆಹಾರ ಉತ್ಪಾದನೆಯಲ್ಲಿ ಸ್ವಾವಲಂಭಿಗಳಾಗಿದ್ದೇವೆ. ನಮ್ಮ ದೇಶಕ್ಕೆ ಸ್ವಾತಂತ್ರ್ಯ ಬಂದ ಸಂದರ್ಭದಲ್ಲಿ ಆಹಾರ ಉತ್ಪಾದನೆ ಕಡಿಮೆ ಇತ್ತು. ಈಗ ನಾವು ಆಹಾರ ಉತ್ಪಾದನೆಯಲ್ಲಿ ಸ್ವಾವಲಂಭನೆ ಪಡೆಯುವದರ ಜೊತೆಗೆ ವಿದೇಶಗಳಿಗೆ ರಫ್ತು ಮಾಡುತ್ತಿದ್ದೇವೆ. ಸಿರಿಧಾನ್ಯಕ್ಕೆ ಕನಿಷ್ಠ ಬೆಂಬಲ ಬೆಲೆ ಕಾಯಿದೆ ತರಲು ಕೇಂದ್ರ ಸರ್ಕಾರಕ್ಕೆ ಒತ್ತಾಯ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಸಿರಿಧಾನ್ಯಗಳನ್ನು ಹಿಂದಿನಿಂದಲೂ ಬೆಳೆಯುತ್ತಿದ್ದರು. ಕಡಿಮೆ ಮಳೆ ಇರುವ ಪ್ರದೇಶದಲ್ಲಿ ಹೆಚ್ಚು ಸಿರಿಧಾನ್ಯಗಳನ್ನು ಬೆಳೆಯುವ ಪ್ರವೃತ್ತಿ ಇತ್ತು. ರಾಗಿ ತಿಂದವನು ನಿರೋಗಿಯಾಗಿರುತ್ತಾನೆ ಹಿಂದಿನ ಕಾಲದಲ್ಲಿ ಹೇಳುತ್ತಿದ್ದರು. ಭಾರತವು ಸಾವಯವ ಕೃಷಿ ಉತ್ಪಾನೆಯಲ್ಲಿ ವಿಶ್ವದಲ್ಲಿ ಎರಡನೇ ಸ್ಥಾನದಲ್ಲಿದೆ.

ರೈತರಿಗೆ ಸಿರಿಧಾನ್ಯ ಬೆಳಯಲು, ಮಾರುಕಟ್ಟೆ ಕಲ್ಪಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಪ್ರೋತ್ಸಾಹ ನೀಡುತ್ತಿದೆ. ರೈತರಿಗೆ ಸಾವಯವ ಮತ್ತು ಸಿರಿಧಾನ್ಯಗಳನ್ನು ಬೆಳೆಯಲು ಉತ್ತೇಜನ ನೀಡುವುದಕ್ಕಾಗಿ 2017ರಲ್ಲಿ ಸಾವಯವ ಕೃಷಿ ನೀತಿ ಜಾರಿಗೆ ತರಲಾಗಿದೆ. 2013ರಲ್ಲಿ ಸಾವಯವ ಭಾಗ್ಯ ಯೋಜನೆ ಮೂಲಕ ರೈತರನ್ನು ಒಗ್ಗೂಡಿಸಿ ಉತ್ತೇಜನ ನೀಡಲಾಗಿದೆ. ರೈತಸಿರಿ ಯೋಜನೆ ಮೂಲಕ ನವಣೆ, ಸಾಮೆ, ಕೊರಲೆ, ಬರಗು, ಊದಲು ಬೆಳೆಯುವ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10,000/–ಗಳಂತೆ ಗರಿಷ್ಠ 2 ಹೆಕ್ಟೇರ್‌ಗಳಿಗೆ ಪ್ರೋತ್ಸಾಹ ಧನವನ್ನು ನೀಡಲಾಗುತ್ತಿದೆ. ಬೆಂಗಳೂರಿನ ಹೆಬ್ಬಾಳದಲ್ಲಿ ಸಾವಯವ ಮತ್ತು ಸಿರಿಧಾನ್ಯ ಹಬ್‌ನ್ನು ರೂ.20 ಕೋಟಿ ವೆಚ್ಚದಲ್ಲಿ ನಿರ್ಮಿಸಲು ಚಾಲನೆ ನೀಡಲಾಗಿದೆ ಎಂದು ತಿಳಿಸಿದರು.




ರಾಜ್ಯದ ಸಾವಯವ ಉತ್ಪನ್ನಗಳ ಮಾರಾಟಕ್ಕೆ ಸೂಕ್ತ ಮಾರುಕಟ್ಟೆ ಕಲ್ಪಿಸಿಕೊಡುವ ನಿಟ್ಟಿನಲ್ಲಿ ರಾಜ್ಯದ ಸಾವಯವ ಕೃಷಿಕರ ಸಂಘಗಳನ್ನು ಒಗ್ಗೂಡಿಸಿ 15 ಪ್ರಾಂತೀಯ ಸಾವಯವ ಒಕ್ಕೂಟಗಳನ್ನೂ ರಚಿಸಲಾಗಿದೆ. ಸಾವಯವ ಹಾಗೂ ಸಿರಿಧಾನ್ಯಗಳ ಕೃಷಿಗೆ ಸಂಬಂಧಿಸಿದ ಸಂಶೋಧನಾ ಕೇಂದ್ರಗಳನ್ನು ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಸ್ಥಾಪಿಸಲಾಗಿದೆ. ಸಿರಿಧಾನ್ಯಗಳ ಉತ್ತೇಜನದಲ್ಲಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳಿಗೆ ಕೇಂದ್ರ ಸರ್ಕಾರ ಪ್ರಶಂಸನಾ ಪತ್ರವನ್ನು ಕರ್ನಾಟಕ ಸರ್ಕಾರದ ಕೃಷಿ ಇಲಾಖೆಗೆ ನೀಡಿದೆ. ಮುಂದಿನ ಆರ್ಥಿಕ ವರ್ಷದಿಂದ ರಾಜ್ಯದ ಸಾವಯವ ಉತ್ಪನ್ನಗಳ ಮಾರಾಟಕ್ಕೆ ಎಪಿಎಂಸಿನಲ್ಲಿ ಮಾರುಕಟ್ಟೆ ವ್ಯವಸ್ಥೆಗೆ ಪ್ರಯತ್ನ ಮಾಡಲಾಗುವುದು. ಹೊಸದುರ್ಗ ವಿಧಾನಸಭಾ ಕ್ಷೇತ್ರದದ ಶಾಸಕ ಗೋವಿಂದಪ್ಪ ಅವರು ಸಿರಿಧಾನ್ಯವನ್ನು ಉತ್ತಮವಾಗಿ ಬೆಳೆದು ರೈತರಿಗೆ ಸಿರಿಧಾನ್ಯ ಬೆಳೆಯಲು ಮಾದರಿಯಾಗಿದ್ದಾರೆ ಎಂದು ತಿಳಿಸಿದರು.

ಕೃಷಿ ಸಚಿವ ಎನ್ ಚೆಲುವರಾಯಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿ ಸಿರಿಧಾನ್ಯವನ್ನು ಅತ್ಯಂತ ಕಡಿಮೆ ನೀರಿನಿಂದ ಬೆಳೆಯಬಹುದು. ಸಿರಿಧಾನ್ಯ ಹೆಚ್ಚು ಪೋಷಕಾಂಶ ಮತ್ತು ನಾರಿನಿಂದ ಕೂಡಿದೆ. ಹಿಂದೆ ಬಡವರ ಆಹಾರವಾಗಿದ್ದ ಸಿರಿಧಾನ್ಯವು ಇಂದು ಉಳ್ಳವರ ಆಹಾರವಾಗಿದೆ. ಸರ್ಕಾರವು ರೈತಸಿರಿ ಯೋಜನೆ ಮೂಲಕ 1 ಲಕ್ಷ ರೈತರಿಗೆ ರೂ. 104 ಕೋಟಿಗಳನ್ನು ಮಂಜೂರು ಮಾಡಲಾಗಿದೆ. ಸಾವಯವ ಕೃಷಿ ಪದ್ದತಿಯಲ್ಲಿ ಬೆಳೆ ಬೆಳೆಯುವ ರಾಜಸ್ಥಾನ ಮೊದಲನೆ ಸ್ಥಾನದಲ್ಲಿದ್ದು, ಕರ್ನಾಟಕ ಎರಡನೇ ಸ್ಥಾನ ಪಡೆದಿದೆ. ಕೃಷಿ ಇಲಾಖೆಯಲ್ಲಿ 950 ಹುದ್ದೆಗಳಿಗೆ ಭರ್ತಿ ಮಾಡಲು ಅನುಮೋದನೆ ದೊರೆತಿದೆ. ರೈತರು ಶ್ರೀಮಂತರಾಗಿ ಜನರಿಗೆ ಉದ್ಯೋಗ ನೀಡುವಂತವರಾಗಬೇಕು ಎಂದು ತಿಳಿಸಿದರು. ಅಂತರಾಷ್ಟ್ರೀಯ ವಾಣಿಜ್ಯ ಮೇಳ ಸಾವಯವ ಮತ್ತು ಸಿರಿಧಾನ್ಯ 2025ರ ಮೇಳದಲ್ಲಿ ಜರ್ಮನಿ, ಸ್ವಿಟ್ಜರ್‌ಲ್ಯಾಂಡ್, ಸ್ಪೈನ್, ಆಸ್ಟ್ರೇಲಿಯಾ, ಕೀನ್ಯಾ, ತಾಂಜೇನಿಯ, ಇಟಲಿ, ಇಂಗ್ಲೇಂಡ್, ಪೆರು ದೇಶಗಳ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. 8 ಹೊರ ರಾಜ್ಯಗಳ ಕೃಷಿ ಸಚಿವರು, 300 ಕ್ಕೂ ಹೆಚ್ಚು ಮಳಿಗೆಗಳು, ಹೊರ ರಾಜ್ಯಗಳು 17 ಇಲಾಖೆಗಳು 7 ಸಂಸ್ಥೆಗಳು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಸಚಿವ ಶೋಭಾ ಕರಂದ್ಲಾಜೆ ಅವರು ಮಾತನಾಡಿ ಹಿಂದಿನ ಕಾಲದಲ್ಲಿ ಋಷಿ ಮುನಿಗಳು, ಹಿರಿಯವರು ಸಿರಿಧಾನ್ಯ ಸೇವಿಸುತ್ತಿದ್ದರು. ಆರೋಗ್ಯ ಮನಸ್ಸು ಪ್ರಕೃತಿಗೆ ಹಿತವಾದ ಆಹಾರವಾಗಿದೆ. ಅತ್ಯಂತ ಕಡಿಮೆ ವೆಚ್ಚ ಹಾಗೂ ನೀರಿನಲ್ಲಿ ಸಿರಿಧಾನ್ಯಗಳನ್ನು ಬೆಳೆಯಬಹುದು ಎಂದರು.

## ಅವಧಿ ವಿಸ್ತರಣೆ

**ಮಂಡ್ಯ:** 2024–25 ನೇ ಸಾಲಿನಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ/ಆತಿಥ್ಯಕ್ಷೇತ್ರದಲ್ಲಿ ವಸತಿ ಸಹಿತ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ರಾಜ್ಯ ಹಾಗೂ ಕೇಂದ್ರ ಸರ್ಕಾರದ ಆತಿಥ್ಯಕ್ಷೇತ್ರದ ಸಂಸ್ಥೆಗಳಾದ Food Craft Institute (FIC), Mysore ಹಾಗೂ Institute of Hotel Management (IHM) ಬೆಂಗಳೂರು ರವರ ಮೂಲಕ ಆಯೋಜಿಸುವ ಸಂಬಂಧ ಅರ್ಜಿ ಸಲ್ಲಿಕೆಯ ಅವಧಿಯನ್ನು ವಿಸ್ತಾರಿಸಲಾಗಿದೆ. ಜಿಲ್ಲೆಯ ಆಸಕ್ತ ಅಭ್ಯರ್ಥಿಗಳು ÀÄ Food &Beverege Service Steward (10th), Room Attendant (5th) Front Office associate (12th ) Multi Cuisine Cook ತರಬೇತಿಗೆ ಅರ್ಜಿಯನ್ನು ಪ್ರವಾಸೋದ್ಯಮ ಇಲಾಖೆಯಲ್ಲಿ ಪಡೆದು ಜನವರಿ 31 ರೊಳಗೆ ಭರ್ತಿ ಮಾಡಿದ ಅರ್ಜಿಯನ್ನು ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:08232–238377 ಹಾಗೂ ಇಮೇಲ್ ddmandyatourism@gmail.comಅನ್ನು ಸಂಪರ್ಕಿಸಬಹುದು ಎಂದು ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** ಪ್ರವಾಸೋದ್ಯಮ ಇಲಾಖೆ ವತಿಯಿಂದ ಎಸ್.ಸಿ.ಎಸ್.ಟಿ/ಟಿ.ಎಸ್.ಟಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ದಿಮೆದಾರರನ್ನು ಉತ್ತೇಜಿಸಲು Entrepreneurshipವಿಷಯದ ಬಗ್ಗೆ 1 ತಿಂಗಳು ಕೌಶಲ್ಯಾಭಿವೃದ್ಧಿ ತರಬೇತಿ ಹಾಗೂ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್‌ಕ್ಯಾಂಟೀನ್ ನಡೆಸಲು 5 ಲಕ್ಷ ಸಹಾಯಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲೆಯ ಪರಿಶಿಷ್ಟ ಜಾತಿ 7 ಮತ್ತು ಪರಿಶಿಷ್ಟ ಪಂಗಡ 4 ಒಟ್ಟು 11 ಅಭ್ಯರ್ಥಿಗಳನ್ನು ಆಯ್ಕೆ ಮಾಡುವಗುರಿ ಹೊಂದಲಾಗಿದೆ, Entrepreneurshipಶಿ ಕಾರ್ಯಕ್ರಮಕ್ಕೆ ಆಯ್ಕೆ ಆಗಲು ಕನಿಷ್ಠ ಹತ್ತನೇ ತರಗತಿ ಉತ್ತೀರ್ಣರಾಗಿರಬೇಕು ಹಾಗೂ 20–45 ರ ವಯೋಮಿತಿ ಒಳಗಿರಬೇಕು, ತರಬೇತಿಯ ಕಾಲಾವಧಿ 150 ಗಂಟೆಗಳಾಗಿರುತ್ತದೆ. ಜನವರಿ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿದೂ. ಸಂ: 08232–238377 ಹಾಗೂ ಇಮೇಲ್ ddmandyatourism@gmail.comಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.7 ರಂದು ಉದ್ಯೋಗ ಮೇಳ

**ಮಂಡ್ಯ:** ಜಿಲ್ಲಾಡಳಿತ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಜಿಲ್ಲಾ ಉದ್ಯೋಗ ವಿನಿಮಯಕಚೇರಿ, ಮಂಡ್ಯ ಸರ್ಕಾರಿ ವಿಶ್ವವಿದ್ಯಾನಿಲಯ ಇವರ ಸಂಯುಕ್ತಾಶ್ರಯದಲ್ಲಿ ರೋಜ್ ಗಾರ್/ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ವಿವಿಧ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಎಸ್‌ಎಸ್ ಎಲ್ ಸಿ, ಪಿಯುಸಿ, ಐಟಿಐ, ಡಿಪ್ಲೋಮಾ, ಯಾವುದೇ ಪದವಿ, ಮತ್ತು ಬಿಎಸ್ಸಿ(ನರ್ಸಿಂಗ್) ಉತ್ತೀರ್ಣರಾದ 18 ರಿಂದ 45 ವರ್ಷದೊಳಗಿನ ಅಭ್ಯರ್ಥಿಗಳು ಫೆಬ್ರವರಿ 7 ಬೆಳಿಗ್ಗೆ 9:00 ಗಂಟೆಗೆ ತಮ್ಮ ಎಲ್ಲಾ ಸ್ವ–ವಿವರ ಮತ್ತು ಆಧಾರ್ ಕಾರ್ಡ್ ನಕಲು ಪ್ರತಿಗಳೊಂದಿಗೆ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ.08232–295010/807 3264498/7975940277 ಅನ್ನು ಸಂಪರ್ಕಿಸಬಹುದು ಹಾಗೂ https://bit.ly/4abg0I3 ಲಿಂಕ್ ಬಳಸಿ ನೋಂದಾಯಿಸಿಕೊಳ್ಳಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ

**ಮೈಸೂರು:** ಜ್ಞಾನಬುತ್ತಿ ಸಂಸ್ಥೆ ವತಿಯಿಂದ ಅಬಕಾರಿ ಮತ್ತು ಪೊಲೀಸ್ ಇಲಾಖೆಯ ಪಿ.ಸಿ ಮತ್ತು ಎಸ್.ಐ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ನೀಡಲು ಜನವರಿ 30 ರೊಳಗಾಗಿ ಸಂಜೆ 5:30 ರಿಂದ 7:30 ರವರೆಗೆ ಮೈಸೂರಿನ ಲಕ್ಷ್ಮೀಪುರಂ ಸರ್ಕಾರಿ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜಿನ ಆವರಣದ ಜ್ಞಾನಬುತ್ತಿ ಸಂಸ್ಥೆಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಕಾರ್ಯದರ್ಶಿ ಹೆಚ್.ಬಾಲಕೃಷ್ಣ 9448117455, ಹೆಚ್ಚಿನ ವಿವರಗಳಿಗೆ ಸಂಯೋಜಕರಾದ ಸಿ.ಕೆ.ಕಿರಣ್ 9972830857 ಹಾಗೂ ಕೆ.ವೈ.ನಾಗೇಂದ್ರ, 8296788251 ನ್ನು ಸಂಪರ್ಕಿಸಬಹುದು ಎಂದು ಕಾರ್ಯದರ್ಶಿ ಹೆಚ್.ಬಾಲಕೃಷ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಹಿರಂಗ ಹರಾಜು

**ಮೈಸೂರು:** ಮೈಸೂರು ಜಿಲ್ಲೆಯ ತೋಟಗಾರಿಕೆಯ ಉಪನಿರ್ದೇಶಕರ ಅಧೀನದ ಲಿಂಗಾಬುಂಧಿ ಕ್ಷೇತ/ಸಸ್ಯಗಾರಗಳಲ್ಲಿನ ಜವವರಿ 1,2025 ರಿಂದ ಡಿಸೆಂಬರ್ 31,2025 ರ ವರೆಗಿನ ತೆಂಗು ಫಸಲುಗಳನ್ನು ರೂಡಿಸಿಕೊಳ್ಳಲು ಟೆಂಡರ್ ಮೂಲಕ ವಿಲೇವಾರಿ ಮಾಡಲಾಗುತ್ತದೆ. ಆಸಕ್ತರು ಖಾಲಿ ಟೆಂಡರ್ ಫಾರಂಗಳಿಗೆ ರೂ.25/– ಪಾವತಿಸಿ ಸಹಾಯಕ ತೋಟಗಾರಿಕೆಯ ನಿರ್ದೇಶಕರ ಕಚೇರಿಯಲ್ಲಿ ಪಡೆದುಕೊಳ್ಳಬಹುದಾಗಿದ್ದು, ಭರ್ತಿ ಮಾಡಿದ ಟೆಂಡರ್ ಫಾರಂನ್ನು ನಿಗಧಿತ ಠೇವಣಿ ಮೊತ್ತ ಹಾಗೂ ಟೆಂಡರ್ ಠೇವಣಿ ಮೊತ್ತದ ಶೇ 50% ಭಾಗಶ: ಹಣಕ್ಕೆ ಕಡ್ಡಾಯವಾಗಿ ರಾಷ್ಟ್ರೀಯ ಬ್ಯಾಂಕ್‌ಗಳಿಂದ ಡಿಮ್ಯಾಂಡ್ ಡ್ರಾಪ್SKUP, BANGLORE(Payable at Mysuru) ಹೆಸರಿಗೆ ಡಿ. ಡಿ ತೆಗೆದು ಲಗತ್ತಿಸಿ ಲಕೋಟಿಯಲ್ಲಿಟ್ಟು ಲಿಂಗಾಬುಂಧಿ ಸಹಾಯಕ ತೋಟಗಾರಿಕೆಯ ನಿರ್ದೇಶಕರ ಕಚೇರಿಗೆ ಜನವರಿ 30 ರಂದು ಬೆಳಗ್ಗೆ 11.30 ರೊಳಗೆ ಸಲ್ಲಿಸಬೇಬಹುದು ಎಂದು ಸಹಾಯಕ ತೋಟಗಾರಿಕೆಯ ನಿರ್ದೇಶಕರು ತಿಳಿಸಿದ್ದಾರೆ.

# ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿಸಭೆ

**ಚಾಮರಾಜನಗರ:** ನಗರದತಾಲೂಕುಕಚೇರಿ ಸಭಾಂಗಣದಲ್ಲಿಗುರುವಾರಎಂಎಸ್‌ಐಎಲ್‌ಅಧ್ಯಕ್ಷ, ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರಅಧ್ಯಕ್ಷತೆಯಲ್ಲಿ ಬಗರ್ ಹುಕುಂ ಸಾಗುವಳಿ ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ಸಭೆನಡೆಯಿತು.

ಕಡತ ಪರಿಶೀಲಿಸಿದ ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಕಳೆದ ವರ್ಷ ನ.28ರಂದು ನಡೆದ ಬಗರ್ ಹುಕುಂ ಸಾಗುವಳಿ ಸಮಿತಿ ಸಭೆಯಲ್ಲಿ 9 ಅರ್ಜಿಗಳ ಪೈಕಿ 7, ಜ.6ರಂದು ನಡೆದ 2ನೇಹಂತದ ಸಭೆಯಲ್ಲಿ16 ಅರ್ಜಿಗಳಿಗೆ 13, ಇಂದಿನ ಸಭೆಯಲ್ಲಿ ಹರವೆ ಹಾಗೂ ಹರದನಹಳ್ಳಿ ಹೋಬಳಿ ವ್ಯಾಪ್ತಿಯ ಗ್ರಾಮಗಳ ಫಲಾನುಭವಿಗಳ 15 ಅರ್ಜಿ ಸಲ್ಲಿಕೆಯಾಗಿದ್ದು, ಅವುಗಳಲ್ಲಿ 1ತಿರಸ್ಕೃತ, 2 ಅರ್ಜಿಗಳು ಪರಿಶೀಲನೆಗೆ ಹೋಗಿವೆ. ಮುಂದಿನ ಸಭೆಯಲ್ಲಿ ಅನುಮೋದನೆಯಾಗಿರುವ ಸಾಗುವಳಿಚೀಟಿಗಳನ್ನು ಫಲಾನುಭವಿಗಳಿಗೆ ಸಾಗುವಳಿಚೀಟಿ ವಿತರಿಸಲುಕ್ರವಹಿಸಲಾಗುವುದುಎಂದರು.




ಬಗರ್ ಹುಕುಂ ಸಾಗುವಳಿ ಸಕ್ರಮೀಕರಣಸಮಿತಿ ಸದಸ್ಯರಾದ ಬಿಸಲವಾಡಿರವಿ, ಅರಕಲ ವಾಡಿಮಲ್ಲಿಕಾಚನ್ನೇಗೌಡ, ಬೋಗಾಪುರ ಮಹಾಲಿಂಗ, ತಹಸೀಲ್ದಾರ್ ಗಿರಿಜಾ, ವಿಷಯ ನಿರ್ವಾಹಕಅವಿನಾಶ್, ಜಿಲ್ಲಾ ಭೂಮಿ ಸಮಾಲೋಚಕರಾಜೇಂದ್ರ, ಶಿರಸ್ತೇದಾರ್ ಬಿ.ಎನ್.ವಿನು, ರಾಜಸ್ವನಿರೀಕ್ಷಕರು, ಗ್ರಾಮಾಡಳಿತಾಧಿಕಾರಿಗಳು ಹಾಜರಿದ್ದರು.

## ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ಚಾಮರಾಜನಗರ:** ಪ್ರವಾಸೋದ್ಯಮ ಇಲಾಖೆಯಿಂದ 2024–25ನೇ ಸಾಲಿಗೆ ಎಸ್.ಎಸ್.ಪಿ, ಟಿ.ಎಸ್.ಪಿ ಯೋಜನೆಯಡಿಯಲ್ಲಿ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟಪಂಗಡದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಉದ್ಯಮಶೀಲತೆ ವಿಷಯದ ಬಗ್ಗೆ ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ಹಾಗೂ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ನಡೆಸಲು ನೀಡುವ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟಜಾತಿಗೆ ಸೇರಿದ 5, ಪರಿಶಿಷ್ಟಪಂಗಡಕ್ಕೆ ಸೇರಿದ 3 ಅಭ್ಯರ್ಥಿಗಳಿಗೆ ಗುರಿ ನಿಗದಿಪಡಿಸಲಾಗಿದೆ. ತರಬೇತಿಯನ್ನು ವಸತಿಸಹಿತ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರ ಸಂಸ್ಥೆಗಳ ಮೂಲಕ ಕಾರ್ಯಕ್ರಮವನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದೆ.

20 ರಿಂದ 45 ವಯಸ್ಸಿನ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ ಒಂದು ತಿಂಗಳ (4 ವಾರ) ಅವಧಿಯ ಉದ್ಯಮಶೀಲತೆ ತರಬೇತಿ ನೀಡಲಾಗುತ್ತದೆ. ಅರ್ಜಿಯನ್ನು ನಗರದ ಜಿಲ್ಲಾಡಳಿತ ಭವನದ ಎರಡನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 217 ರಲ್ಲಿನ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆದು ಅಗತ್ಯ ದಾಖಲೆಗಳೊಂದಿಗೆ ದ್ವಿ–ಪ್ರತಿಗಳಲ್ಲಿ ಜನವರಿ 31 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾಡಳಿತ ಭವನದಲ್ಲಿರುವ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಜಯಂತಿ ಅರ್ಥಪೂರ್ಣ ಆಚರಣೆ

**ಮೈಸೂರು:** ವಿವಿಧ ಜಯಂತಿಗಳನ್ನು ಅರ್ಥಪೂರ್ಣವಾಗಿ ಹಾಗೂ ಮಹಾನುಭವರ ಸಂದೇಶಗಳನ್ನು ಸಮಾಜಕ್ಕೆ ನೀಡುವ ರೀತಿ ಜಯಂತಿಗಳ ಆಚರಣೆ ಮಾಡಲಾಗುವುದು ಎಂದು ಅಪರ ಜಿಲ್ಲಾಧಿಕಾರಿಗಳಾದ ಡಾ. ಪಿ ಶಿವರಾಜು ಅವರು ತಿಳಿಸಿದರು ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ವಿವಿಧ ಜಯಂತಿಗಳಾದ ಸಂತ ಸೇವಾಲಾಲ್ ಜಯಂತಿ, ಛತ್ರಪತಿ ಶಿವಾಜಿ ಜಯಂತಿ, ಸರ್ವಜ್ಞ ಜಯಂತಿ ಹಾಗೂ ಸವಿತಾ ಮಹರ್ಷಿ ಜಯಂತಿಗಳ ಆಚರಣೆ ಸಂಬಂಧ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಂತ ಸೇವಾಲಾಲ್ ಜಯಂತಿಯನ್ನು ಸಮುದಾಯದ ಮುಖಂಡರ ಮನವಿ ಮೇರೆಗೆ ರಂಗಮಂದಿರದಲ್ಲಿ ಆಚರಣೆ ಮಾಡಲು ದಿನಾಂಕ ನಿಗದಿಪಡಿಸಲಾಗಿದೆ. ಛತ್ರಪತಿ ಶಿವಾಜಿ ಜಯಂತಿಯನ್ನು ಫೆಬ್ರವರಿ 19 ರಂದು ಬೆಳಿಗ್ಗೆ 11.30 ಗಂಟೆಗೆ ಕಲಾಮಂದಿರದಲ್ಲಿ ಆಚರಣೆ ಮಾಡಲಾಗುವುದು. ಫೆಬ್ರವರಿ 20 ರಂದು ಸಂತ ಕವಿ ಸರ್ವಜ್ಞ ಜಯಂತಿಯನ್ನು ಕಿರು ರಂಗ ಮಂದಿರದಲ್ಲಿ ಬೆಳಗ್ಗೆ 11.00 ಗಂಟೆಗೆ ಆಚರಣೆ ಮಾಡಲಾಗುವುದು. ಸವಿತಾ ಮಹರ್ಷಿ ಜಯಂತಿಯನ್ನು ಫೆಬ್ರವರಿ 5 ರಂದು ಕಿರುರಂಗಮಂದಿರದಲ್ಲಿ ಬೆಳಗ್ಗೆ 11.00 ಆಚರಣೆ ಮಾಡಲಾಗುವುದು ಎಂದು ತಿಳಿಸಿದರು. ಜಯಂತಿಗಳು ನಡೆಯುವ ಸ್ಥಳದ ಸ್ವಚ್ಚತೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆ, ತಳಿರು ತೋರಣ, ಹಾಗೂ ಊಟದ ಜಾಗಕ್ಕೆ ಶಾಮಿಯಾನ ವ್ಯವಸ್ಥೆಯನ್ನು ಮೈಸೂರು ಮಹಾನಗರ ಪಾಲಿಕೆಯ ವತಿಯಿಂದ ಮಾಡಬೇಕು. ಸಮುದಾಯದ ಮುಖಂಡರು ತಮ್ಮ ತಮ್ಮ ಸಮುದಾಯದ ಬಡವರಿಗೆ ಸಹಾಯ ಮಾಡಬೇಕು. ಸಮುದಾಯದ ಮಕ್ಕಳಿಗೆ ಶೈಕ್ಷಣಿಕ ಸಹಾಯ ಮಾಡಬೇಕು. ಜಯಂತಿಗಳನ್ನು ಆಚರಣೆ ಮಾಡುವುದು ಅವರ ಆಚಾರ ವಿಚಾರದಾರೆಗಳನ್ನು ಯುವ ಜನತೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಆಗ ಜಯಂತಿಗಳನ್ನು ಆಚರಣೆ ಮಾಡಿದಕ್ಕೆ ಒಂದು ಅರ್ಥ ಬರುತ್ತದೆ ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಎಂ ಡಿ ಸುದರ್ಶನ್ ಅವರು ಮಾತನಾಡಿ ಜಯಂತಿಗಳ ಆಚರಣೆಗೆ ಶಿ?ಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಜನಪ್ರತಿನಿಧಿಗಳಿಗೆ ಮುಖಂಡರಿಗೆ ಆಹ್ವಾನ ನೀಡಲಾಗುವುದು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ವೇದಿಕೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುವುದು. ಛತ್ರಪತಿ ಶಿವಾಜಿ ಜಯಂತಿಯ ಮೆರವಣಿಗೆ ಬೆಳಿಗ್ಗೆ 9.30 ಗಂಟೆಗೆ ಕೋಟೆ ಆಂಜನೇಯ ದೇವಸ್ಥಾನದ ಬಳಿಯಿಂದ ಪ್ರಾರಂಭವಾಗಿ ಕಲಾ ಮಂದಿರದಲ್ಲಿ ಅಂತ್ಯವಾಗುವುದು ಎಂದು ಮಾಹಿತಿ ನೀಡಿದರು.

ಸಮುದಾಯದ ಮುಖಂಡರು ಮಾತನಾಡಿ ಫೆಬ್ರವರಿ 15 ರಂದು ಸಂತ ಸೇವಾಲಾಲ್ ಜಯಂತಿ ಇದೆ. ಆದರೆ ಆ ದಿನಾಂಕದಂದು ನಮ್ಮ ಸಮುದಾಯದ ಬೇರೆ ಕಾರ್ಯಕ್ರಮ ಇರುವುದರಿಂದ ಬೇರೆ ದಿನಾಂಕವನ್ನು ನಿಗದಿಪಡಿಸಿಕೊಂಡಬೇಕು ಎಂದು ಸಭೆಗೆ ಮನವಿ ಮಾಡಿದರು. ತಮ್ಮ ತಮ್ಮ ಜಯಂತಿಗಳ ಆಚರಣೆಯ ದಿವ್ಯ ಸಾನಿಧ್ಯಕ್ಕೆ ತಮ್ಮ ಸಮುದಾಯಗಳ ಸ್ವಾಮೀಜಿಗಳ ಹೆಸರನ್ನು ಆಯ್ಕೆ ಮಾಡಿ ಒಂದೆರಡು ದಿನಗಳಲ್ಲಿ ನೀಡಲಾಗುವುದು. ಜಯಂತಿಯಲ್ಲಿ ವಿಶೇಷ ಉಪನ್ಯಾಸ ನೀಡಲು ಸಂಪನ್ಮೂಲ ವ್ಯಕ್ತಿಗಳನ್ನು ಆಯ್ಕೆ ಮಾಡಿ ಹೆಸರನ್ನು ನೀಡಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

# ರೈತರ ಸಮಸ್ಯೆಗಳ ಬಗ್ಗೆ ಮಾತನಾಡುತ್ತ ಕಣ್ಣೀರಿಟ್ಟ ವಿದ್ಯಾರ್ಥಿ!

**ಹುಳಿಯಾರು:** ಹುಳಿಯಾರಿನ ಕಾಮನಬಿಲ್ಲು ಪೌಂಡೇಷನ್ ವತಿಯಿಂದ ಇಲ್ಲಿನ ಕೆಪಿಎಸ್ ಶಾಲೆಯ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಇತ್ತಿಚೆಗೆ ಭಾಷಣ ಸ್ಪರ್ಧೆ ಏರ್ಪಡಿಸಿ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

10 ನೇ ತರಗತಿಯ ವಿನೂತ ತನ್ನ ಭಾಷಣದಲ್ಲಿ ರೈತರ ಬೆಳೆಗೆ ಬೆಲೆ ಸಿಗದೆ ಹೇಗೆ ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಾನೆ ಎಂಬುದನ್ನು ವಿವರಿಸುವಾಗ ತಮಗಾದ ಬೆಲೆ ಅನ್ಯಾಯದ ಬಗ್ಗೆ ವಿವರಿಸುತ್ತ ಕಣ್ಣೀರಾಕಿದರು. ಹೂವು ಬೆಳೆದು ಜೀವನ ನಿರ್ವಹಿಸುತ್ತಿದ್ದ ನಮಗೆ ಲಾಕ್‌ಡೌನ್ ಬರಸಿಡಿಲಿನಂತೆ ಅಪ್ಪಳಿಸಿತ್ತು. ಸ್ಥಳೀಯವಾಗಿ ಮಾರುಕಟ್ಟೆ ಇಲ್ಲದಾದಾಗ ಬೆಂಗಳೂರಿಗೆ ಮಾರಲು ನಮ್ಮ ತಂದೆ ಬಾಡಿಗೆ ವಾಹನದಲ್ಲಿ ತೆಗೆದುಕೊಂಡು ಹೋಗಿದ್ದರು. ಆದರೆ ಹೂವು ಬಿಡಿಸಲು ಕೊಟ್ಟ ಕೂಲಿ ಹಣವೂ ಸಹ ಗಿಟ್ಟಲಿಲ್ಲ ಎಂದು ನೆನಪು ಮಾಡಿಕೊಂಡರು.

9 ನೇ ತರಗತಿ ಯೋಗಿಶ್ವರ್ ತನ್ನ ಭಾಷಣದಲ್ಲಿ ರೈತ ದೇಶದ ಜನರಿಗೆ ಅನ್ನ ಬೆಳೆದುಕೊಡಲು ರೈತ ಸಾಲಸೂಲ ಮಾಡಿ ದುಡಿಯುತ್ತಾನೆ. ಇಂತಹ ರೈತ ಸಂಕಷ್ಟಕ್ಕೆ ಸಿಲುಕಿದಾಗ ಸಾಲ ಮನ್ನ ಮಾಡಿದರೆ ಏನು ತಪ್ಪು ಎಂದು ಪ್ರಶ್ನಿಸಿದ. ಸರ್ಕಾರಿ ನೌಕರರು ಬೀದಿಗಿಳಿದರೆ ಸರ್ಕಾರ ಅವರ ಬೇಡಿಕೆಗಳಿಗೆ ಅಸ್ತು ಎನ್ನುತ್ತದೆ. ಆದರೆ ರೈತರು ಬೀದಿಗಿಳಿದರೆ ಕ್ಯಾರೆ ಎನ್ನುವುದಿಲ್ಲ. ಹಾಗಾಗಿ ರೈತ ಹೋರಾಟಕ್ಕೆ ಅನ್ನ ತಿನ್ನುವ ಎಲ್ಲರೂ ಕೈ ಜೋಡಿಸಬೇಕು. ಆಗ ಮಾತ್ರ ಸರ್ಕಾರ ತಲೆ ಬಾಗುತ್ತದೆ ಎಂದು ಅಭಿಪ್ರಾಯ ಪಟ್ಟರು.



ಮೋದಿ ಸರ್ಕಾರ ಎಲ್ಲ ರೈತರಿಗೂ ಸಮಾನವಾಗಿ 6 ಸಾವಿರ ಹಣ ಹಾಕುವ ಬದಲು ಇರುವ ಜಮೀನಿಗೆ ಅನುಗುಣವಾಗಿ ಹಣ ಹಾಕಬೇಕು. ಅಣುಬಾಂಬ್ ಕಂಡು ಹಿಡಿಯುವ ವಿಜ್ಞಾನಿಗೂ ಬಾನೆತ್ತರದ ಬಿಲ್ಡಿಂಗ್ ಕಟ್ಟುವ ಎಂಜಿನಿಯರ್‌ಗೂ ಆಗದ ಅನ್ನವನ್ನು ಬೆಳೆಯುವ ರೈತನಿಗೆ ಮಾಧ್ಯಮಗಳು ಹೀರೋ ರೀತಿ ತೋರಿಸಬೇಕು. ಸರ್ಕಾರ ರಾಸಾಯನಿಕ ಗೊಬ್ಬರಕ್ಕೆ ಸಬ್ಸಿಡಿ ಕೊಟ್ಟಂತೆ ಸಾವಯವ ಗೊಬ್ಬರಕ್ಕೂ ಕೊಟ್ಟರೆ ಹಸು, ಕುರಿ ಸಾಕಾಣಿಕೆ ಹೆಚ್ಚಾಗುವ ಜೊತೆಗೆ ರೈತನ ಭೂಮಿ ಫಲವತ್ತೆ ಹೆಚ್ಚುತ್ತದೆ. ಸರ್ಕಾರಿ ಕಛೇರಿಗಳಲ್ಲಿ ಕೆಲಸ ಕಾರ್ಯ ಮಾಡಿಸಲು, ಬ್ಯಾಂಕ್‌ಗಳಲ್ಲಿ ಸಾಲ ಪಡೆಯಲು ರೈತ ಚಪ್ಪಲಿ ಸವೆಸುತ್ತಿದ್ದು ವಿಶೇಷ ಆಧ್ಯತೆ ಮೇರೆಗೆ ರೈತರ ಕೆಲಸಕಾರ್ಯ ಮಾಡಿಕೊಡುವ ಕಾನೂನು ಜಾರಿಯಾಗಬೇಕು ಹೀಗೆ ಒಬ್ಬೊಬ್ಬ ವಿದ್ಯಾರ್ಥಿಗಳು ರೈತರ ಸಮಸ್ಯೆಗಳ ಪರಿಹಾರಕ್ಕೆ ಮಾರ್ಗೋಪಾಯಗಳನ್ನು ತಮ್ಮ ಭಾಷಣದಲ್ಲಿ ಸೂಚಿಸಿದರು.

ಈ ಸಂದರ್ಭದಲ್ಲಿ ರೈತ ಹೋರಾಟಗಾರನ್ನು ವಿಶೇಷ ಆಹ್ವಾನಿತರಾಗಿ ಆಹ್ವಾನಿಸಿ ಅವರು ಹೊರಾಡಿ ಯಶಸ್ವಿಯಾಗಿರುವ ಹೇಮಾವತಿ ನೀರಾವರಿ ಹೋರಾಟ, ರಾಗಿ ಕೊಬ್ಬರಿ ಬೆಲೆಗಾಗಿ ಹೋರಾಟ, ರೈತರ ಜಮೀನು ಹರಾಜು ವಿರುದ್ಧ ಹೋರಾಟ, ಹನಿ ನೀರಾವರಿ ಸೆಟ್ ವಿತರಣೆಯ ಅನ್ಯಾಯದ ವಿರುದ್ಧ ಹೋರಾಟ, ಡೈಲಿ ಮಾರ್ಕೆಟ್ ಆರಂಭಕ್ಕಾಗಿ ಹೋರಾಟ ಇತಿಹಾಸವನ್ನು ವಿದ್ಯಾರ್ಥಿಗಳಿಗೆ ತಿಳಿಸಲಾಯಿತು.

ಭಾಷಣ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಕಾಮನಬಿಲ್ಲು ಪೌಂಡೇಷನ್ ನ ಅಧ್ಯಕ್ಷ ಚನ್ನಕೇಶವ, ನಿರ್ದೇಶಕ ಪ್ರಕಾಶ್, ರೈತ ಸಂಘದ ಕೆಂಕೆರೆ ಸತೀಶ್, ಹೊಸಹಳ್ಳಿ ಚಂದ್ರಣ್ಣ, ಹುಳಿಯಾರು ಕರಿಯಪ್ಪ, ದಸೂಡಿ ನಾಗರಾಜು, ತಮ್ಮಡಿಹಳ್ಳಿ ಮಲ್ಲಿಕಾರ್ಜುನ್, ಉಪಪ್ರಾಚಾರ್ಯೆ ಜ್ಯೋತಿ ಬಹುಮಾನ ವಿತರಿಸಿದರು.

**ಬಹುಮಾನ ಪಡೆದ ವಿದ್ಯಾರ್ಥಿಗಳ ವಿವರ:** 8 ನೇ ತರಗತಿಯಲ್ಲಿ ಮಾಧುರಿ (ಪ್ರ), ಋತು (ದ್ವಿ), ದೀಪಿಕಾ (ತೃ), 9 ನೇ ತರಗತಿಯಲ್ಲಿ ಯೋಗೀಶ್ವರ್ (ಪ್ರ), ನಂದಿನಿ (ದ್ವಿ), ನಂದಿತಾ (ತೃ), 10 ನೇ ತರಗತಿಯಲ್ಲಿ ಚುಂಬನ (ಪ್ರ), ಮೋನಿಷಾ (ದ್ವಿ), ವಿನುತಾ 9 (ತೃ)

# ಸಂಜೆ ಟಿಪ್ಸ್

## ಐಪಿಒ ಬಿಡುಗಡೆ ಮಾಡಲು ಸೆಬಿಗೆ ಡಿ ಆರ್ ಎಚ್ ಪಿ ಸಲ್ಲಿಸಿದ ವೆರಿಟಾಸ್ ಫೈನಾನ್ಸ್

ಭಾರತೀಯ ರಿಸರ್ವ್ ಬ್ಯಾಂಕ್ ನಲ್ಲಿ ನೋಂದಾಯಿಸಲ್ಪಟ್ಟಿರುವ, ಶ್ರೇಣಿ ಆಧಾರಿತವಾದ ನಿಯಮಗಳ ಅಡಿ, ಆರ್ ಬಿ ಐನಿಂದ 'ಮಧ್ಯಮ ಪದರದ ಬ್ಯಾಂಕಿಂಗ್ ಯೇತರ ಹಣಕಾಸು ಕಂಪನಿ' ಎಂದು ವರ್ಗೀಕರಿಸಲಾದ ''ವೆರಿಟಾಸ್ ಫೈನಾನ್ಸ್ ಲಿಮಿಟೆಡ್'' ಠೇವಣಿಯೇತರ ಬಿಡಿ(ಚಿಲ್ಲರೆ) ಹಣಕಾಸು ವ್ಯವಹಾರಗಳನ್ನು ನಡೆಸುತ್ತಿದೆ. ಈ ಕಂಪನಿಯು ಆರಂಭಿಕ ಷೇರು ಬಿಡುಗಡೆ ಅಥವಾ ಸಾರ್ವಜನಿಕ ಷೇರು ಮಾರಾಟ(ಐಪಿಒ) ಮಾಡಿ ನಿಧಿ ಕ್ರೋಡೀಕರಿಸುವ ಉದ್ದೇಶದಿಂದ ಮಾರುಕಟ್ಟೆ ನಿಯಂತ್ರಕ ಸಂಸ್ಥೆ ಸೆಬಿ(ಸೆಕ್ಯೂರಿಟೀಸ್ ಎಕ್ಸ್ ಛೇಂಜ್ ಬೋರ್ಡ್ ಆಫ್ ಇಂಡಿಯಾ)ಗೆ, ತನ್ನ ವ್ಯಾಪಾರ ವಹಿವಾಟಿನ ಸಂಕ್ಷಿಪ್ತ ವಿವರವುಳ್ಳ ದಾಖಲೆ ಪತ್ರಗಳ ಕರಡು(ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್-ಡಿ ಆರ್ ಎಚ್ ಪಿ) ಸಲ್ಲಿಸಿದೆ. ವೈವಿಧ್ಯಮಯ, ಬಿಡಿ ಹಣಕಾಸು ವ್ಯಾಪಾರ ವಹಿವಾಟಿನಲ್ಲಿ ಗಮನ ಕೇಂದ್ರೀಕರಿಸಿರುವ ಬ್ಯಾಂಕಿಂಗ್ ಯೇತರ ಹಣಕಾಸು ಕಂಪನಿಯಾಗಿ ''ವೆರಿಟಾಸ್ ಫೈನಾನ್ಸ್ ಲಿಮಿಟೆಡ್'', ಪ್ರಾಥಮಿಕವಾಗಿ ಸಣ್ಣ, ಅತಿಸಣ್ಣ ಮತ್ತು ಮಧ್ಯಮ ಗಾತ್ರದ ಉದ್ಯಮಗಳು (ಎಂಎಸ್ಎಂಇ) ಮತ್ತು ಸ್ವಯಂ-ಉದ್ಯೋಗಿಗಳಿಗೆ ಸಣ್ಣ ವ್ಯಾಪಾರ ಸಾಲಗಳನ್ನು ಒದಗಿಸುತ್ತದೆ. ವರ್ಷಗಳು ಉರುಳಿದಂತೆ, ಗೃಹ ಸಾಲಗಳು ಮತ್ತು ಬಳಸಿದ ವಾಣಿಜ್ಯ ವಾಹನಗಳಿಗೆ ಸಾಲಗಳನ್ನು ಒದಗಿಸುವ ಮೂಲಕ ತನ್ನ ಹಣಕಾಸು ವ್ಯವಹಾರಗಳನ್ನು ವಿಸ್ತರಿಸಿದೆ. 600 ಕೋಟಿ ರೂ.ವರೆಗಿನ ಮೊತ್ತದ ತಾಜಾ ಷೇರು(ದಿ ಫ್ರೆಶ್ ಇಶ್ಯೂ)ಗಳನ್ನು ಮಾರಾಟ ಮಾಡುವ ಗುರಿ ಹಾಕಿಕೊಂಡಿದೆ. ಅಲ್ಲದೆ, ಈಕ್ವಿಟಿ ಷೇರುಗಳ ಮಾರಾಟ ಕೊಡುಗೆ(ಆಫರ್ ಫಾರ್ ಸೇಲ್) ಮೂಲಕ 2,200 ಕೋಟಿ ರೂ. ಮೊತ್ತದ ಈಕ್ವಿಟಿ ಷೇರುಗಳನ್ನು ಮಾರಾಟ ಮಾಡಲಿದೆ. ಆಫರ್ ಫಾರ್ ಸೇಲ್ ಮೂಲಕ 10 ರೂ. ಮುಖಬೆಲೆಯ ಪ್ರತಿ ಈಕ್ವಿಟಿ ಷೇರುಗಳನ್ನು ಷೇರುಗಳ ಮಾರಾಟ ಪ್ರವರ್ತಕರಿಗೆ ಮಾರಾಟ ಮಾಡಲಿದೆ.

## ನಿಮಗಿದು ಗೊತ್ತೇ?

**ಎಂ. ವೆಂಕಟೇಶ್ ಶೇಷಾದ್ರಿ**

**19. ಸಿಂಡಿಕೇಟ್ ಬ್ಯಾಂಕ್ ಯಾವ ಬ್ಯಾಂಕ್ ನೊಂದಿಗೆ ವಿಲೀನಗೊಂಡಿದೆ ?**

[illegible]

## ಪಾಲಕ್ ಚಪಾತಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಗೋಧಿ ಹಿಟ್ಟು – 500 ಗ್ರಾಂ ತುಪ್ಪ – 2ರಿಂದ 3 ಟೇಬಲ್ ಸ್ಪೂನ್ ಅಡುಗೆ ಎಣ್ಣೆ – 3 ಸ್ಪೂನ್ ಪಾಲಕ್ ಸೊಪ್ಪು – ಒಂದು ಕಟ್ಟು ಉಪ್ಪು – ರುಚಿಗೆ ತಕ್ಕಷ್ಟು ಹಸಿಮೆಣಸಿನಕಾಯಿ – ಮೂರು ಬೆಳ್ಳುಳ್ಳಿ ಎರಡು ಎಸಳು ಅರಿಶಿಣ – ಚಿಟಿಕೆ ಕೊತ್ತಂಬರಿ ಪೌಡರ್ – ಚಿಟಿಕೆ ಜೀರಿಗೆ – ಅರ್ಧ ಚಮಚ

### ಮಾಡುವ ವಿಧಾನ

ಚಪಾತಿ ಮಾಡಲು ಮೊದಲು ಒಂದು ಕಟ್ಟಿನಷ್ಟು ಸೊಪ್ಪನ್ನು ನೀರಿನಲ್ಲಿ ಚೆನ್ನಾಗಿ ತೊಳೆದು ಕುದಿಯುವ ನೀರಿಗೆ ಹಾಕಿ. ಐದು ನಿಮಿಷಗಳ ಬಳಿಕ ಪಾಲಾಕ್ ಸೊಪ್ಪನ್ನು ಬಿಸಿ ನೀರಿನಿಂದ ತೆಗೆದು ತಣಿದಿರುವ ನೀರಿಗೆ ಹಾಕಿ ಇದಕ್ಕೆ ಐಸ್ ಕ್ಯೂಬ್ ಕೂಡ ಹಾಕಿದರೆ ಪಾಲಾಕ್ ಸೊಪ್ಪು ಬಣ್ಣ ಕಳೆದುಕೊಳ್ಳುವುದಿಲ್ಲ. ಪಾಲಕ್ ಸೊಪ್ಪು ತಣ್ಣಾಗಾದ ನಂತರ ಒಂದು ಮಿಕ್ಸರ್ ಜಾರ್ ಗೆ ಹಾಕಿ. ಅದಕ್ಕೆ ಹಸಿಮೆಣಸು, ಬೆಳ್ಳುಳ್ಳಿ, ಅರ್ಧ ಚಮಚ ಜೀರಿಗೆ ಹಾಕಿ ರುಬ್ಬಿ. ಇದಕ್ಕೆ ನೀರನ್ನು ಹಾಕುವ ಅಗತ್ಯ ಇಲ್ಲ. ಒಂದು ದೊಡ್ಡ ಪಾತ್ರೆಯಲ್ಲಿ ಗೋಧಿ ಹಿಟ್ಟನ್ನು ಹಾಕಿ ಅದಕ್ಕೆ ಉಪ್ಪು, ಅರಿಶಿಣ, ಕೊತ್ತಂಬರಿ ಸೊಪ್ಪು, ತುಪ್ಪ ಹಾಗೂ ಅಡುಗೆ ಎಣ್ಣೆ ಹಾಕಿ ಮಿಕ್ಸ್ ಮಾಡಿ. ಈಗ ಇದಕ್ಕೆ ರುಬ್ಬಿಟ್ಟುಕೊಂಡ ಪಾಲಾಕ್ ಪೇಸ್ಟ್ ಹಾಕಿ ಚೆನ್ನಾಗಿ ಕಲಸಿ ಅಗತ್ಯ ಇರುವಷ್ಟು ನೀರನ್ನು ಬಳಸಿ ಚಪಾತಿ ಹಿಟ್ಟಿನ ಹದಕ್ಕೆ ಮಾಡಿಕೊಳ್ಳಿ. ಚಪಾತಿ ಹಿಟ್ಟನ್ನು ಕಲಸಿದ ನಂತರ ಐದು ನಿಮಿಷ ಮುಚ್ಚಿ ಹಾಗೆಯೆ ಬಿಡಿ ಹಿಟ್ಟು ಚೆನ್ನಾಗಿ ನೆನೆದ ನಂತರ ಚಪಾತಿಯನ್ನು ಲಟ್ಟಿಸಿ ಬಿಸಿಬಿಸಿಯಾಗಿ ಚಪಾತಿ ರೆಡಿ ಮಾಡಿದರೆ ರುಚಿಕರವಾದ ಚಪಾತಿ ಸವಿಯಲು ಸಿದ್ಧ ಇದಕ್ಕೆ ಕೊಬ್ಬರಿ ಚಟ್ನಿ ಬಳಸಿದರೆ ಇನ್ನು ಟೇಸ್ಟಿ ಆಗಿರುತ್ತೆ.

## ದಿಶಾ ಪಟಾನಿ ಬೋಲ್ಡ್ ಲುಕ್ ವೈರಲ್



ಅದ್ಭುತವಾದ ನಟನೆ, ಮನಮೋಹಕ ಸೌಂದರ್ಯದ ಮೂಲಕ ಬಾಲಿವುಡ್ ನಲ್ಲಿ ತಮ್ಮದೇ ಆದ ಛಾಪು ಮೂಡಿಸಿರುವ ನಟಿ ದಿಶಾ ಪಟಾನಿ ಅವರ ಮೈಮಾಟಕ್ಕೆ ಮನಸೋಲದವರೇ ಇಲ್ಲ. ಇದೀಗ, ಕೆಲವೊಂದು ಬೋಲ್ಡ್ ಫೋಟೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಶೇರ್ ಮಾಡಿರುವ ದಿಶಾ ಪಟಾನಿ ಪಡ್ಡೆ ಹುಡುಗರ ಹಾರ್ಟ್ ಬೀಟ್ ಹೆಚ್ಚಿಸಿದ್ದಾರೆ.

ನೀರಿನಲ್ಲಿ ಮಿಂದೇಳುತ್ತಾ, ಸ್ನಾನ ಮಾಡುತ್ತಿರುವಂತೆ ಕೆಲವು ಬೋಲ್ಡ್ ಫೋಟೋಗಳನ್ನು ದಿಶಾ ಪಟಾನಿ ತಮ್ಮ ಇನ್ಸ್ಟಾಗ್ರಾಂ ನಲ್ಲಿ ಖಾತೆಯಲ್ಲಿ ಶೇರ್ ಮಾಡಿದ್ದಾರೆ. ಈ ವೈರಲ್ ಫೋಟೋಗಳಲ್ಲಿ ದಿಶಾ ಪಟಾನಿ ನೀರಿನಲ್ಲಿ ನಿಂತು ಮೈಮರೆತಿರುವಂತೆ ಕಾಣುತ್ತದೆ. ಇದರಲ್ಲಿ ದಿಶಾ ಕೂದಲು, ಮುಖ ಒದ್ದೆಯಾಗಿದ್ದು ಕಣ್ಣುಗಳನ್ನು ಬಾಗಿಸಿ ನಟಿ ಪೋಸ್ ನೀಡಿದ್ದಾರೆ.

ದಿಶಾ ಪಟಾನಿ ಎರಡು ವರ್ಷಗಳ ಹಿಂದೆ ಸಾಮಾಜಿಕ ಜಾಲತಾಣದಲ್ಲಿ ಶೇರ್ ಮಾಡಿರುವ ಈ ಫೋಟೋಗಳು ಇದೀಗ್ ಮತ್ತೊಮ್ಮೆ ವೈರಲ್ ಆಗುತ್ತಿವೆ. ಸಾವಿರಾರು ಜನ ಕಾಮೆಂಟ್ ಕೂಡ ಮಾಡುತ್ತಿದ್ದಾರೆ. ಇದರಲ್ಲಿ ಓರ್ವ ಸೋಷಿಯಲ್ ಮೀಡಿಯಾ ಬಳಕೆದಾರರು, ನಿಮ್ಮ ಸ್ಟೈಲ್ ಕಂಡು ಟೈಗರ್ ಶ್ರಾಫ್ ಎದೆಬಡಿತ ಜಾಸ್ತಿಯಾಗುತ್ತದೆ ಎಂದು ಬರೆದಿದ್ದಾರೆ.

ಆದಾಗ್ಯೂ, ದಿಶಾ ಪಟಾನಿ ಸಾಮಾಜಿಕ ಜಾಲತಾಣಗಳಲ್ಲಿ ಈ ರೀತಿಯ ಬೋಲ್ಡ್ ಲುಕ್ ಫೋಟೋಗಳನ್ನು ಹಂಚಿಕೊಳ್ಳುತ್ತಿರುವುದು ಇದೇ ಮೊದಲಲ್ಲ. ಈ ಹಿಂದೆಯೂ ಇಂತಹ ಹಲವು ಫೋಟೋ ವಿಡಿಯೋಗಳನ್ನು ಅವರು ಹಂಚಿಕೊಂಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ದಿಶಾ ಪಟಾನಿ ಟೈಗರ್ ಶ್ರಾಫ್ ಜೊತೆಗಿನ ಸಂಬಂಧದ ಬಗ್ಗೆ ಹೆಚ್ಚು ಚರ್ಚೆಯಲ್ಲಿದ್ದಾರೆ.



## ಕಾಲುಗಳ ಸೆಳೆತಕ್ಕೆ ಕಾರಣಗಳೇನು

### ಹೆಲ್ತ್ ಟಿಪ್ಸ್



ರಾತ್ರಿ ಕಾಲುಗಳಲ್ಲಿ ಸೆಳೆತಕ್ಕೆ ಹಲವು ಕಾರಣಗಳಿವೆ ಎನ್ನುತ್ತಾರೆ ಖ್ಯಾತ ನರರೋಗ ತಜ್ಞ ಡಾ.ವೇಮುಲ ಶ್ರೀಕಾಂತ್.

ದೇಹವನ್ನು ತೇವಾಂಶದಿಂದಿಡಲು ಸಾಕಷ್ಟು ನೀರು ಕುಡಿಯುವುದು ಅತ್ಯಗತ್ಯ. ಆದರೆ, ಸರಿಯಾದ ಪ್ರಮಾಣದಲ್ಲಿ ನೀರು ಕುಡಿಯದೇ ಇದ್ದರೆ ನಿರ್ಜಲೀಕರಣ ಉಂಟಾಗಿ ಕಾಲುಗಳಲ್ಲಿ ಸೆಳೆತ ಉಂಟಾಗುತ್ತದೆ.

ಕೆಲವು ಅಧ್ಯಯನಗಳ ಪ್ರಕಾರ, ಸ್ನಾಯುಗಳು ಹೆಚ್ಚು ವ್ಯಾಯಾಮ ಮಾಡುವಾಗ ಅಥವಾ ಅತಿಯಾಗಿ ವ್ಯಾಯಾಮ ಮಾಡುವಾಗ ಒತ್ತಡದಲ್ಲಿದ್ದಾಗ ಆಯಾಸ ಉಂಟಾಗುತ್ತದೆ. ರಾತ್ರಿ ವೇಳೆ ಕಾಲು ಸೆಳೆತಕ್ಕೆ ಇದೇ ಕಾರಣವಂತೆ.

ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಜನರು ಕಚೇರಿಗಳಲ್ಲಿ ಕೆಲಸ ಮಾಡುತ್ತಾರೆ. ಮೇಜಿನ ಬಳಿ ದೀರ್ಘಕಾಲ ಕುಳಿತು ಕೆಲಸ ಮಾಡುತ್ತಾರೆ. ಆದಾಗ್ಯೂ, ದೀರ್ಘಕಾಲ ಒಂದೇ ಭಂಗಿಯಲ್ಲಿ ಕುಳಿತುಕೊಳ್ಳುವುದು ಕಾಲಿನ ಸ್ನಾಯುಗಳಲ್ಲಿ ಒತ್ತಡ ಉಂಟುಮಾಡಬಹುದು. ಇದರ ಪರಿಣಾಮ ರಕ್ತ ಪರಿಚಲನೆ ಕಡಿಮೆಯಾಗುತ್ತದೆ ಮತ್ತು ಕಾಲುಗಳಲ್ಲಿ ಸೆಳೆತಕ್ಕೆ ಕಾರಣವಾಗುತ್ತದೆ. ವಯಸ್ಸಾದಂತೆ ಈ ಸಮಸ್ಯೆಯ ಸಾಧ್ಯತೆಗಳು ಹೆಚ್ಚು. ಅದರಲ್ಲೂ ಮುಖ್ಯವಾಗಿ, 60 ವರ್ಷಕ್ಕಿಂತ ಮೇಲ್ಪಟ್ಟವರಲ್ಲಿ ಕನಿಷ್ಠ ಶೇ 37 ರಷ್ಟು ಜನರು ರಾತ್ರಿ ಕಾಲು ಸೆಳೆತ ಅನುಭವಿಸುತ್ತಾರೆ ಎಂದು ಅನೇಕ ಅಧ್ಯಯನಗಳು ಹೇಳುತ್ತವೆ.

ರಾತ್ರಿಯ ಕಾಲಿನ ಸೆಳೆತದಿಂದ ಪರಿಹಾರ ಪಡೆಯಲು ನೀವು ಹೆಚ್ಚು ವಿಶ್ರಾಂತಿ ಪಡೆಯಬೇಕು. ತೀವ್ರತರವಾದ ನೋವು ನಿವಾರಿಸಲು ಕಾಲಿನ ಸ್ನಾಯುಗಳ ಸೆಳೆತದ ಪ್ರದೇಶದಲ್ಲಿ ಕೈಯಿಂದ ಮಸಾಜ್ ಮತ್ತು ರೋಲರ್ ಸಹಾಯದಿಂದ ಕಾಲುಗಳಿಗೆ ನಿಧಾನವಾಗಿ ಮಸಾಜ್ ಮಾಡಿ. ಅದೇ ರೀತಿ, ನಿಧಾನವಾಗಿ ತಿರುಗಿಸಿ. ನೋವಿರುವ ಪ್ರದೇಶಕ್ಕೆ ಬೆಚ್ಚಗಿನ ನೀರು ಹಾಕಿದರೆ, ಸೆಳೆತವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಇದರ ಜೊತೆಗೆ ಇನ್ನೂ ಕೆಲವು ಸಲಹೆಗಳನ್ನು ಪಾಲಿಸಿದರೆ ಈ ಸಮಸ್ಯೆಯನ್ನು ಸುಲಭವಾಗಿ ಕಡಿಮೆ ಮಾಡಿಕೊಳ್ಳಬಹುದು.

ದಿನವೂ ಮಲಗುವ ಮುನ್ನ ಲಘು ವ್ಯಾಯಾಮ ಮಾಡಿದರೆ ಉತ್ತಮ ಫಲಿತಾಂಶ ಸಿಗುತ್ತದೆ ಎನ್ನುತ್ತಾರೆ ವೈದ್ಯರು. ಜಾಗಿಂಗ್, ವಾಕಿಂಗ್, ರನ್ನಿಂಗ್, ಸೈಕ್ಲಿಂಗ್ ಮಾಡುವುದರಿಂದ ಸ್ನಾಯುಗಳಿಗೆ ಉತ್ತಮ ವಿಶ್ರಾಂತಿ ಸಿಗುತ್ತದೆ. ಇದರಿಂದ ಕಾಲು ನೋವು ಕಡಿಮೆಯಾಗುವುದಲ್ಲದೆ ಸೆಳೆತವನ್ನೂ ತಡೆಯುತ್ತದೆ.

## ತುಟಿ ಒಡೆಯಲು ವಿಟಮಿನ್ ಬಿ ಕೊರತೆ ಕಾರಣ

### ಬ್ಯೂಟಿ ಟಿಪ್ಸ್



ತುಟಿ ಒಡೆಯಲು ದೇಹದಲ್ಲಿ ವಿಟಮಿನ್ ಬಿ ಕೊರತೆ ಕಾರಣ ಎನ್ನಲಾಗುತ್ತದೆ. ಹೆಲ್ತ್ ಲೈನ್ ಪ್ರಕಾರ, ತುಟಿಗಳ ಮೇಲಿನ ಚರ್ಮವು ದೇಹದ ಚರ್ಮಕ್ಕಿಂತ 10 ಪಟ್ಟು ತೆಳ್ಳಗಿರುತ್ತದೆ. ಪೋಷಕಾಂಶಗಳ ಕೊರತೆಯು ಚರ್ಮ ಮತ್ತು ತುಟಿಗಳ ಮೇಲೆ ನೇರವಾಗಿ ಪರಿಣಾಮ ಬೀರುತ್ತದೆ. ವಿಟಮಿನ್ ಬಿ ಎಂಟು ನೀರಿನ ಜೀವಸತ್ವಗಳಿಂದ ಮಾಡಲ್ಪಟ್ಟಿದೆ. ಉದಾಹರಣೆಗೆ ಜೀವಕೋಶದ ಕಾರ್ಯ ಮತ್ತು ಶಕ್ತಿ ಉತ್ಪಾದನೆ, ಇದು ದೇಹಕ್ಕೆ ಅತ್ಯಂತ ಪ್ರಯೋಜನಕಾರಿಯಾಗಿದೆ. ವಿಟಮಿನ್ ಬಿ ದೇಹದಲ್ಲಿನ ಯಾವುದೇ ರೀತಿಯ ಗಾಯವನ್ನು ಗುಣಪಡಿಸಲು ಸಹಾಯ ಮಾಡುತ್ತದೆ. ವಿಟಮಿನ್ ಬಿ 9 ಕೊರತೆಯು ತುಟಿಗಳು ಒಡೆಯಲು ಕಾರಣವಾಗುತ್ತದೆ. ವಿಟಮಿನ್ ಃ9 ಅನ್ನು ಫೋಲಿಕ್ ಆಮ್ಲ ಎಂದೂ ಕರೆಯುತ್ತಾರೆ. ವಿಟಮಿನ್ ಬಿ 9 ಕೊರತೆಯು ಒಣ ಚರ್ಮ, ತುಟಿಗಳು, ಯಕೃತ್ತಿನ ಸಮಸ್ಯೆಗಳು ಮತ್ತು ಕೂದಲಿನ ಸಮಸ್ಯೆಗಳನ್ನು ಉಂಟುಮಾಡಬಹುದು. ತುಟಿಗಳು ಮೃದು ಮತ್ತು ಸುಂದರವಾಗಿರಲು ವಿಟಮಿನ್ ಬಿ9 ಅನ್ನು ಸೇವಿಸಬಹುದು. ವಿಟಮಿನ್ ಬಿ 6 ಕೊರತೆಯು ದೇಹಕ್ಕೆ ಹಲವು ವಿಧಗಳಲ್ಲಿ ಹಾನಿ ಮಾಡುತ್ತದೆ. ವಿಟಮಿನ್ ಬಿ 6 ದೇಹವನ್ನು ಸರಾಗವಾಗಿ ನಡೆಸಲು ಬ್ಯಾಟರಿಯಾಗಿ ಕಾರ್ಯನಿರ್ವಹಿಸುತ್ತದೆ. ವಿಟಮಿನ್ ಬಿ 6 ಸರಿಯಾದ ಪ್ರಮಾಣದಲ್ಲಿ ದೇಹಕ್ಕೆ ಲಭ್ಯವಾದರೆ, ಮನಸ್ಥಿತಿ, ನಿದ್ರೆ ಮತ್ತು ಹಸಿವನ್ನು ಸುಧಾರಿಸಬಹುದು. ಇದು ಚರ್ಮಕ್ಕೆ ಅತ್ಯಗತ್ಯ ಎಂದು ಪರಿಗಣಿಸಲಾಗಿದೆ. ತುಟಿಯ ಚರ್ಮವು ತುಂಬಾ ಸೂಕ್ಷ್ಮವಾಗಿರುತ್ತದೆ. ಹೆಚ್ಚುವರಿ ಪೋಷಣೆಯ ಅಗತ್ಯವಿರುತ್ತದೆ. ವಿಟಮಿನ್ ಬಿ6 ತುಟಿಗಳು ಒಡೆದು ಹೋಗುವುದನ್ನು ತಡೆಯುತ್ತದೆ. ದೇಹದಲ್ಲಿನ ವಿಟಮಿನ್ ಬಿ 12 ಕೊರತೆಯು ತುಟಿಗಳಲ್ಲಿ ರೂಪುಗೊಳ್ಳುವ ಹೊಸ ಕೋಶಗಳ ಮೇಲೆ ಪರಿಣಾಮ ಬೀರುತ್ತದೆ. ದೇಹದಲ್ಲಿನ ಕೆಂಪು ರಕ್ತ ಕಣಗಳ ಉತ್ಪಾದನೆಗೆ ವಿಟಮಿನ್ ಬಿ 12 ಅನ್ನು ಬಹಳ ಮುಖ್ಯವೆಂದು ಪರಿಗಣಿಸಲಾಗಿದೆ. ದೇಹದಲ್ಲಿ ಇದರ ಕೊರತೆಯು ರಕ್ತಹೀನತೆಯ ಸಮಸ್ಯೆಗೆ ಕಾರಣವಾಗಬಹುದು. ವಿಟಮಿನ್ ಬಿ 12 ನ ಸಾಕಷ್ಟು ಸೇವನೆಯು ತುಟಿ ಕಚ್ಚುವಿಕೆಯನ್ನು ತಡೆಯಬಹುದು. ಇನ್ನೂ ಚಳಿಗಾಲದಲ್ಲಿ ತುಟಿ ಒಡೆದುಕೊಳ್ಳುವುದು ಸಾಮಾನ್ಯವಾಗಿದೆ. ಇದು ಬಿರುಕು ಬಿಡುವುದಲ್ಲದೇ ಸಾಕಷ್ಟು ನೋವನ್ನುಂಟು ಮಾಡುತ್ತದೆ. ಚಳಿಗಾಲದಲ್ಲಿ ವಿಶೇಷವಾಗಿ ಕಾಳಜಿ ವಹಿಸಿಕೊಳ್ಳದಿದ್ದರೆ, ಸಮಸ್ಯೆ ಹೆಚ್ಚಾಗುವ ಸಾಧ್ಯತೆ ಇದೆ. ಕಡಿಮೆ ನೀರು ಕುಡಿಯುವುದು ಈ ಸಮಸ್ಯೆಯನ್ನು ಹೆಚ್ಚಿಸುತ್ತದೆ.

## ಕೇರಳದಿಂದ ಸ್ಥಳೀಯ ಪ್ರವಾಸಿಗರ ಸಂಖ್ಯೆ ಹೆಚ್ಚಿಸಲು ಅಖಿಲ ಭಾರತ ಅಭಿಯಾನಕ್ಕೆ ಚಾಲನೆ



'ಬೇಸಿಗೆ ರಜಾ ಋತುವು ವೇಗವಾಗಿ ಬರುತ್ತಿದ್ದು ನಾವು ಶಾಲಾ ರರಜಾದಿನಗಳು ಮತ್ತು ಕುಟುಂಬದ ಜನರನ್ನು ಉದ್ದೇಶಿಸಿ ಹೊಸ ಉತ್ಪನ್ನಗಳನ್ನು ಬಿಡುಗಡೆ ಮಾಡಲಿದ್ದೇವೆ'' ಎಂದು ಪ್ರವಾಸೋದ್ಯಮ ಸಚಿವ ಶ್ರೀ ಪಿ.ಎ. ಮೊಹಮ್ಮದ್ ರಿಯಾಸ್ ಹೇಳಿದರು.

ಈ ಸಮಯದಲ್ಲಿ ಅಭಿಯಾನವು ನಿರ್ದಿಷ್ಟವಾಗಿ ಉತ್ತರ ಕೇರಳಕ್ಕೆ ಮುಖ್ಯವಾಗಿ ಬೇಕಲ್, ವಯನಾಡ್ ಮತ್ತು ಕೋಳಿಕ್ಕೋಡ್ ಗಳಿಗೆ ಆದ್ಯತೆ ನೀಡಿದ್ದು ಇದಲ್ಲದೆ ಅಪಾರ ಸುಧಾರಿಸಿದ ಮೂಲಸೌಕರ್ಯಗಳ ಕಡಿಮೆ ಅರಿವಿನ ತಾಣಗಳನ್ನೂ ಸೇರ್ಪಡೆ ಮಾಡಿದ್ದೇವೆ ಎಂದರು.

ಈ ಅಭಿಯಾನವು ಕೇರಳವನ್ನು ತನ್ನ ಅಸಂಖ್ಯ ಛಾಯೆಗಳಲ್ಲಿ ಪ್ರದರ್ಶಿಸಲಿದ್ದು ಇದು ಈ ತಾಣಗಳಿಗೆ ಮತ್ತು ರಾಜ್ಯವು ಒದಗಿಸುವ ವಿಶಿಷ್ಟ ಪ್ರವಾಸೋದ್ಯಮ ಉತ್ಪನ್ನಗಳಿಗ ವಿಸಿಬಿಲಿಟಿ ಹೆಚ್ಚಿಸುವ ಆವಿಷ್ಕಾರಕ ಉತ್ತೇಜನ ಕಾರ್ಯತಂತ್ರವಾಗಿದೆ ಅಲ್ಲದೆ ಪ್ರಮುಖ ಮೂಲ ನಗರಗಳಿಂದ ಸಂಭವನೀಯ ಸಂದರ್ಶಕರನ್ನು ನೇರವಾಗಿ ಸಂಪರ್ಕಿಸುತ್ತದೆ ಎಂದು ಶ್ರೀ ರಿಯಾಸ್ ಹೇಳಿದರು.

ಪ್ರವಾಸಿಗರನ್ನು ಸೆಳೆಯುವ ಹೊಸ ಆಕರ್ಷಣೆಗಳಲ್ಲಿ ಹೆಲಿ-ಟೂರಿಸಂ ಮತ್ತು ಸಮುದ್ರದ ವಿಮಾನದ ಉಪಕ್ರಮಗಳಿದ್ದು ಅವು ರಾಜ್ಯದಲ್ಲಿನ ತಾಣಗಳನ್ನು ಸಂಪರ್ಕಿತ ಮತ್ತು ಸುಲಭವಾಗಿ ಲಭ್ಯವಾಗುವಂತೆ ಮಾಡುತ್ತವೆ ಎಂದು ಕೇರಳ ಸರ್ಕಾರದ ಕಾರ್ಯದರ್ಶಿ ಶ್ರೀ ಬಿಜು ಕೆ. ಹೇಳಿದರು.

ಹೊಸ ಉತ್ಪನ್ನಗಳೊಂದಿಗೆ ರಾಜ್ಯದ ಪ್ರಮುಖ ಸಂಪತ್ತುಗಳಾದ ಕಡಲತೀರಗಳು, ಗಿರಿಧಾಮಗಳು, ದೋಣಿಮನೆಗಳು ಮತ್ತು ಹಿನ್ನೀರಿನ ವಲಯವು ಸಂದರ್ಶಕರ ಅನುಭವದ ಪೂರ್ಣತೆಯನ್ನು ಎತ್ತರಿಸಲಿದೆ ಎಂದು ಶ್ರೀ ಬಿಜು ಹೇಳಿದರು.

ತನ್ನ ಪ್ರಶಾಂತ ನೈಸರ್ಗಿಕ ಸೌಂದರ್ಯ, ಉಜ್ವಲ ಸಂಸ್ಕೃತಿ ಮತ್ತು ಶ್ರೀಮಂತ ಪರಂಪರೆಗೆ ಖ್ಯಾತಿ ಪಡೆದಿರುವ ಕೇರಳ ತನ್ನ ಸಂದರ್ಶಕರಿಗೆ ಸಾಂಸ್ಕೃತಿಕ ಸಂತೋಷ ಮತ್ತು ಸಾಹಿತ್ಯಿಕ ಕಾರ್ಯಕ್ರಮಗಳ ಮೂಲಕ ರಂಜಿಸುತ್ತದೆ. ರಾಜಧಾನಿ ನಗರವು ಫೆಬ್ರವರಿ 15ರಿಂದ 21ರವರೆಗೆ ಕನಕಕ್ಕುನ್ನು ಪ್ಯಾಲೇಸ್ ನಲ್ಲಿ ನಿಶಾಗಂಧಿ ನೃತ್ಯೋತ್ಸವ ಆಯೋಜಿಸಿದ್ದು ಅದರಲ್ಲಿ ಭಾರತದ ಮೂಲೆ ಮೂಲೆಯ ಖ್ಯಾತ ನೃತ್ಯಗಾರರು ಮೋಹಿನಿಯಾಟ್ಟಂ, ಕಥಕ್, ಕೂಚಿಪುಡಿ, ಭರತನಾಟ್ಯ ಮತ್ತು ಮಣಿಪುರಿ ನೃತ್ಯಗಳನ್ನು ಪ್ರದರ್ಶಿಸಲಿದ್ದಾರೆ'' ಎಂದು ಕೇರಳ ಸರ್ಕಾರದ ಪ್ರವಾಸೋದ್ಯಮ ಇಲಾಖೆಯ ನಿರ್ದೇಶಕಿ ಶ್ರೀಮತಿ ಸಿಖಾ ಸುರೇಂದ್ರನ್ ಹೇಳಿದರು. ಕೇರಳ ಲಿಟರೇಚರ್ ಫೆಸ್ಟಿವಲ್ (ಕೆ.ಎಲ್.ಎಫ್.) ಗಮನಾರ್ಹ ವಾರ್ಷಿಕ ಕಾರ್ಯಕ್ರಮವಾಗಿದ್ದು ಜನವರಿ 23-26ರವರೆಗೆ ಕೋಳಿಕ್ಕೋಡ್ ಸಮುದ್ರತೀರದಲ್ಲಿ ನಡೆಯುತ್ತದೆ. ಈ ಉತ್ಸವವು ಸಮಾಜದ ವೈವಿಧ್ಯಮಯ ಹಿನ್ನೆಲೆಯ ವಿಸ್ತಾರ ಶ್ರೇಣಿಯ ಲೇಖಕರು, ಕಲಾವಿದರು, ನಟರು, ಸೆಲೆಬ್ರಿಟಿಗಳು, ಚಿಂತಕರು ಮತ್ತು ಆಕ್ಟಿವಿಸ್ಟ್ ಗಳನ್ನು ಒಗ್ಗೂಡಿಸಲಿದ್ದು ಓದುಗರು ಮತ್ತು ಲೇಖಕರ ನಡುವೆ ಸಂಪರ್ಕ ವೃದ್ಧಿಸಲಿದೆ. ಕೆ.ಎಲ್.ಎಫ್. 12ಕ್ಕೂ ಹೆಚ್ಚು ದೇಶಗಳ 400ಕ್ಕೂ ಹೆಚ್ಚು ಭಾಷಣಕಾರರನ್ನು ಹೊಂದಿದ್ದು ಕೋಳಿಕ್ಕೋಡ್ ನಗರದ ಐದು ಸ್ಥಳಗಳಲ್ಲಿ 200 ಅಧಿವೇಶನಗಳನ್ನು ನಡೆಯುತ್ತವೆ. ಐಷಾರಾಮ ಮತ್ತು ವಿರಾಮವನ್ನು ಸಂಯೋಜಿಸುವ ಕೇರಳವು ಡೆಸ್ಟಿನೇಷನ್ ವೆಡ್ಡಿಂಗ್ ಮತ್ತು ಎಂಐಸಿಇ (ಮೀಟಿಂಗ್ಸ್, ಇನ್ಸೆಂಟಿವ್ಸ್, ಕಾನ್ಫರೆನ್ಸಸ್ ಅಂಡ್ ಎಕ್ಸಿಬಿಷನ್ಸ್) ಕಾರ್ಯಕ್ರಮಗಳ ಆದ್ಯತೆಯ ಕೇಂದ್ರವಾಗುತ್ತಿದೆ. ದಾಖಲೆಗಳ ಪ್ರಕಾರ ಹೆಚ್ಚು ಹೆಚ್ಚು ಭಾರತೀಯರು ಮತ್ತು ವಿದೇಶಿಯರು ಕೇರಳಕ್ಕೆ ಭೇಟಿ ನೀಡುತ್ತಿದ್ದಾರೆ. ತನ್ನ ಅತ್ಯಾಕರ್ಷಕ ಪ್ರದೇಶಗಳು, ವಿಶ್ವಮಟ್ಟದ ಸೌಲಭ್ಯಗಳು ಮತ್ತು ಸಂಪ್ರದಾಯ ಹಾಗೂ ಆಧುನಿಕತೆಯ ಸರಿಸಾಟಿ ಇರದ ಸಂಯೋಜನೆಯಿಂದ ಈ ರಾಜ್ಯವು ವಿಶಿಷ್ಟ ಅನುಭವ ನಿರೀಕ್ಷಿಸುವ ಈವೆಂಟ್ ಪ್ಲಾನರ್ ಗಳು, ದಂಪತಿಗಳು ಮತ್ತು ಕಾರ್ಪೊರೇಟ್ ಗ್ರಾಹಕರನ್ನು ಸೆಳೆಯುತ್ತಿದೆ ಎಂದು ಕೇರಳ ಸರ್ಕಾರದ ಪ್ರವಾಸೋದ್ಯಮ ಇಲಾಖೆಯ ನಿರ್ದೇಶಕಿ ಸಿಖಾ ಸುರೇಂದ್ರನ್ ಹೇಳಿದರು. ಈ ರಾಜ್ಯವು ದೋಣಿಮನೆಗಳು, ಕಾರಾವಾನ್ ವಸತಿ, ಪ್ಲಾಂಟೇಷನ್ ಭೇಟಿಗಳು, ಜಂಗಲ್ ರೆಸಾರ್ಟ್ ಗಳು, ಹೋಮ್ ಸ್ಟೇಗಳು, ಆಯುರ್ವೇದ ಆಧರಿತ ವೆಲ್ ನೆಸ್ ಪರಿಹಾರಗಳು, ಸಾಹಸ ಚಟುವಟಿಕೆಗಳು ಮತ್ತು ಚಾರಣ ಒಳಗೊಂಡು ಗ್ರಾಮೀಣ ಪ್ರದೇಶದ ನಡೆದಾಟಗಳಿಗೆ ಖ್ಯಾತಿ ಪಡೆದಿದೆ. ಕೇರಳವು ಸ್ಥಳೀಯ ಪ್ರವಾಸಿಗರ ಆಗಮನಗಳಲ್ಲಿ ತೀವ್ರ ಏರುಗತಿ ಕಾಣುತ್ತಿದ್ದು 2022ರಲ್ಲಿ ಸಾಂಕ್ರಾಮಿಕ ಪೂರ್ವದ ಮಟ್ಟವನ್ನು ಮೀರುತ್ತಿದ್ದು 2023ರಲ್ಲಿ ದಾಖಲೆ ಸಂಖ್ಯೆಯ ಪ್ರವಾಸಿಗರಿಗೆ ಹೆಚ್ಚಳವಾಗಿದೆ. ಈ ಪ್ರವಾಸಿಗರ ಸಂಖ್ಯೆಯಲ್ಲಿ ಹೆಚ್ಚಳವು 2024ರಲ್ಲಿ ಮುಂದುವರಿದಿದ್ದು ಮೊದಲ ಸೆಮಿಸ್ಟರ್ ನಲ್ಲಿ (ಜನವರಿ-ಜೂನ್) ಒಟ್ಟು 1,08,57,181 ಪ್ರವಾಸಿಗರು ಭೇಟಿ ನೀಡಿದ್ದು ಈ ವರ್ಷ ಕೋವಿಡ್ ಪೂರ್ವ ಮಟ್ಟಕ್ಕೆ ಏರಿಕೆಯಾಗುವ ನಿರೀಕ್ಷೆ ಇದ್ದು ಅದು ರಜಾಋತುವಿನಲ್ಲಿ ಪ್ರಸ್ತುತ ನಡೆಯುತ್ತಿರುವ ಬುಕಿಂಗ್ ಗಳಿಂದ ಸಾಬೀತಾಗಿದೆ. ಬೇಸಿಗೆಯ ರಜಾದಿನದಲ್ಲಿ ಸ್ಥಳೀಯ ಪ್ರವಾಸಿಗರ ಸಂಖ್ಯೆಯಲ್ಲಿ ಹೆಚ್ಚಳದಿಂದ ಕೇರಳ ಟೂರಿಸಂ ಪ್ರವಾಸದ ವ್ಯಾಪಾರ ಜಾಲ ನಿರ್ಮಾಣದ ಕಾರ್ಯಕ್ರಮಗಳನ್ನು ಆಯೋಜಿಸಿದ್ದು ಬಿ2ಬಿ ರೋಡ್ ಶೋಗಳಿಂದ ವಿಸ್ತಾರ ಗ್ರಾಹಕರಿಗೆ ಹೊಸ ಉತ್ಪನ್ನಗಳನ್ನು ಬಿಡುಗಡೆ ಮಾಡುವುದನ್ನು ಒಳಗೊಂಡಿದ್ದು ಇದಲ್ಲದೆ ಪ್ರಮುಖ ವ್ಯಾಪಾರ ಮೇಳಗಳಲ್ಲಿ ಭಾಗವಹಿಸಲಿದೆ.

ಜನವರಿ 21ರಂದು ಹೈದರಾಬಾದ್ ನಲ್ಲಿ ಬಿ2ಬಿ ಟ್ರಾವೆಲ್ ಮೀಟ್ ಪ್ರಾರಂಭಿಸಿದ್ದು ಈ ಅಭಿಯಾನವು ಜನವರಿ- ಮಾರ್ಚ್ ಅವಧಿಯಲ್ಲಿ ಅಹಮದಾಬಾದ್, ಚಂಡೀಗಢ, ದೆಹಲಿ, ಜೈಪುರ, ಚೆನ್ನೈ ಮತ್ತು ಕೊಲ್ಕತಾಗಳಲ್ಲಿ ಬಿ2ಬಿ ಸಭೆಗಳ ಸರಣಿ ಕಾಣಲಿದ್ದು ಹಲವಾರು ಪರಿವರ್ತನೀಯ ಉಪಕ್ರಮಗಳು ಮತ್ತು ಜನಪ್ರಿಯ ತಾಣಗಳನ್ನು ಪ್ರವಾಸೋದ್ಯಮ ಮತ್ತು ಆತಿಥ್ಯ ಕ್ಷೇತ್ರದ ಮುಂಚೂಣಿಯ ಪಾಲುದಾರರ ಮುಂದೆ ಪ್ರದರ್ಶಿಸಲಿದೆ.

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಆಕಸ್ಮಿಕ ದುರ್ಘಟನೆಯಿಂದ ನೋವು, ವಾಹನ ಚಾಲನೆಯಲ್ಲಿ ಎಚ್ಚರಿಕೆ, ಆಸ್ತಿ ವಿಚಾರವಾಗಿ ಕೋರ್ಟ್ ಮೆಟ್ಟಿಲೇರುವ ಸನ್ನಿವೇಶ.

**ವೃಷಭ:** ದಾಂಪತ್ಯದಲ್ಲಿ ಆಲಸ್ಯ, ಉದ್ಯೋಗದ ಭರವಸೆ, ಸಂಗಾತಿಯಿಂದ ಅದೃಷ್ಟ.

**ಮಿಥುನ:** ಸಾಲ ಮಾಡುವ ಸಂಭವ, ಕುಟುಂಬ ಸಮೇತ ಪ್ರಯಾಣ, ಮಾತಿನಿಂದ ಶತ್ರುಗಳು ಅಧಿಕ.

**ಕಟಕ:** ಪ್ರೀತಿ ಪ್ರೇಮ ವಿಚಾರದಲ್ಲಿ ಅಡೆತಡೆ, ಆರೋಗ್ಯ ಸಮಸ್ಯೆಗಳು, ಆಸೆ ಆಕಾಂಕ್ಷೆ ಭಾವನೆಗಳಿಗೆ ಪೆಟ್ಟು.

**ಸಿಂಹ:** ಮನೆಯ ವಾತಾವರಣ ಕಲುಷಿತ, ಸ್ನೇಹಿತರಿಂದ ದೂರವಾಗುವ ಮನಸ್ಸು, ವಿಕೃತ ಆಸೆಗಳಿಗೆ ಬಲಿ.

**ಕನ್ಯಾ:** ನೆರೆಹೊರೆಯವರೊಡನೆ ಕಿರಿಕಿರಿ, ಸಹೋದರರ ಜೊತೆ ಮನಸ್ತಾಪ, ಮಕ್ಕಳು ಉನ್ನತ ಹಂತಕ್ಕೆ ಏರುವರು.

**ತುಲಾ:** ಕುಟುಂಬ ಸಮಸ್ಯೆಗಳಿಂದ ಮುಕ್ತಿ, ಉತ್ತಮ ಧನಾಗಮನ, ಮಾನಸಿಕ ನೆಮ್ಮದಿ ಪ್ರಾಪ್ತಿ.

**ವೃಶ್ಚಿಕ:** ಹಳೆಯ ವಸ್ತುವಿನಿಂದ ಪೆಟ್ಟು, ಅವಕಾಶವಂಚಿತ ರಾಗುವಿರಿ, ಮಾನಸಿಕ ಆಘಾತಕ್ಕೆ ಒಳಗಾಗುವಿರಿ.

**ಧನಸ್ಸು:** ಅಧಿಕ ನಿದ್ರೆ, ಆತ್ಮೀಯರ ದೂರ, ಕುಟುಂಬಕ್ಕೆ ನಷ್ಟ, ಆಕಸ್ಮಿಕ ದುರ್ಘಟನೆಯಿಂದ ಮನೋರೋಗ.

**ಮಕರ:** ಪಾಲುದಾರಿಕೆ ವ್ಯವಹಾರದಲ್ಲಿ ಲಾಭ, ಗುಪ್ತ ಆಸೆ ಮತ್ತು ಇಚ್ಛೆಗಳು, ಮಕ್ಕಳಿಂದ ಅನುಕೂಲ.

**ಕುಂಭ:** ಆರೋಗ್ಯ ವ್ಯತ್ಯಾಸದಿಂದ ಸಮಸ್ಯೆ, ಉದ್ಯೋಗದಲ್ಲಿ ತೊಂದರೆ, ಬಾಡಿಗೆದಾರರಿಂದ ನಷ್ಟ.

**ಮೀನ:** ಸಂತಾನ ದೋಷ, ತಂದೆ ಮಕ್ಕಳಲ್ಲಿ ಶತ್ರುತ್ವ, ಅವಕಾಶ ವಂಚಿತ ರಾಗುವಿರಿ, ಮಾನ ಅಪಮಾನಗಳು.

## ಅಂತರರಾಷ್ಟ್ರೀಯ ಶಿಕ್ಷಣ ದಿನ

ಶಿಕ್ಷಣವು ಮಾನವ ಹಕ್ಕು, ಸಾರ್ವಜನಿಕ ಒಳಿತು ಮತ್ತು ಸಾರ್ವಜನಿಕ ಜವಾಬ್ದಾರಿ ಎಂದು ಹೇಳಲಾಗುತ್ತದೆ. ಶಾಂತಿ ಮತ್ತು ಅಭಿವೃದ್ಧಿಯಲ್ಲಿ ಶಿಕ್ಷಣದ ಪ್ರಾಮುಖ್ಯತೆ, ಪಾತ್ರದ ಬಗ್ಗೆ ಜಾಗೃತಿ ಮೂಡಿಸಲು ಜನವರಿ 24 ರಂದು ಅಂತರರಾಷ್ಟ್ರೀಯ ಶಿಕ್ಷಣ ದಿನವನ್ನು ಆಚರಿಸಲಾಗುತ್ತದೆ. ಒಂದು ದೇಶವು ಲಿಂಗ ಸಮಾನತೆಯನ್ನು ಸಾಧಿಸಲು ಮತ್ತು ಬಡತನದ ಚಕ್ರವನ್ನು ಮುರಿಯಲು ಬಯಸಿದರೆ, ಅದು ಎಲ್ಲರನ್ನೂ ಒಳಗೊಂಡ, ಸಮಾನ ಗುಣಮಟ್ಟದ ಶಿಕ್ಷಣ ಮತ್ತು ಎಲ್ಲರಿಗೂ ಜೀವಮಾನದ ಅವಕಾಶಗಳಿಂದ ಸಾಧ್ಯ.

ಯುನೆಸ್ಕೋ ಪ್ರಕಾರ, ಸುಮಾರು 258 ಮಿಲಿಯನ್ ಮಕ್ಕಳು ಮತ್ತು ಯುವಕರು ಇನ್ನೂ ಶಾಲೆಗೆ ಹೋಗುವುದಿಲ್ಲ, ಮತ್ತು 617 ಮಿಲಿಯನ್ ಮಕ್ಕಳು ಮತ್ತು ಹದಿಹರೆಯದವರು ಮೂಲಭೂತ ಗಣಿತವನ್ನು ಓದಲು ಅಥವಾ ಮಾಡಲು ಸಾಧ್ಯವಿಲ್ಲ. ಅಲ್ಲದೆ, ಸಬ್-ಸಹಾರನ್ ಆಫ್ರಿಕಾದಲ್ಲಿ 40% ಕ್ಕಿಂತ ಕಡಿಮೆ ಹುಡುಗಿಯರು ಲೋಯರ್ ಸೆಕೆಂಡರಿ ಶಾಲೆಯನ್ನು ಪೂರ್ಣಗೊಳಿಸುತ್ತಾರೆ ಮತ್ತು ಸುಮಾರು 4 ಮಿಲಿಯನ್ ಮಕ್ಕಳು ಮತ್ತು ಯುವ ನಿರಾಶ್ರಿತರು ಶಾಲೆಯಿಂದ ಹೊರಗುಳಿದಿದ್ದಾರೆ. ಅವರ ಶಿಕ್ಷಣದ ಹಕ್ಕನ್ನು ಉಲ್ಲಂಘಿಸಲಾಗುತ್ತಿದೆ. ಅಂತರರಾಷ್ಟ್ರೀಯ ಶಿಕ್ಷಣ ದಿನದ ಸಂದರ್ಭದಲ್ಲಿ, ಯುನೆಸ್ಕೋ ಮಹಾನಿರ್ದೇಶಕಿ ಆಡ್ರೆ ಅಜೌಲೆ, ಶಿಕ್ಷಣವು ಮೂಲಭೂತ ಮಾನವ ಹಕ್ಕು. ಇದು ಸಮಾಜಗಳು, ಆರ್ಥಿಕತೆಗಳು ಮತ್ತು ಪ್ರತಿಯೊಬ್ಬ ವ್ಯಕ್ತಿಯ ಸಾಮರ್ಥ್ಯದ ಆಧಾರಸ್ತಂಭವಾಗಿದೆ. ಆದರೆ ಸಾಕಷ್ಟು ಹೂಡಿಕೆ ಇಲ್ಲದೆ, ಈ ಸಾಮರ್ಥ್ಯವು ಬಳ್ಳಿಯ ಮೇಲೆ ಒಣಗುತ್ತದೆ. ಅನೇಕ ಸರ್ಕಾರಿ ನೀತಿಗಳು ಮತ್ತು ಅಂತರರಾಷ್ಟ್ರೀಯ ಸಹಕಾರ ಸಾಧನಗಳಲ್ಲಿ ಶಿಕ್ಷಣಕ್ಕೆ ಇಷ್ಟು ಕಡಿಮೆ ಆದ್ಯತೆ ನೀಡಲಾಗಿದೆ ಎಂಬುದು ನನಗೆ ಯಾವಾಗಲೂ ಆಘಾತಕಾರಿಯಾಗಿದೆ. ಈ ವರ್ಷದ ಅಂತರರಾಷ್ಟ್ರೀಯ ಶಿಕ್ಷಣ ದಿನದ ವಿಷಯವು ಜನರಲ್ಲಿ ಹೂಡಿಕೆ ಮಾಡಲು, ಶಿಕ್ಷಣಕ್ಕೆ ಆದ್ಯತೆ ನೀಡಿ ಎಂದು ನಮಗೆ ನೆನಪಿಸುತ್ತದೆ. ಸುಸ್ಥಿರ ಅಭಿವೃದ್ಧಿ ಗುರಿ 4 ಅನ್ನು ಸಾಧಿಸಲು ಹೂಡಿಕೆಯು ನಿರ್ಣಾಯಕವಾಗಿದೆ.

ಕಳೆದ ವರ್ಷದ ರೂಪಾಂತರ ಶಿಕ್ಷಣ ಶೃಂಗಸಭೆಯು ಪ್ರತಿಯೊಬ್ಬ ವಿದ್ಯಾರ್ಥಿಯು ಯಶಸ್ವಿಯಾಗಲು ಅಗತ್ಯವಾದ ಜ್ಞಾನ ಮತ್ತು ಕೌಶಲ್ಯಗಳನ್ನು ಪಡೆಯಲು ಶಿಕ್ಷಣ ವ್ಯವಸ್ಥೆಗಳನ್ನು ಮರುಕಲ್ಪಿಸಲು ಜಗತ್ತನ್ನು ಒಟ್ಟುಗೂಡಿಸಿತು. ಸಾರ್ವತ್ರಿಕ ಗುಣಮಟ್ಟದ ಶಿಕ್ಷಣವು ಸಾರ್ವಜನಿಕ ನೀತಿಗಳು ಮತ್ತು ಹೂಡಿಕೆಗಳ ಕೇಂದ್ರ, ಆಧಾರಸ್ತಂಭವಾಗುವುದನ್ನು ಖಚಿತಪಡಿಸಿಕೊಳ್ಳಲು 130 ಕ್ಕೂ ಹೆಚ್ಚು ದೇಶಗಳು ಬದ್ಧತೆಗಳನ್ನು ಮಾಡಿಕೊಂಡವು. ಶೈಕ್ಷಣಿಕ ಹೂಡಿಕೆಯ ಮೇಲಿನ ಕ್ರಮಕ್ಕಾಗಿ ಕರೆ ಮತ್ತು ಶಿಕ್ಷಣಕ್ಕಾಗಿ ಅಂತರರಾಷ್ಟ್ರೀಯ ಹಣಕಾಸು ಸೌಲಭ್ಯದ ಸ್ಥಾಪನೆಯು ದೇಶೀಯ ಮತ್ತು ಅಂತರರಾಷ್ಟ್ರೀಯ ಹಣಕಾಸಿನ ಮೇಲೆ ಹೊಸ ಒತ್ತಡವನ್ನು ಸೃಷ್ಟಿಸಿತು.

2023 ರಲ್ಲಿ ನಡೆಯುವ ಋಆಉ ಶೃಂಗಸಭೆ ಮತ್ತು 2024 ರಲ್ಲಿ ನಡೆಯುವ ಭವಿಷ್ಯದ ಶೃಂಗಸಭೆಗೆ ಸಿದ್ಧತೆಗಳ ಕೇಂದ್ರದಲ್ಲಿ ಶಿಕ್ಷಣವನ್ನು ಇರಿಸಲು ನಾನು ದೇಶಗಳನ್ನು ಪ್ರೋತ್ಸಾಹಿಸುತ್ತೇನೆ. ಎಲ್ಲಕ್ಕಿಂತ ಹೆಚ್ಚಾಗಿ, ನಾಗರಿಕ ಸಮಾಜ ಮತ್ತು ಯುವಕರು ಗುಣಮಟ್ಟದ ಶಿಕ್ಷಣದಲ್ಲಿ ಹೆಚ್ಚು ಮತ್ತು ಉತ್ತಮ ಹೂಡಿಕೆಗಾಗಿ ಕರೆ ನೀಡುವುದನ್ನು ಮುಂದುವರಿಸಲು ನಾನು ಒತ್ತಾಯಿಸುತ್ತೇನೆ. ರೂಪಾಂತರದ ಜ್ವಾಲೆಯನ್ನು ಉರಿಯುತ್ತಲೇ ಇರೋಣ.

# ಬೆಂಗಳೂರಿನಲ್ಲಿ ಗುಜರಾತ್ ಐಟಿ/ಐಟಿಇಎಸ್ ನೀತಿ ಸಭೆ

**ಬೆಂಗಳೂರು:** ಗಣೇಶ್ ಹೌಸಿಂಗ್ ಕಾರ್ಪೊರೇಷನ್ ಲಿಮಿಟೆಡ್, ಗುಜರಾತ್ ಸರ್ಕಾರ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಹಭಾಗಿತ್ವದಲ್ಲಿ, ಗುಜರಾತ್ ಐಟಿ/ಐಟಿಇಎಸ್ ನೀತಿಗಾಗಿ ಬೆಂಗಳೂರಿನಲ್ಲಿ ಗುರುವಾರ ಆಯೋಜಿಸಿದ್ದ ಎರಡನೇ ರೋಡ್ಶೋ ಯಶಸ್ವಿಯಾಗಿ ನಡೆಯಿತು.

ಭಾರತದ ಕೈಗಾರಿಕಾ ಒಕ್ಕೂಟದ (ಸಿಐಐ) ಸಹಯೋಗದಲ್ಲಿ ಆಯೋಜಿಸಲಾಗಿದ್ದ ರೋಡ್ಶೋಗೆ ಅಸಾಧಾರಣ ಪ್ರತಿಕ್ರಿಯೆ ಲಭ್ಯವಾಯಿತು. ಭಾರತದಾದ್ಯಂತದ 200ಕ್ಕೂ ಹೆಚ್ಚು ಪ್ರಮುಖ ಐಟಿ ಮತ್ತು ಐಟಿಇಎಸ್ ಕಂಪನಿಗಳನ್ನು ಆಕರ್ಷಿಸಿತು. ಗಣೇಶ್ ಹೌಸಿಂಗ್ನ ಪ್ರಮುಖ ಯೋಜನೆಯಾಗಿರುವ ಮಿಲಿಯನ್ ಮೈಂಡ್ಸ್ ಟೆಕ್ ಸಿಟಿ-ಯನ್ನು ಬೆಂಗಳೂರಿನ ತಂತ್ರಜ್ಞಾನ ಸಂಪರ್ಕ ಜಾಲಕ್ಕೆ ಪರಿಚಯಿಸುವ ಸಂದರ್ಭದಲ್ಲಿ ಗುಜರಾತ್ನ ಪರಿವರ್ತನೆಯ ಉಪಕ್ರಮಗಳು ಮತ್ತು ನೀತಿಗಳನ್ನು ಪ್ರದರ್ಶಿಸಲಾಯಿತು.

ಈ ಸಮಾರಂಭದಲ್ಲಿ ಗುಜರಾತ್ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಮೋನಾ ಖಂಧರ್, ಗುಜರಾತ್ ಇನ್ಫಾರ್ಮ್ಯಾಟಿಕ್ಸ್ ಲಿಮಿಟೆಡ್ನ ವ್ಯವಸ್ಥಾಪಕ ನಿರ್ದೇಶಕ ತುಷಾರ್ ವೈ. ಭಟ್ ಹಾಗೂ ಉದ್ಯಮ ಪ್ರಮುಖರು, ನೀತಿ ನಿರೂಪಕರು ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಗುಜರಾತ್ ಐಟಿ/ಐಟಿಇಎಸ್ ನೀತಿ 2022-27ರ ಅಡಿಯಲ್ಲಿ ನೀಡಲಾಗುತ್ತಿರುವ ವಿವಿಧ ಉತ್ತೇಜನಾ ಕ್ರಮಗಳ ಕುರಿತು ನಡೆದ ಸಮಾಲೋಚನಾ ಸಭೆಗಳು ಒಳನೋಟಗಳನ್ನು ಒದಗಿಸಿದವು. ಗುಜರಾತ್ ರಾಜ್ಯವನ್ನು ಪ್ರವರ್ಧಮಾನಕ್ಕೆ ಬರುತ್ತಿರುವ ತಂತ್ರಜ್ಞಾನ ಕೇಂದ್ರವಾಗಿ ಪ್ರಸ್ತುತಪಡಿಸಲಾಯಿತು.




ರೋಡ್ಶೋ ಯಶಸ್ಸಿನ ಕುರಿತು ಪ್ರತಿಕ್ರಿಯಿಸಿರುವ, ಗಣೇಶ್ ಹೌಸಿಂಗ್ ಕಾರ್ಪೊರೇಷನ್ ಲಿಮಿಟೆಡ್ನ ನಿರ್ದೇಶಕ ಅನ್ಮೋಲ್ ಪಟೇಲ್ ಅವರು, ''ಚೆನ್ನೈನಲ್ಲಿ ನಡೆದ ರೋಡ್ಶೋದ ಯಶಸ್ಸಿನ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ನಮಗೆ ದೊರೆತಿರುವ ಅಗಾಧ ಪ್ರತಿಕ್ರಿಯೆಯಿಂದ ನಾವು ನಿಜವಾಗಿಯೂ ಸ್ಫೂರ್ತಿ ಪಡೆದಿದ್ದೇವೆ. ಐಟಿ/ಐಟಿಇಎಸ್ ವಲಯವನ್ನು ಮುನ್ನಡೆಸುವ ಗುಜರಾತ್ನ ಅಪಾರ ಸಾಮರ್ಥ್ಯದ ಮೇಲಿನ ನಮ್ಮ ನಂಬಿಕೆಯನ್ನು ಇದು ಇನ್ನಷ್ಟು ಬಲಪಡಿಸುತ್ತದೆ. ಗುಜರಾತ್ ಸರ್ಕಾರ ಮತ್ತು ಐಟಿ/ಐಟಿಇಎಸ್ ನೀತಿಯ ಬೆಂಬಲದ ನೆರವಿನಿಂದ, ಮಿಲಿಯನ್ ಮೈಂಡ್ಸ್ ಟೆಕ್ ಸಿಟಿ-ಗೆ ಸಂಬಂಧಿಸಿದ ನಮ್ಮ ದೂರದೃಷ್ಟಿಯು ಮತ್ತೊಂದು ಟೌನ್ಶಿಪ್ ಅಭಿವೃದ್ಧಿಪಡಿಸುವುದಕ್ಕೆ ಸೀಮಿತವಾಗಿರದೆ, ಅಭಿವೃದ್ಧಿ ಹೊಂದುತ್ತಿರುವ ಪರಿಸರ ವ್ಯವಸ್ಥೆ ನಿರ್ಮಾಣಕ್ಕೂ ನೆರವಾಗಲಿದೆ ಎಂದು ಹೇಳಿದ್ದಾರೆ.

ಬೆಂಗಳೂರಿನಲ್ಲಿ ಈ ರೋಡ್ಶೋಗೆ ದೊರೆತಿರುವ ಅಗಾಧ ಪ್ರತಿಕ್ರಿಯೆಯಿಂದ ನಾವು ಉತ್ತೇಜಿತರಾಗಿದ್ದೇವೆ ಎಂದು ಗಣೇಶ್ ಹೌಸಿಂಗ್ನ ಮಾರಾಟ ಹಾಗೂ ಮಾರುಕಟ್ಟೆ ವಿಭಾಗದ ಅಧ್ಯಕ್ಷ ವೀರೇನ್ ಮೆಹ್ತಾ ಅವರು ಅಭಿಪ್ರಾಯಪಟ್ಟಿದ್ದಾರೆ. ಗುಜರಾತ್ ಮತ್ತು ಕರ್ನಾಟಕದ ಐಟಿ ಕ್ಷೇತ್ರದ ಪ್ರಮುಖರನ್ನು ಒಂದೆಡೆ ಸೇರಿಸುವ ಮೂಲಕ, ಗುಜರಾತ್ ರಾಜ್ಯವನ್ನು ಐಟಿ ಹೂಡಿಕೆಗಳಿಗೆ ಮೊದಲ ಆಯ್ಕೆಯನ್ನಾಗಿ ಮಾಡುವ ಕಾರ್ಯತಂತ್ರದ ಉಪಕ್ರಮಗಳ ಮೇಲೆ ಬೆಳಕು ಚೆಲ್ಲುವಲ್ಲಿ ಈ ರೋಡ್ಶೋ ಪ್ರಮುಖ ಪಾತ್ರವಹಿಸಿದೆ ಎಂದು ಹೇಳಿದ್ದಾರೆ.

## ಮುಂಬೈ ಶಾಲೆಗೆ ಬಾಂಬ್ ಬೆದರಿಕೆ

**ಮುಂಬೈ:** ಕೆಲ ತಿಂಗಳುಗಳಿಂದ ರಾಷ್ಟ್ರ ರಾಜಧಾನಿ ದೆಹಲಿಯ ಹತ್ತು ಹಲವು ಶಾಲೆಗಳಿಗೆ ನಿರಂತರವಾಗಿ ಹುಸಿ ಬಾಂಬ್ ಕರೆಗಳು ಬಂದಿದ್ದವು. ಇದೀಗ ಮುಂಬೈನ ಜೋಗೇಶ್ವರಿ-ಓಶಿವಾರ ಪ್ರದೇಶದ ಶಾಲೆಯೊಂದಕ್ಕೆ ಬಾಂಬ್ ಬೆದರಿಕೆಯಇಮೇಲ್ ಸಂದೇಶವೊಂದು ಬಂದಿದೆ. ಬಾಂಬ್ ಬೆದರಿಕಯನ್ನು ಕಳುಹಿಸಿರುವ ವ್ಯಕ್ತಿ ತನ್ನನ್ನು ಅಫ್ಜಲ್ ಗ್ಯಾಂಗ್ನವನು ಎಂದು ಹೇಳಿಕೊಂಡಿದ್ದಾನೆ. ಇಮೇಲ್ ಸ್ವೀಕರಿಸಿದ ನಂತರ ಶಾಲೆಯ ಆಡಳಿತ ಮಂಡಳಿ ಪೊಲೀಸರಿಗೆ ದೂರು ನೀಡಿದ್ದಾರೆ. ಸ್ಥಳೀಯ ಪೊಲೀಸರು ಮತ್ತು ಬಾಂಬ್ ಸ್ಕ್ವಾಡ್ ತಂಡ ಶಾಲೆಗೆ ಆಗಮಿಸಿ ಸ್ಥಳ ಮಹಜರು ಮಾಡಿದ್ದಾರೆ. ಜೋಗೇಶ್ವರಿ-ಓಶಿವಾರದ ಶಾಲೆಯ ಸುತ್ತಮುತ್ತು ಪೊಲೀಸರು ಮತ್ತು ಬಾಂಬ್ ಪತ್ತೆ ತಂಡ ಪರಿಶೀಲನೆ



ನಡೆಸಿದ್ದು,ಯಾವುದೇ ಅನುಮಾನಸ್ಪದ ವಸ್ತುಗಳು ಕಂಡು ಬಂದಿಲ್ಲ ಎನ್ನಲಾಗಿದೆ. ಅಫ್ಜಲ್ ಗ್ಯಾಂಗ್ ಎಮದು ಹೇಳಿಕೊಂಡಿರುವ ವ್ಯಕ್ತಿಯನ್ನು ಪತ್ತೆ ಹಚ್ಚಲು ಪೊಲೀಸರು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ.ಇತ್ತೀಚೆಗಷ್ಟೇ ದೆಹಲಿಯ ಸುಮಾರು 30 ಶಾಲೆಗಳಿಗೆ ಇಮೇಲ್ ಮೂಲಕ ಬಾಂಬ್ ಬೆದರಿಕೆ ಸಂದೇಶ ಬಂದಿತ್ತು. ವಿಷಯ ತಿಳಿದ ಪೊಲೀಸರು ಬಾಂಬ್ ಪತ್ತೆ ತಂಡ, ಶ್ವಾನದಳ ಹಾಗೂ ಅಗ್ನಿಶಾಮಕ ದಳದೊಂದಿಗೆ ದೌಡಾಯಿಸಿ, ಶಾಲಾ ಕಟ್ಟಡಗಳು ಮತ್ತು ಆವರಣಗಳಲ್ಲಿ ತೀವ್ರ ತಪಾಸಣೆ ನಡೆಸಿತ್ತು. ಆದರೆ, ಯಾವುದೇ ಅನುಮಾನಾಸ್ಪದ ವಸ್ತು ಪತ್ತೆಯಾಗಿರಲಿಲ್ಲ. ಇದೊಂದು ಹುಸಿ ಬೆದರಿಕೆ ಎಂದು ಪೊಲೀಸರು ಖಚಿತಪಡಿಸಿದ್ದರು. ದೆಹಲಿ ಪೊಲೀಸ್ ವಿಶೇಷ ಘಟಕವು ಕ್ರಿಮಿನಲ್ ಬೆದರಿಕೆ ಮತ್ತು ಪಿತೂರಿಯ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿತ್ತು. ಬೆದರಿಕೆ ಸಂದೇಶ ಕಳುಹಿಸಿದ ಆರೋಪಿಗಳ ಬಗ್ಗೆ ಸುಳಿವು ಸಿಕ್ಕಿಲ್ಲ ಎಂದು ಪೊಲೀಸರು ತಿಳಿಸಿದ್ದರು. 'ಇ-ಮೇಲ್ ವಿದೇಶದಿಂದ ಬಂದಿರುವುದು ದೃಢಪಟ್ಟಿದೆ.

# ಮತ್ತೆ ಬಂದಿದೆ ರಿಲಯನ್ಸ್ ಡಿಜಿಟಲ್ ಇಂಡಿಯಾ ಸೇಲ್

**ನವದೆಹಲಿ:** ರಿಲಯನ್ಸ್ ಡಿಜಿಟಲ್ ಭಾರತದ ಅತಿದೊಡ್ಡ ಎಲೆಕ್ಟ್ರಾನಿಕ್ಸ್ ಮಾರಾಟವಾದ 'ಡಿಜಿಟಲ್ ಇಂಡಿಯಾ ಸೇಲ್' ಅನ್ನು ಮತ್ತೆ ಆರಂಭಿಸುವುದಾಗಿ ಘೋಷಿಸಿದೆ. ಡಿಜಿಟಲ್ ಇಂಡಿಯಾ ಸೇಲ್ 2025 ರ ಜನವರಿ 26 ರವರೆಗೆ ದೇಶಾದ್ಯಂತ ಚಾಲ್ತಿಯಲ್ಲಿ ಇರಲಿದೆ.

ಪ್ರಮುಖ ಬ್ಯಾಂಕ್ ಕಾರ್ಡ್ಗಳೊಂದಿಗೆ ಮಾಡಿದ ಖರೀದಿಗಳಲ್ಲಿ ಗ್ರಾಹಕರು 26,000 ರೂ.ಗಳವರೆಗೆ ತ್ವರಿತ ರಿಯಾಯಿತಿಯನ್ನು ಆನಂದಿಸಬಹುದು. ಈ ಕೊಡುಗೆಯು ಎಲ್ಲಾ ರಿಲಯನ್ಸ್ ಡಿಜಿಟಲ್ ಮತ್ತು ಮೈ ಜಿಯೋ ಸ್ಟೋರ್ಗಳಲ್ಲಿ ಮತ್ತು ತಿತಿತಿ. ಡಿಜಟಚಿಟಿಜಜರಣಚಿಟ.ಟಿ ಆನ್ಲೈನ್ನಲ್ಲಿ ಅನ್ವಯಿಸುತ್ತದೆ.

ಇನ್-ಸ್ಟೋರ್ ಶಾಪರ್ ಗಳು ಬಹು ಹಣಕಾಸು ಆಯ್ಕೆಗಳನ್ನು ಆರಿಸಿಕೊಳ್ಳಬಹುದು, ಗ್ರಾಹಕ ಬಾಳಿಕೆ ಬರುವ ವಸ್ತುಗಳನ್ನು ಲೋನ್ ಮೂಲಕ ಖರೀದಿಸಿದರೆ ? 26,000 ವರೆಗೆ ಕ್ಯಾಶ್ ಬ್ಯಾಕ್ ಪಡೆಯಬಹುದು. ಗ್ರಾಹಕರು ಯುಪಿಐ ಬಳಸುವಾಗ ಅಕ್ಸೆಸರಿಗಳು ಮತ್ತು ಸಣ್ಣ ಉಪಕರಣಗಳ ಮೇಲೆ 1000 ರೂ.ಗಳವರೆಗೆ ರಿಯಾಯಿತಿಯನ್ನು ಆನಂದಿಸಬಹುದು. ಲ್ಯಾಪ್ಟಾಪ್ಗಳನ್ನು ಹುಡುಕುತ್ತಿರುವ ಗ್ರಾಹಕರು ವರ್ಕ್ ಲರ್ನ್ ಕೋರ್ ಐ 3 ಶ್ರೇಣಿಯಿಂದ 26,999 ರೂ.ಗಳಿಂದ, ಕ್ರಿಯೇಟರ್ ಕೋರ್ ಐ 5 ಎಚ್ ಶ್ರೇಣಿಯಿಂದ 47,599 ರೂ. ನಿಂದ ಪ್ರಾರಂಭವಾಗುತ್ತದೆ ಮತ್ತು ಗೇಮಿಂಗ್ ಆರ್ಟಿಎಕ್ಸ್ 3050 ಶ್ರೇಣಿಯಿಂದ 49,999 ರೂನಿಂದ ಪ್ರಾರಂಭವಾಗುತ್ತದೆ. ಸಣ್ಣ ಪರದೆಯ ಅದ್ಭುತ, ಸ್ಯಾಮ್ಸಂಗ್ ಟ್ಯಾಬ್ಲೆಟ್ ಎ 9 + ? 10999 ರಿಂದ ಪ್ರಾರಂಭವಾಗುತ್ತದೆ.

ಫ್ಲಿಪ್ ಫೋನ್ ಗಳ ಅಭಿಮಾನಿಗಳು ಮೊಟೊರೊಲಾ ರೇಜರ್ 50 ಅಲ್ಟ್ರಾ 12 ಜಿಬಿ / 512 ಜಿಬಿ, '2024 ರ ಅತ್ಯುತ್ತಮ ಫ್ಲಿಪ್ ಫೋನ್' ಪ್ರಶಸ್ತಿಯನ್ನು ಕೇವಲ 69,999 ರೂ.ಗೆ ಪಡೆಯಬಹುದು, ಉಚಿತ ಮೋಟೋ ಬಡ್ಸ್ + (ಸೌಂಡ್ ಬೈ ಬಾಸ್) 9999 ರೂಗೆ ಸಿಗುತ್ತದೆ.

ಅತ್ಯುತ್ತಮ ಸಿನಿಮೀಯ ಅನುಭವ ಪಡೆಯಲು, 190 ಸೆಂ.ಮೀ (75) 4 ಕೆ ಯುಹೆಚ್ಡಿ ಟಿವಿಗಳು 59,990 ನಿಂದ ಪ್ರಾರಂಭವಾಗುತ್ತವೆ. ದೊಡ್ಡ ಪರದೆಯ ಮನರಂಜನೆಯ ಅಭಿಮಾನಿಗಳಿಗೆ 140 ಸೆಂ. ಮೀ (55) ಟಿವಿಗಳು 27990 ರೂ.ನಿಂದ ಪ್ರಾರಂಭವಾಗುತ್ತವೆ ಮತ್ತು ಕೇವಲ 1990 ರೂ.ಗಳ ಇಎಂಐಗಳಿವೆ. ಡಾಲ್ಬಿ ಡಿಜಿಟಲ್ ಸೌಂಡ್ ಬಾರ್ ಗಳ ಮೇಲೆ 50% ವರೆಗೆ ರಿಯಾಯಿತಿ ಇದೆ.




# ಮಹಾಕುಂಭ ಮೇಳದ ಸ್ಯಾಟಲೈಟ್ ಚಿತ್ರ ಬಿಡುಗಡೆಗೊಳಿಸಿದ ಇಸ್ರೊ

**ಪ್ರಯಾಗ್ ರಾಜ್:** ಉತ್ತರ ಪ್ರದೇಶದ ಪ್ರಯಾಗ್ ರಾಜ್ ನಲ್ಲಿರುವ ತ್ರಿವೇಣಿ ಸಂಗಮದಲ್ಲಿ ಜ.13ರಂದು ಚಾಲನೆ ಪಡೆದುಕೊಂಡಿರುವ ಮಹಾಕುಂಭ ಮೇಳ ಯಶಸ್ವಿಯಾಗಿ ಸಾಗುತ್ತಿದೆ. ಸಾಧು-ಸಂತರು, ರಾಜಕೀಯ ನಾಯಕರ ಸಹಿತ ಈಗಾಗಲೇ ಲಕ್ಷಾಂತರ ಮಂದಿ ಆಸ್ತಿಕರು ಗಂಗಾ-ಯಮುನಾ ಮತ್ತು ಗುಪ್ತಗಾಮಿನಿಯಾಗಿರುವ ಸರಸ್ವತಿ ನದಿಗಳ ತ್ರಿವೇಣಿ ಸಂಗಮದಲ್ಲಿ ಪುಣ್ಯಸ್ನಾನವನ್ನು ಮಾಡಿ ಧನ್ಯತಾ ಭಾವವನ್ನು ಹೊಂದುತ್ತಿದ್ದಾರೆ.

142 ವರ್ಷಗಳಿಗೊಮ್ಮೆ ನಡೆಯುವ ಈ ಮಹಾಕುಂಭ ಮೇಳವನ್ನು ಯಶಸ್ವಿಯಾಗಿ ನಡೆಸಲು ಉತ್ತರಪ್ರದೇಶದ ಯೋಗಿ ಆದಿತ್ಯನಾಥ್ ಸರಕಾರ ಸರ್ವ ಸುಸಜ್ಜಿತ ಸಿದ್ಧತೆಗಳನ್ನು ಮಾಡಿತ್ತು. ಸುರಕ್ಷತೆ ಮತ್ತು ಸ್ವಚ್ಛತೆಗೆ ಹೆಚ್ಚಿನ ಒತ್ತು ನೀಡುವ ಮೂಲಕ ಈಗಾಗಲೇ ಕುಂಭ ಮೇಳದ ವ್ಯವಸ್ಥೆಗಳು ಪ್ರಶಂಸೆಗೆ ಪಾತ್ರವಾಗಿದೆ.




ಇಷ್ಟು ಮಾತ್ರವಲ್ಲದೇ, ಕುಂಭ ಮೇಳದ ಒಟ್ಟು ಪ್ರದೇಶದಲ್ಲಿನ ಸಿದ್ಧತೆಗಳ ಹಲವಾರು ವಿಡಿಯೋಗಳು ಈಗಾಗಲೇ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ. ಇದಕ್ಕೆ ಪೂರಕವೆಂಬಂತೆ ಭಾರತದ ಬಾಹ್ಯಾಕಾಶ ಸಂಸ್ಥೆ ನಮ್ಮ ಹೆಮ್ಮೆಯ ಇಸ್ರೋ ಮಹಾಕುಂಭ ಮೇಳ ನಡೆಯುತ್ತಿರುವ ಜಾಗದ ಉಪಗ್ರಹ ಚಿತ್ರಗಳನ್ನು ಬಿಡುಗಡೆ ಮಾಡಿದ್ದು, ಈ ಚಿತ್ರಗಳು ಇದಿಗ ಎಲ್ಲರನ್ನು ಆಕರ್ಷಿಸುತ್ತಿದೆ.

ಇಸ್ರೋ ಬಿಡುಗಡೆ ಮಾಡಿರುವ ಈ ಚಿತ್ರಗಳಲ್ಲಿ ಮಹಾ ಕುಂಭ ಮೇಳ ನಡೆಯುವ ಪ್ರಯಾಗ್ ರಾಜ್ ನಲ್ಲಿ ಒದಗಿಸಲಾಗಿರುವ ಮೂಲಭೂತ ಸೌಕರ್ಯಗಳ ಪಕ್ಷಿನೋಟ ಸುಂದರವಾಗಿ ವ್ಯಕ್ತವಾಗಿದೆ. ಈ ಕುಂಭ ಮೇಳ ನಡೆಯುವ 45 ದಿನಗಳ ಅವಧಿಯಲ್ಲಿ ದೇಶ-ವಿದೇಶಗಳ ಸುಮಾರು 40 ಕೋಟಿ ಆಸ್ತಿಕರು ಇಲ್ಲಿಗೆ ಭೇಟಿ ನೀಡುವ ನಿರೀಕ್ಷೆಯಿದೆ.

## ಏಷ್ಯಾದಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆಗೆ ಪಾಲುದಾರಿಕೆ

**ದೆಹಲಿ:** ಏಷ್ಯಾದಲ್ಲಿ ಹೆಚ್ಚುತ್ತಿರುವ ಪ್ಲಾಸ್ಟಿಕ್ ತ್ಯಾಜ್ಯವನ್ನು ಸೂಕ್ತ ರೀತಿಯಲ್ಲಿ ನಿರ್ವಹಣೆ ಮಾಡುವ ಉದ್ದೇಶದಿಂದ ಯುಎನ್ ಡೆವಲಪ್ ಮೆಂಟ್ ಪ್ರೋಗ್ರಾಮ್ (ಯುಎನ್ಡಿಪಿ) ಮತ್ತು ದಿ ಕೋಕಾ-ಕೋಲಾ ಫೌಂಡೇಶನ್ (ಟಿಸಿಸಿಎಫ್) ಪಾಲುದಾರಿಕೆ ಮಾಡಿಕೊಂಡಿದೆ. ಈ ನಿಟ್ಟಿನಲ್ಲಿ ಮೂರು ವರ್ಷ ಅವಧಿಯ ಬಹು ದೇಶ ಯೋಜನೆ ಪ್ರಾರಂಭಿಸಲಾಗಿದ್ದು, ಈ ಯೋಜನೆಯನ್ನು ಇಂದು ಭಾರತದಲ್ಲಿ ಉದ್ಘಾಟಿಸಲಾಗಿದೆ. ಈ ಯೋಜನೆಯ ಮೂಲಕ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ, ಮರುಬಳಕೆ ಉತ್ತೇಜನ, ಪ್ರಕೃತಿಗೆ ಪ್ಲಾಸ್ಟಿಕ್ ಸೇರುವುದಕ್ಕೆ ತಡೆ ಮುಂತಾದ ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ. ಪ್ರಪಂಚದ ಪ್ಲಾಸ್ಟಿಕ್ ತ್ಯಾಜ್ಯದ ಹೆಚ್ಚಿನ ಭಾಗವು ನದಿಗಳ ಮೂಲಕ ಸಾಗರವನ್ನು ಸೇರುತ್ತದೆ. ಸಾಗರದಲ್ಲಿ ಜೀವ ಜಾಲಕ್ಕೆ ಇದರಿಂದ ಬಹಳ ತೊಂದರೆಯಾಗುತ್ತಿದೆ. ಸಾಗರದ ಪರಿಸರ ವ್ಯವಸ್ಥೆಗೆ ಏಟು ಬೀಳುತ್ತಿರುವುದರಿಂದ ಮಾನವನ ಆರೋಗ್ಯ ಮತ್ತು ಜೀವನೋಪಾಯಕ್ಕೂ ತೊಂದರೆಯಾಗುತ್ತಿದೆ. ವಿಶ್ವದ ಅಗ್ರ ಇಪ್ಪತ್ತು ಮಾಲಿನ್ಯಕಾರಕ ನದಿಗಳಲ್ಲಿ ಹದಿನಾರು ನದಿಗಳು ಏಷ್ಯಾದಲ್ಲಿದ್ದು, ಈ ಮೂಲಕ ತೊಂದರೆಯ ಮಟ್ಟವನ್ನು ಅರ್ಥ ಮಾಡಿಕೊಳ್ಳಬಹುದಾಗಿದೆ. ಅಲ್ಲದೇ ಪ್ರಪಂಚದಲ್ಲಿ ವರ್ಷವೊಂದರಲ್ಲಿ ಸಾಗರ ಸೇರುವ ವಾರ್ಷಿಕ ಪ್ಲಾಸ್ಟಿಕ್ ನ ಮೂರನೇ ಎರಡರಷ್ಟು ಭಾಗ ಇಲ್ಲಿಂದಲೇ ಸೇರುತ್ತಿದೆ. ಈ ಕುರಿತು ಮಾತನಾಡಿರುವ ಏಷ್ಯಾ ಮತ್ತು ಪೆಸಿಫಿಕ್ ವಿಭಾಗದ ಯುಎನ್ಡಿಪಿ ಉಪ ಪ್ರಾದೇಶಿಕ ನಿರ್ದೇಶಕರಾಗಿರುವ ಕ್ರಿಸ್ಟೋಫ್ ಬಹುಯೆಟ್ ಅವರು, ನಮ್ಮ ಶೂನ್ಯ ತ್ಯಾಜ್ಯ ಮತ್ತು ಪ್ಲಾಸ್ಟಿಕ್ ಯೋಜನೆಗಳ ಮೂಲಕ ಪ್ಲಾಸ್ಟಿಕ್ ತ್ಯಾಜ್ಯದ ಸಮರ್ಪಕ ನಿರ್ವಹಣೆಗೆ ಒತ್ತು ನೀಡುತ್ತಿದ್ದೇವೆ. ಎಲ್ಲರೂ ಈ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಲು ಕರೆ ಕೊಡುತ್ತಿದ್ದೇವೆ. ಸಿಂಗಲ್ ಯೂಸ್ ಪ್ಲಾಸ್ಟಿಕ್ ಗಳ ಬಳಕೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತಿದ್ದೇವೆ. ಪ್ಲಾಸ್ಟಿಕ್ ಮಾಲಿನ್ಯವನ್ನು ಕಡಿಮೆ ಮಾಡುವ ಮೂಲಕ ಪ್ರಕೃತಿಗೆ ಕೃತಜ್ಞತೆ ಸಲ್ಲಿಸಲು ಪ್ರೇರೇಪಿಸುತ್ತಿದ್ದೇವೆ ಎಂದು ಹೇಳಿದರು. ಕೋಕಾ ಕೋಲಾ ಫೌಂಡೇಶನ್ ನ ಅಧ್ಯಕ್ಷ ಕಾರ್ಲೋಸ್ ಪಗೋಗಾ ಮಾತನಾಡಿ, ಸಮರ್ಪಕ ತ್ಯಾಜ್ಯ ನಿರ್ವಹಣಾ ವ್ಯವಸ್ಥೆಗಳನ್ನು ರೂಪಿಸಲು ಮತ್ತು ರೀಸೈಕ್ಲಿಂಗ್ ವ್ಯವಸ್ಥೆಯನ್ನು ಬಲಪಡಿಸಲು ಪಾಲುದಾರಿಕೆ ಬಹಳ ಮುಖ್ಯ. ಯುಎನ್ಡಿಪಿ ಜೊತೆಗಿನ ನಮ್ಮ ಸಹಯೋಗವು ಪ್ಯಾಕೇಜಿಂಗ್ ತ್ಯಾಜ್ಯವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಸೂಕ್ತ ರೀತಿಯಲ್ಲಿ ಕಾರ್ಯನಿರ್ವಹಿಸಲಿದ್ದು, ಪ್ಲಾಸ್ಟಿಕ್ ಮಾಲಿನ್ಯ ಕಡಿಮೆಗೊಳಿಸಲಿದೆ ಎಂದು ಹೇಳಿದರು.

# ಗಾಜಾ: ವಿಶ್ವಸಂಸ್ಥೆಯಿಂದ ನೆರವು ಕಾರ್ಯ ಪುನಾರಂಭ

**ವಿಶ್ವಸಂಸ್ಥೆ:** ಇಸ್ರೇಲ್ ಮತ್ತು ಹಮಾಸ್ ಮಧ್ಯೆ ಕದನ ವಿರಾಮ ಜಾರಿಯಾದ ನಂತರ ಈಗ ವಿಶ್ವಸಂಸ್ಥೆ ಮತ್ತು ಅದರ ಸಹವರ್ತಿ ಸಂಘಟನೆಗಳ ಕಾರ್ಯಕರ್ತರು ಗಾಜಾ ಜನರಿಗೆ ಅಗತ್ಯ ಪರಿಹಾರ ಸಾಮಗ್ರಿಗಳನ್ನು ತಲುಪಿಸಲು ಯುದ್ಧೋಪಾದಿಯಲ್ಲಿ ಪ್ರಯತ್ನಿಸುತ್ತಿದ್ದಾರೆ. ಇದಲ್ಲದೆ ಮನೆ ಮಠ ಕಳೆದುಕೊಂಡ ನಿರಾಶ್ರಿತರಾಗಿರುವ ಗಾಜಾ ಜನತೆಗಾಗಿರುವ ಹಾನಿಯ ಬಗ್ಗೆಯೂ ಕಾರ್ಯಕರ್ತರು ಲೆಕ್ಕ ಹಾಕುತ್ತಿದ್ದಾರೆ.



ಗಾಜಾ ಪಟ್ಟಿಯಾದ್ಯಂತದ ಜನರಿಗೆ ನೀಡಲಾಗುತ್ತಿರುವ ಪರಿಹಾರ ಸಾಮಗ್ರಿಗಳ ಪ್ರಮಾಣವನ್ನು ಹೆಚ್ಚಿಸುತ್ತಿದ್ದೇವೆ. ಸರಕು ಶೇಖರಣಾ ಸಾಮರ್ಥ್ಯಗಳನ್ನು ಕೂಡ ಹೆಚ್ಚಿಸಲಾಗುತ್ತಿದ್ದು, ಅಗತ್ಯ ದುರಸ್ತಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. ಆರೋಗ್ಯ ಸೇವೆಗಳನ್ನು ಸಹ ಸುಧಾರಿಸಲಾಗುತ್ತಿದೆ ಎಂದು ವಿಶ್ವಸಂಸ್ಥೆಯ ಮಾನವೀಯ ವ್ಯವಹಾರಗಳ ಸಮನ್ವಯ ಕಚೇರಿ (ಒಸಿಎಚ್ಎ) ಬುಧವಾರ ತಿಳಿಸಿದೆ. ವಿಶ್ವಸಂಸ್ಥೆಯ ಕಾರ್ಯಕರ್ತರು ಆಹಾರದ ಪಾರ್ಸೆಲ್ಗಳು ಮತ್ತು ಹಿಟ್ಟನ್ನು ವಿತರಿಸುತ್ತಿದ್ದಾರೆ ಹಾಗೂ ಬೇಕರಿಗಳನ್ನು ಪುನಾರಂಭಿಸಲು ಕೆಲಸ ಮಾಡುತ್ತಿದ್ದಾರೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಗಾಜಾ ಜನತೆಗೆ ಸಹಾಯ ಮಾಡುವ ವಿಶ್ವಸಂಸ್ಥೆಯ ಪ್ರಯತ್ನಗಳ ಬಗ್ಗೆ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರ ಉಪ ವಕ್ತಾರ ಫರ್ಹಾನ್ ಹಕ್ ಅವರು ದಿನನಿತ್ಯದ ಪತ್ರಿಕಾಗೋಷ್ಠಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದರು.

# ಗಡೀಪಾರು; ಕಾನೂನುಬದ್ಧ ವಾಪಸಾತಿ ಭರವಸೆ ನೀಡಿದ ಜೈಶಂಕರ್

**ನವದೆಹಲಿ:** ಅಮೆರಿಕ ಅಕ್ರಮ ವಾಸಿಗಳ ಕುರಿತು ಗಡೀಪಾರು ಮಾಡುವುದಾಗಿ ಟ್ರಂಪ್ ಹೇಳಿಕೆ ಬೆನ್ನಲ್ಲೇ ಕೇಂದ್ರ ವಿದೇಶಾಂಗ ಸಚಿವ ಎಸ್ ಜೈಶಂಕರ್ ನವದೆಹಲಿಯಲ್ಲಿ ಈ ಕುರಿತು ಮಾತನಾಡಿದ್ದಾರೆ. ಅಮೆರಿಕ ಸೇರಿದಂತೆ ವಿದೇಶಗಳಲ್ಲಿ ನೆಲೆಸಿರುವ ಭಾರತೀಯ ವಲಸಿಗರನ್ನು ಕಾನೂನುಬದ್ಧವಾಗಿ ಕರೆತರಲಾಗುವುದು ಎಂದಿದ್ದಾರೆ.

ಅಮೆರಿಕದಲ್ಲಿ ದಾಖಲೆಗಳಿಲ್ಲದೆ ಅಕ್ರಮವಾಗಿ ನೆಲೆಸಿರುವ 18,000 ಭಾರತೀಯ ವಲಸಿಗರನ್ನು ಅಮೆರಿಕ ಪತ್ತೆ ಮಾಡಿದ್ದು, ಈ ಬೆಳವಣಿಗೆ ಬೆನ್ನಲ್ಲೇ ವಿದೇಶಾಂಗ ಸಚಿವರು ಈ ಕುರಿತು ಮಾತನಾಡಿದ್ದಾರೆ.

ಈ ಅಕ್ರಮ ವಲಸಿಗರ ವಿಚಾರವನ್ನು ಒಪ್ಪಿರುವ ವಿದೇಶಾಂಗ ಸಚಿವರು, ಈ ಬಗ್ಗೆ ಭಾರತ ಸ್ಥಿರವಾಗಿದೆ. ಮಾತುಕತೆಯಲ್ಲಿ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಅವರಿಗೆ ಇದನ್ನು ಸ್ಪಷ್ಟವಾಗಿ ತಿಳಿಸಲಾಗಿದೆ ಎಂದಿದ್ದಾರೆ. ಅಮೆರಿಕದಲ್ಲಿ ಹೊಸದಾಗಿ ನೇಮಕವಾಗಿರುವ ರಾಜ್ಯ ಕಾರ್ಯದರ್ಶಿ ಮೊರ್ಕೊ ರೂಬಿಯೊ ಮಂಗಳವಾರ ಮೊದಲ ಬಾರಿಗೆ ವಿದೇಶಾಂಗ ಸಚಿವ ಜೈಶಂಕರ್ ಅವರೊಂದಿಗೆ ಸಭೆ ನಡೆಸಿದರು. ಈ ವೇಳೆ ಟ್ರಂಪ್ ಆಡಳಿತವು ಭಾರತೊಂದಿಗೆ ಸುಧಾರಿತ ಆರ್ಥಿಕ



ಸಂಬಂಧವನ್ನು ವ್ಯಕ್ತಪಡಿಸುತ್ತದೆ ಎಂದ ಅವರು ಅಕ್ರಮ ವಲಸಿಗರ ವಿಚಾರ ಕುರಿತು ಮಾತನಾಡಿದರು.

ಮಾಧ್ಯಮಗೋಷ್ಟಿಯಲ್ಲಿ ಮಾತನಾಡಿದ ಜೈಶಂಕರ್, ಭಾರತದ ಕೌಶಲ್ಯ ಮತ್ತು ಪ್ರತಿಭೆಗಳು ಜಾಗತಿಕ ಮಟ್ಟದಲ್ಲಿ ಅವಕಾಶ ದೊರೆಯಬೇಕು. ಇದೇ ವೇಳೆ ಭಾರತವು ಕಾನೂನಿಗೆ ಹೆಚ್ಚು ಬೆಂಬಲವನ್ನು ನೀಡುತ್ತದೆ. ಎರಡು ದೇಶಗಳ ನಡುವೆ ಕಾನೂನುಬದ್ಧ ಚಲನೆಯನ್ನು ನಾವು ಒತ್ತಿ ಹೇಳುತ್ತೇವೆ ಎಂದರು.



# ಕಾಶ್ಮೀರಕ್ಕೆ ನೇರ ರೈಲು ಸೇವೆ

**ಜಮ್ಮು/ಶ್ರೀನಗರ:** ಕಾಶ್ಮೀರಕ್ಕೆ ಸಂಚರಿಸಲಿರುವ ಬಹುನಿರೀಕ್ಷಿತ ಮೊದಲ ರೈಲನ್ನು ಪ್ರಧಾನಿ ನರೇಂದ್ರ ಮೋದಿ ಫೆಬ್ರವರಿ ಮೊದಲ ಅಥವಾ ಎರಡನೇ ವಾರದಲ್ಲಿ ಉದ್ಘಾಟಿಸಲಿದ್ದಾರೆ ಎಂದು ಹೇಳಲಾಗಿದೆ

ಪ್ರಧಾನಿ ಕಚೇರಿಯಿಂದ ರೈಲ್ವೆ ಇಲಾಖೆಗೆ ದೃಢೀಕರಣದ ಅಗತ್ಯ ಇರುವುದರಿಂದ ಉದ್ಘಾಟನೆಗೆ ಅಂತಿಮ ದಿನಾಂಕವನ್ನು ಇನ್ನೂ ಅಂತಿಮಗೊಳಿಸಲಾಗಿಲ್ಲ ಎಂದು ಅವರು ತಿಳಿಸಿದರು. ಪ್ರಧಾನಿ ಮೋದಿ ಕತ್ರಾದಿಂದ ರೈಲಿಗೆ ಹಸಿರು ನಿಶಾನೆ ತೋರಲಿದ್ದಾರೆ ಎಂದು ಮೂಲಗಳು ತಿಳಿಸಿವೆ

ಉದ್ಘಾಟನಾ ದಿನದಂದು ಪ್ರಧಾನಿ ಜಮ್ಮು ವಿಮಾನ ನಿಲ್ದಾಣದಲ್ಲಿ ಇಳಿದು, ವಿಶ್ವದ ಅತೀ ಎತ್ತರದ ರೈಲ್ವೆ ಸೇತುವೆಯಾದ ಚಿನಾಬ್ ಸೇತುವೆಗೆ ಹೆಲಿಕಾಪ್ಟರ್ ಮೂಲಕ ತೆರಳಲಿದ್ದಾರೆ. ನಂತರ ಅಲ್ಲಿಂದ ಕತ್ರಾ ರೈಲು ನಿಲ್ದಾಣಕ್ಕೆ ವಿಮಾನದ ಮೂಲಕ ತೆರಳಲಿದ್ದಾರೆ. ಅಲ್ಲಿ ಕಾಶ್ಮೀರಕ್ಕೆ ವಂದೇ ಭಾರತ್ ರೈಲಿಗೆ ಹಸಿರು ನಿಶಾನೆ ತೋರಲಿದ್ದಾರೆ. ಪ್ರಧಾನಿ ಮೋದಿ ರೈಲಿಗೆ ಹಸಿರು ನಿಶಾನೆ ತೋರಿದ ಬಳಿಕ ಕತ್ರಾದ ಕ್ರೀಡಾಂಗಣ ಹಾಗೂ ಜಮ್ಮುವಿನ ಮೌಲಾನಾ ಆಜಾದ್ ಕ್ರೀಡಾಂಗಣದಲ್ಲಿ ರ್ಯಾಲಿ ಉದ್ದೇಶಿಸಿ ಮಾತನಾಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಕತ್ರಾ ಮತ್ತು ಶ್ರೀನಗರ ನಡುವಿನ ರೈಲು ಸೇವೆಯ ಔಪಚಾರಿಕ ಉದ್ಘಾಟನೆ ನಂತರ, ಜನವರಿ 24 ಮತ್ತು 25 ರಂದು ವಂದೇ ಭಾರತ್ ರೈಲಿನ ಪ್ರಾಯೋಗಿಕ ಸಂಚಾರ ನಡೆಯಲಿದೆ.

## ಅಮೆರಿಕದಲ್ಲಿ ಹೆಚ್ಚಾಯು ಭಾರತೀಯ ಗರ್ಭಿಣಿಯರ ಸಿಸೇರಿಯನ್ ಹೆರಿಗೆ ಬೇಡಿಕೆ

**ವಾಷಿಂಗ್ಟನ್:** ಹುಟ್ಟಿನಿಂದ ಸಿಗುವ ಪೌರತ್ವ ಹಕ್ಕು ರದ್ದುಗೊಂಡ ಭೀತಿ ಅಮೆರಿಕದಲ್ಲಿರುವ ವಲಸಿಗರಲ್ಲಿ ಹುಟ್ಟಿಕೊಂಡಿದೆ. ಕಾಯ್ದೆ ಜಾರಿಗೆ ಬರುವ ಮುನ್ನವೇ ಹೆರಿಗೆ ಮಾಡಿಸಿಕೊಳ್ಳಲು ಗರ್ಭಿಣಿಯರು ಆಸ್ಪತ್ರೆಗಳಿಗೆ ದಾಂಗುಡಿ ಇಟ್ಟಿದ್ದಾರೆ. ಇವರ ಪೈಕಿ ಅನೇಕ ಭಾರತೀಯರು ಇದ್ದಾರೆಂದು ವೈದ್ಯರು ತಿಳಿಸಿದ್ದಾರೆ. ಫೆ.20 ರ ಒಳಗೆ ಸಿಸೇರಿಯನ್ ಮೂಲಕ ಹೆರಿಗೆಗಾಗಿ ಅಮೆರಿಕದ ಹೆರಿಗೆ ಆಸ್ಪತ್ರೆಗಳಿಗೆ ಗರ್ಭಿಣಿಯರು ಧಾವಿಸುತ್ತಿದ್ದಾರೆ.

**ಫೆಬ್ರವರಿ 20 ಏಕೆ?:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಕಾರ್ಯನಿರ್ವಾಹಕ ಆದೇಶದ ಅಡಿಯಲ್ಲಿ ಜನ್ಮದತ್ತ ಪೌರತ್ವ ಫೆ.20 ರಂದು ರದ್ದುಗೊಳ್ಳಲಿದೆ. ಅಲ್ಲಿಂದಾಚೆಗೆ ಹೊಸ ಕಾಯ್ದೆ ಜಾರಿಗೆ ಬರುವ ಸಾಧ್ಯತೆ ಇದೆ. ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ತಕ್ಷಣ ಟ್ರಂಪ್ ಸಹಿ ಮಾಡಿದ ಕಾರ್ಯಕಾರಿ ಆದೇಶಗಳಲ್ಲಿ ಒಂದು ಅಮೆರಿಕದಲ್ಲಿ ಜನ್ಮದತ್ತ ಪೌರತ್ವ ಕೊನೆಗೊಳಿಸುವುದು. ಆದ್ದರಿಂದ, ಫೆ.19 ರವರೆಗೆ ಅಮೆರಿಕದ ನಾಗರಿಕರಲ್ಲದ ದಂಪತಿಗೆ ಜನಿಸಿದ ಮಕ್ಕಳು ಅಮೆರಿಕದ ಪ್ರಜೆಗಳಾಗುತ್ತಾರೆ. ನಂತರದ ದಿನಗಳಲ್ಲಿ ಜನಿಸುವ ಮಕ್ಕಳು ಅಮೆರಿಕದ ಪ್ರಜೆಯಾಗುವುದಿಲ್ಲ.



## ಮೌಂಟ್ ಎವರೆಸ್ಟ್: ಪರವಾನಗಿ ಶುಲ್ಕ' ಹೆಚ್ಚಿಸಿದ ನೇಪಾಳ

**ನವದೆಹಲಿ:** ಪರ್ವತಾರೋಹಣ ಉತ್ಸಾಹಿಗಳಿಗೆ ನೇಪಾಳ ಸರ್ಕಾರ ಬಿಗ್ ಶಾಕ್ ನೀಡಿದ್ದು, ವಿಶ್ವದ ಅತಿ ಎತ್ತರದ ಪರ್ವತ ಶಿಖರ ಮೌಂಟ್ ಎವರೆಸ್ಟ್ ಏರಲು ಪರವಾನಗಿ ಶುಲ್ಕವನ್ನು ಕನಿಷ್ಠ 36 ಪ್ರತಿಶತದಷ್ಟು ಹೆಚ್ಚಿಸಲು ನಿರ್ಧರಿಸಿದೆ. ಅತ್ಯಂತ ಎತ್ತರದ ಶಿಖರದಲ್ಲಿ ಕಸದ ಮಾಲಿನ್ಯವನ್ನ ನಿಯಂತ್ರಿಸುವ ಪ್ರಯತ್ನವಾಗಿ ಬರುವ ಈ ಹೊಸ ಕ್ರಮವು, ವಸಂತ ಋತುವಿನಲ್ಲಿ (ಮಾರ್ಚ್-ಮೇ) ಸಾಮಾನ್ಯ ದಕ್ಷಿಣ ಮಾರ್ಗದಿಂದ ಎವರೆಸ್ಟ್ ಏರುವ ವಿದೇಶಿಯರಿಗೆ ರಾಯಲ್ಟಿ ಶುಲ್ಕವನ್ನು 15,000 ಡಾಲರ್ಗೆ ಹೆಚ್ಚಿಸುತ್ತದೆ. ಪ್ರಸ್ತುತ, ಇದು 11,000 ಡಾಲರ್ ಆಗಿತ್ತು.

**ಮೌಂಟ್ ಎವರೆಸ್ಟ್ ಏರಲು ಶುಲ್ಕ ನವೀಕರಣ.!:** ಶರತ್ಕಾಲದ ಋತುವಿನಲ್ಲಿ (ಸೆಪ್ಟೆಂಬರ್-ನವೆಂಬರ್) ಪರ್ವತಾರೋಹಣ ಶುಲ್ಕವು 5,500 ಡಾಲರ್ನಿಂದ 7,500 ಡಾಲರ್ಗೆ ಏರಿದೆ. ಚಳಿಗಾಲ (ಡಿಸೆಂಬರ್-ಫೆಬ್ರವರಿ) ಮತ್ತು ಮಾನ್ಸೂನ್ (ಜೂನ್-ಆಗಸ್ಟ್) ಋತುಗಳಲ್ಲಿ ಪ್ರತಿ ವ್ಯಕ್ತಿಗೆ ಪರವಾನಗಿ ವೆಚ್ಚವನ್ನು 2,750 ಡಾಲರ್ನಿಂದ 3,750 ಡಾಲರ್ಗೆ ಪರಿಷ್ಕರಿಸಲಾಗಿದೆ. ಶಿಖರವನ್ನು ಏರಲು ಹೊಸ ಶುಲ್ಕಗಳು ಸೆಪ್ಟೆಂಬರ್ 1, 2025 ರಿಂದ ಜಾರಿಗೆ ಬರಲಿವೆ.

ಈ ನಿಟ್ಟಿನಲ್ಲಿ ಕ್ಯಾಬಿನೆಟ್ ನಿರ್ಧಾರವನ್ನ ತೆಗೆದುಕೊಳ್ಳಲಾಗಿದ್ದರೂ, ಅಧಿಕೃತ ಪ್ರಕಟಣೆ ಇನ್ನೂ ಬಂದಿಲ್ಲ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ನಿಯಮಗಳನ್ನ ಮೊದಲು ನೇಪಾಳ ಗೆಜೆಟ್'ನಲ್ಲಿ ಪ್ರಕಟಿಸಲಾಗುವುದು ಮತ್ತು ನಂತರ ಜಾರಿಗೆ ತರಲಾಗುವುದು.

ವಿಶೇಷವೆಂದರೆ, ತವರು ದೇಶವಾದ ನೇಪಾಳದ ಪರ್ವತಾರೋಹಿಗಳಿಗೆ ರಾಯಲ್ಟಿ ಶುಲ್ಕವು ಪ್ರಸ್ತುತ 75,000 ರೂ.ಗಳಿಂದ ಶರತ್ಕಾಲದಲ್ಲಿ 150,000 ರೂ.ಗೆ ಏರಿದೆ.

# ಹಿಂದು ದೇಗುಲಕ್ಕೆ ಮುಸ್ಲಿಮ್ ಉಸ್ತುವಾರಿ

**ಬಹರಾಯಿಚ್:** ಇತ್ತೀಚಿಗೆ ಕೋಮು ಉದ್ವಿಗ್ನತೆಗಳು ಮತ್ತು ತೋಳಗಳ ದಾಳಿಗಳಿಂದಾಗಿ ಸುದ್ದಿಯಾಗಿದ್ದ ಉತ್ತರ ಪ್ರದೇಶದ ಬಹರಾಯಿಚ್ ಜಿಲ್ಲೆಯಲ್ಲಿ ಬಹಳ ವರ್ಷಗಳಿಂದ ಸದ್ದಿಲ್ಲದೆ ಮೆರೆಯುತ್ತಿರುವ ಕೋಮು ಸಾಮರಸ್ಯದ ಹೃದಯಸ್ಪರ್ಶಿ ಕಥನವೊಂದು ಹೊರಹೊಮ್ಮಿದೆ.



ಇಸ್ಲಾಮ್ ಧರ್ಮವನ್ನು ಚಾಚೂ ತಪ್ಪದೆ ಪಾಲಿಸುವ ಮುಹಮ್ಮದ್ ಅಲಿ(58) ಹಿಂದು ದೇಗುಲವನ್ನು ನಿರ್ವಹಿಸುತ್ತಿರುವ ಟ್ರಸ್ಟ್ನ ಅಧ್ಯಕ್ಷ ಮತ್ತು ಉಸ್ತುವಾರಿಯಾಗಿ ಕಳೆದ 18 ವರ್ಷಗಳಿಂದಲೂ ನಿಷ್ಠೆಯಿಂದ ಸೇವೆ ಸಲ್ಲಿಸುತ್ತಿದ್ದಾರೆ.

ಬಹರಾಯಿಚ್ ಜಿಲ್ಲಾ ಕೇಂದ್ರದಿಂದ 27 ಕಿ.ಮೀ. ಅಂತರದಲ್ಲಿರುವ ಜೈತಾಪುರ ಬಝಾರ್ನಲ್ಲಿ ಅಲಿ ವೃದ್ಧ ಮಾತೇಶ್ವರಿ ಮಾತಾ ಘುರ್ದೇವಿ ದೇವಸ್ಥಾನದ ಉಸ್ತುವಾರಿಯನ್ನು ನೋಡಿಕೊಳ್ಳುತ್ತಿದ್ದಾರೆ. ಮುಸ್ಲಿಮರೂ ಈ ದೇವಸ್ಥಾನದಲ್ಲಿ ಪೂಜೆ ಸಲ್ಲಿಸುತ್ತಾರೆ.

ರೋಝಾ ಮತ್ತು ನಮಾಜ್ನಂತಹ ಇಸ್ಲಾಮಿಕ್ ಸಂಪ್ರದಾಯಗಳನ್ನು ನಿಷ್ಠೆಯಿಂದ ಆಚರಿಸುವ ಅಲಿ ಘುರ್ದೇವಿ ಮತ್ತು ಹನುಮಾನ್ ಅವರ ಆರಾಧನೆಯೊಂದಿಗೆ ತನ್ನ ಅವಳಿ ಪಾತ್ರಗಳನ್ನು ಸಮರ್ಪಣಾ ಭಾವದಿಂದ ನಿರ್ವಹಿಸುತ್ತಿದ್ದಾರೆ.

ತನ್ನ ಬದುಕಿಗೆ ತಿರುವನ್ನು ನೀಡಿದ್ದ ಬಾಲ್ಯದಲ್ಲಿಯ ಘಟನೆಯನ್ನು ನೆನಪಿಸಿಕೊಂಡ ಅಲಿ, 'ನನಗೆ ಏಳು ವರ್ಷ ವಯಸ್ಸಾಗಿದ್ದಾಗ ತೊನ್ನು ನನ್ನನ್ನು ಬಾಧಿಸಿತ್ತು ಮತ್ತು ನನ್ನ ಕಣ್ಣುಗಳು ಬಿಳಿಯಾಗಿದ್ದವು. ಎಲ್ಲ ಚಿಕಿತ್ಸೆ ಮಾಡಿದ್ದರೂ ಪ್ರಯೋಜನವಾಗಿರಲಿಲ್ಲ, ನನ್ನ ತಾಯಿ ನನ್ನನ್ನು ಘುರ್ದೇವಿ ದೇವಸ್ಥಾನಕ್ಕೆ ಕರೆದೊಯ್ದಿದ್ದರು,ದೇವಸ್ಥಾನದ ಪವಿತ್ರ ತೀರ್ಥವನ್ನು ಕಣ್ಣಿಗೆ ಹಚ್ಚಿಕೊಂಡಿದ್ದರಿಂದ ನಾನು ಗುಣಮುಖನಾಗಿದೆ ಮತ್ತು ಇದು ದೇವಸ್ಥಾನದೊಂದಿಗೆ ನನ್ನ ಜೀವಿತಾವಧಿಯ ಸಂಬಂಧಕ್ಕೆ ನಾಂದಿ ಹಾಡಿತ್ತು' ಎಂದು ಹೇಳಿದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ನಿವೃತ್ತಿ ಬಗ್ಗೆ ಮಾತನಾಡಿದ ರಶ್ಮಿಕಾ ಮಂದಣ್ಣ

'ಅನಿಮಲ್', 'ಪುಷ್ಪ 2' ಯಶಸ್ಸಿನ ಬಳಿಕ 'ಛಾವಾ' ಸಿನಿಮಾದ ಪ್ರಚಾರ ಕಾರ್ಯದಲ್ಲಿ ರಶ್ಮಿಕಾ ಮಂದಣ್ಣ ಬ್ಯುಸಿಯಾಗಿದ್ದಾರೆ. ಈ ಚಿತ್ರದ ಟ್ರೈಲರ್ ರಿಲೀಸ್ ಕಾರ್ಯಕ್ರಮದಲ್ಲಿ ನಿವೃತ್ತಿ ಹೊಂದುವ ಬಗ್ಗೆ ನಟಿ ಮಾತನಾಡಿದ್ದಾರೆ. ಟಾಪ್ ನಟಿ ಹ್ಯಾಪಿ ಟು ರಿಟೈರ್ ಎಂದಿರೋದು ಸಹಜವಾಗಿ ಶ್ರೀವಲ್ಲಿ ಫ್ಯಾನ್ಸ್‌ಗೆ ಶಾಕ್ ಆಗಿದೆ.

ಇತ್ತೀಚೆಗೆ ಜಿಮ್ ಮಾಡುವಾಗ ನಟಿಯ ಕಾಲಿಗೆ ಪೆಟ್ಟಾಗಿದ್ದರೂ ಲೆಕ್ಕಿಸದೇ 'ಛಾವಾ' ಚಿತ್ರದ ಟ್ರೈಲರ್ ಕಾರ್ಯಕ್ರಮಕ್ಕೆ ಬಂದು ಚಿತ್ರತಂಡಕ್ಕೆ ಸಾಥ್ ನೀಡಿದ್ದಾರೆ. ಈವೆಂಟ್‌ನಲ್ಲಿ ತಮ್ಮ ಪಾತ್ರದ ಬಗ್ಗೆ ಮಾತನಾಡಿದ ರಶ್ಮಿಕಾ, ಇದು ಒಂದು ಗೌರವ. ಮಹಾರಾಣಿ ಯೇಸುಬಾಯಿ ಪಾತ್ರದಲ್ಲಿ ದಕ್ಷಿಣದಿಂದ ಬಂದ ಹುಡುಗಿಯಾಗಿ ನಾನು ಈ ಜೀವಿತಾವಧಿಯಲ್ಲಿ ಕೇಳಬಹುದಾದ ಅತ್ಯಂತ ವಿಶೇಷ ಮತ್ತು ವಿಭಿನ್ನವಾದ ಪಾತ್ರವಾಗಿದೆ. ಇದಾದ ನಂತರ, ನಾನು ನಿವೃತ್ತಿ ಹೊಂದಿದರೂ ಬೇಸರವಿಲ್ಲ ಎಂದಿದ್ದಾರೆ. ನಾನು ಸಾಮಾನ್ಯವಾಗಿ ಅಳುವುದಿಲ್ಲ. ಆದರೆ ಈ ಟ್ರೈಲರ್ ನನ್ನನ್ನು ಕಣ್ಣೀರಾಗಿಸಿದೆ ಎಂದಿದ್ದಾರೆ.

ಯೇಸುಬಾಯಿ ಪಾತ್ರ ನನ್ನ ಪಾಲಿಗೆ ವಿಶೇಷವಾಗಿದೆ. ಈ ಸಿನಿಮಾದ ನಂತರ ನಿವೃತ್ತಿ ಹೊಂದಲು ನನಗೆ ಖುಷಿ ಇದೆ ಎಂದು ನಿರ್ದೇಶಕ ಲಕ್ಷ್ಮಣ್‌ಗೆ ಹೇಳಿದ್ದೇನೆ ಎಂದು ವೇದಿಕೆಯಲ್ಲಿ ನಟಿ ಹಂಚಿಕೊಂಡಿದ್ದಾರೆ. ಈ ಪಾತ್ರಕ್ಕೆ ಸೆಲೆಕ್ಟ್ ಮಾಡಿದ ಚಿತ್ರತಂಡಕ್ಕೆ ನಟಿ ಧನ್ಯವಾದ ತಿಳಿಸಿದ್ದಾರೆ.

ಇನ್ನೂ ರಶ್ಮಿಕಾಗೆ ಇನ್ನೂ 28 ವರ್ಷ. ವೃತ್ತಿರಂಗದಲ್ಲಿ ಟಾಪ್ 1 ನಟಿಯಾಗಿ ಬೇಡಿಕೆಯಿದೆ. ಹೀಗಿರುವಾಗ ಕ್ರೇಜ್ ಇರುವಾಗಲೇ ನಟಿ ನಿವೃತ್ತಿ ಬಗ್ಗೆ ಮಾತನಾಡಿರೋದು ನಟಿಯ ಫ್ಯಾನ್ಸ್‌ಗೆ ಬೇಸರವಾಗಿದೆ. ಸದ್ಯ ಬಿಗ್ ಬಜೆಟ್ ಸಿನಿಮಾಗಳು ಅವರ ಕೈಯಲ್ಲಿರುವ ಕಾರಣ, ಮುಂದಿನ ವರ್ಷಗಳಲ್ಲಿ ವಿವಾಹದ ಬಳಿಕ ಅವರು ನಟನೆಯಿಂದ ದೂರವಿರಬಹುದು ಎಂದು ಫ್ಯಾನ್ಸ್ ಊಹಿಸಿದ್ದಾರೆ.

ಇನ್ನೂ ವಿಕ್ಕಿ ಕೌಶಲ್ ಅವರು ಮರಾಠ ಸಾಮ್ರಾಟನಾಗಿ ಅಬ್ಬರಿಸಿದ್ದಾರೆ. ಚಿತ್ರದಲ್ಲಿ ವಿಕ್ಕಿ ಪತ್ನಿ ಮಹಾರಾಣಿಯಾಗಿ ರಶ್ಮಿಕಾ ಮಿಂಚಿದ್ದಾರೆ. 'ಛಾವಾ' ಸಿನಿಮಾ ಇದೇ ಫೆ.14ರಂದು ರಿಲೀಸ್ ಆಗಲಿದೆ.

**ಶ್ರೀವಲ್ಲಿ ಅಭಿಮಾನಿಗಳು ಶಾಕ್**



# ರಾಜ್ಯ ಪ್ರಶಸ್ತಿ ನಿರಾಕರಣೆಯ ಹಿಂದಿದೆ ಸುದೀಪ್ ನೋವಿನ ಕಥೆ

ಕಿಚ್ಚ ಸುದೀಪ್ ಅವರು ಚಲನಚಿತ್ರ ರಾಜ್ಯ ಪ್ರಶಸ್ತಿಯನ್ನು ನಿರಾಕರಿಸಿದ್ದು, ಈ ವಿಚಾರವು ಚರ್ಚೆಗೆ ಗ್ರಾಸವಾಗಿದೆ. 'ಪೈಲ್ವಾನ್' ನಟನೆಗೆ ಅತ್ಯುತ್ತಮ ನಟ ಎಂದು ಸರ್ಕಾರ ಘೋಷಿಸಿದ್ದ ರಾಜ್ಯ ಪ್ರಶಸ್ತಿಯನ್ನು ನಿರಾಕರಿಸಿರುವ ಸುದೀಪ್ ನಿರ್ಧಾರದ ಬಗ್ಗೆ ಅಭಿಮಾನಿಗಳಲ್ಲಿ ನಾನಾ ರೀತಿಯ ಪ್ರಶ್ನೆ ಮೂಡಿದೆ. ಆದರೆ ರಾಜ್ಯ ಪ್ರಶಸ್ತಿ ನಿರಾಕರಣೆಯ ಹಿಂದಿದೆ ಸುದೀಪ್ ನೋವಿನ ಅಸಲಿ ಕಥೆ.

ಕೆಲ ವರ್ಷಗಳಿಂದ ಪ್ರಶಸ್ತಿಗಳನ್ನು ಸುದೀಪ್ ನಿರಾಕರಿಸುತ್ತಾ ಬಂದಿದ್ದಾರೆ. ಈ ನಿರಾಕರಣೆಯ ಹಿಂದೆ ಅದರದ್ದೇ ಆದ ನೋವಿದೆ. ಪ್ರಶಸ್ತಿಗಳನ್ನು ಸುದೀಪ್ ನಿರಾಕರಿಸಲು ಕಾರಣ ನಡೆದ ಆ ಎರಡು ಘಟನೆ. 2004ರ ವೇಳೆ, 'ರಂಗ ಎಸ್.ಎಸ್.ಎಲ್.ಸಿ' ಮತ್ತು 'ಮುಸ್ಸಂಜೆ ಮಾತು' ಸಿನಿಮಾ ಮಾಡಿದಾಗ ಪ್ರಶಸ್ತಿ ಕಮಿಟಿಯಲ್ಲಿದ್ದವರೇ ಸುದೀಪ್‌ಗೆ ಕರೆ ಮಾಡಿ ನಿಮಗೆ ಅತ್ಯುತ್ತಮ ನಟ ಪ್ರಶಸ್ತಿ ಬಂದಿದೆ ಅಂತ ಹೇಳಿದ್ದರು. ಸಹಜವಾಗಿಯೇ ಸುದೀಪ್ ಸಂಭ್ರಮಿಸಿದ್ದರು. ಆದರೆ, ರಾಜ್ಯ ಪ್ರಶಸ್ತಿ ಘೋಷಣೆ ಆದಾಗ ಅಲ್ಲಿ ಬೇರೆ ನಟರ ಪಾಲಾಗಿತ್ತು. ಈ ಎರಡು ಘಟನೆಯಿಂದಾಗಿ ಅವರು ಪ್ರಶಸ್ತಿಗಳನ್ನು ನಿರಾಕರಿಸುತ್ತಲೇ ಬಂದಿದ್ದಾರೆ. ಕೆಲ ವರ್ಷಗಳಿಂದ ಅವರು ಪ್ರಶಸ್ತಿ ಸಮಾರಂಭಗಳಿಗೂ ಹೋಗುವುದನ್ನು ಕೂಡ ನಿಲ್ಲಿಸಿದ್ದಾರೆ.

ಇನ್ನೂ ಆಗಸ್ಟ್ 2024ನಲ್ಲಿ ತುಮಕೂರು ವಿಶ್ವವಿದ್ಯಾಲಯವು ಸುದೀಪ್‌ಗೆ ಗೌರವ ಡಾಕ್ಟರೇಟ್ ಘೋಷಿಸಿತ್ತು. ಆ ಗೌರವವನ್ನು ನಯವಾಗಿಯೇ ನಿರಾಕರಿಸಿದ್ದರು.

ಅಂದಹಾಗೆ, ಸುದೀಪ್ ಅವರು ಸೋಶಿಯಲ್ ಮೀಡಿಯಾದಲ್ಲಿ ರಾಜ್ಯ ಪ್ರಶಸ್ತಿ ನಿರಾಕರಿಸಿ ಟ್ವೀಟ್‌ವೊಂದನ್ನು ಮಾಡಿದ್ದಾರೆ. ಅತ್ಯುತ್ತಮ ನಟ ವಿಭಾಗದಲ್ಲಿ ರಾಜ್ಯ ಪ್ರಶಸ್ತಿಯನ್ನು ಪಡೆದಿರುವುದು ನಿಜಕ್ಕೂ ಒಂದು ಸೌಭಾಗ್ಯ. ಈ ಗೌರವಕ್ಕಾಗಿ ಗೌರವಾನ್ವಿತ ತೀರ್ಪುಗಾರರಿಗೆ ನನ್ನ ಹೃತ್ಪೂರ್ವಕ ಧನ್ಯವಾದಗಳು. ಆದಾಗ್ಯೂ, ನಾನು ಹಲವಾರು ವರ್ಷಗಳಿಂದ ಪ್ರಶಸ್ತಿಗಳನ್ನು ಸ್ವೀಕರಿಸುವುದನ್ನು ನಿಲ್ಲಿಸಲು ನಾನು ನಿರ್ಧರಿಸಿದ್ದೇನೆ. ಅದಕ್ಕೆ ವಿವಿಧ ವೈಯಕ್ತಿಕ ಕಾರಣಗಳಿವೆ. ಈ ಕಲೆಗಾಗಿ ತಮ್ಮ ಹೃದಯವನ್ನು ಅರ್ಪಿಸಿದ ಅನೇಕ ಸಮರ್ಥ ನಟರು ಇದ್ದಾರೆ. ನನಗಿಂತಲೂ ಹೆಚ್ಚಾಗಿ ಅವರಿಗೆ ಈ ಗೌರವ ಸಲ್ಲಬೇಕು. ಅವರಲ್ಲಿ ಒಬ್ಬರು ಈ ಗೌರವ ಪಡೆದರೆ ನನಗೆ ಹೆಚ್ಚು ಖುಷಿ ಆಗುತ್ತದೆ. ಜನರನ್ನು ರಂಜಿಸಬೇಕು ಎಂಬ ನನ್ನ ಕೆಲಸದಲ್ಲಿ ಪ್ರಶಸ್ತಿಗಳ ನಿರೀಕ್ಷೆ ಇಲ್ಲ. ಜ್ಯೂರಿಗಳು ನನ್ನನ್ನು ಗುರುತಿಸಿರುವುದು ನನಗೆ ಇನ್ನಷ್ಟು ಉತ್ತೇಜನ ನೀಡಿದೆ.

ನನ್ನನ್ನು ಆಯ್ಕೆ ಮಾಡಿದ್ದಕ್ಕೆ ಜ್ಯೂರಿಗಳಿಗೆ ನಾನು ಚಿರಋಣಿ. ಈ ಮನ್ನಣೆಯೇ ನಿಜವಾದ ಪ್ರಶಸ್ತಿ. ನನ್ನ ನಿರ್ಧಾರದಿಂದ ನಿರಾಸೆ ಆಗಿದ್ದರೆ ಜ್ಯೂರಿಗಳಿಗೆ ಮತ್ತು ರಾಜ್ಯ ಸರ್ಕಾರಕ್ಕೆ ನಾನು ಕ್ಷಮೆ ಕೇಳುತ್ತೇನೆ. ನನ್ನ ನಿರ್ಧಾರವನ್ನು ನೀವು ಗೌರವಿಸುತ್ತೀರಿ ಮತ್ತು ನನ್ನನ್ನು ಬೆಂಬಲಿಸುತ್ತೀರಿ ಎಂಬ ನಂಬಿಕೆ ನನಗೆ ಇದೆ. ಮತ್ತೊಮ್ಮೆ, ನನ್ನ ಕೆಲಸವನ್ನು ಗುರುತಿಸಿ ಈ ಪ್ರಶಸ್ತಿಗೆ ಪರಿಗಣಿಸಿದ್ದಕ್ಕಾಗಿ ತೀರ್ಪುಗಾರರ ಗೌರವಾನ್ವಿತ ಸದಸ್ಯರಿಗೆ ಮತ್ತು ರಾಜ್ಯ ಸರ್ಕಾರಕ್ಕೆ ನಾನು ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದು ನಟ ಬರೆದುಕೊಂಡಿದ್ದಾರೆ.



# ಬೇಬಿ ಬಂಪ್ ಫೋಟೋ ಹಂಚಿಕೊಂಡ 'ದಿ ವಿಲನ್' ನಟಿ ಆಮಿ



ಬಾಲಿವುಡ್ ಬೆಡಗಿ ಆಮಿ ಜಾಕ್ಸನ್ ಅವರು ಹೊಸ ಅತಿಥಿಯ ಆಗಮನದ ನಿರೀಕ್ಷೆಯಲ್ಲಿದ್ದಾರೆ. ಇದೀಗ ಬಿಕಿನಿ ಧರಿಸಿ ಬೇಬಿ ಬಂಪ್ ಫೋಟೋವನ್ನು ನಟಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.

ಕಳೆದ ವರ್ಷ ನಟ ಎಡ್ ವೆಸ್ಟ್‌ವಿಕ್ ಜೊತೆ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದ ಆಮಿ ಅವರು ಅಕ್ಟೋಬರ್‌ನಲ್ಲಿ ಪ್ರೆಗ್ನೆನ್ಸಿ ಬಗ್ಗೆ ನಟಿ ಗುಡ್ ನ್ಯೂಸ್ ಕೊಟ್ಟಿದ್ದರು. ಈಗ ಬಿಕಿನಿ ಧರಿಸಿ ಬೋಲ್ಡ್ ಲುಕ್‌ನಲ್ಲಿ ಬೇಬಿ ಬಂಪ್ ಫೋಟೋ ಹಂಚಿಕೊಂಡಿದ್ದಾರೆ. ನಟಿಯ ಲುಕ್‌ಗೆ ಫ್ಯಾನ್ಸ್ ಕಡೆಯಿಂದ ಬಗೆ ಬಗೆಯ ಕಾಮೆಂಟ್ಸ್ ಹರಿದು ಬರುತ್ತಿದೆ.

ಅಂದಹಾಗೆ, 2015ರಲ್ಲಿ ಉದ್ಯಮಿ ಜಾರ್ಜ್ ಜೊತೆ ಲಿವ್ ಇನ್ ರಿಲೇಷನ್‌ಶಿಪ್‌ನಲ್ಲಿದ್ದರು. ಇಬ್ಬರ ಪ್ರೀತಿಗೆ ಮಗುವೊಂದು ಸಾಕ್ಷಿಯಾಗಿತ್ತು. ಆದರೆ ಕೆಲ ಮನಸ್ತಾಪಗಳಿಂದ 2021ರಲ್ಲಿ ಅವರೊಂದಿಗೆ ನಟಿ ಬ್ರೇಕಪ್ ಮಾಡಿಕೊಂಡಿದ್ದರು. ಇದೀಗ ಗಂಡು ಮಗನನ್ನು ನಟಿಯೇ ಪ್ರೀತಿಯಿಂದ ನೋಡಿಕೊಳ್ಳುತ್ತಿದ್ದಾರೆ. ಇನ್ನೂ ಎಡ್ ವೆಸ್ಟ್‌ವಿಕ್ ಜೊತೆ ದಾಂಪತ್ಯ ಜೀವನದಲ್ಲಿ ಖುಷಿಯಾಗಿರುವ ನಟಿ ಮಗುವೊಂದು ಆಗಮಿಸುತ್ತಿರುವ ಖುಷಿಯಲ್ಲಿದ್ದಾರೆ.

ಇನ್ನೂ ಸುದೀಪ್ ಮತ್ತು ಶಿವಣ್ಣ ಜೊತೆ 'ದಿ ವಿಲನ್' ಸಿನಿಮಾದಲ್ಲಿ ಆಮಿ ನಾಯಕಿಯಾಗಿ ನಟಿಸಿದ್ದರು. ಈ ಚಿತ್ರದ ಮೂಲಕ ಕನ್ನಡಿಗರಿಗೆ ನಟಿ ಪರಿಚಿತರಾದರು.



## ಸೌರವ್ ಗಂಗೂಲಿಯ 35 ವರ್ಷಗಳ ಹಳೆಯ ದಾಖಲೆ ಮುರಿದ

# 10ನೇ ತರಗತಿಯ ಅಂಕಿತ್ ಚಟರ್ಜಿ

ದೇಶೀ ಟೂರ್ನಿ ರಣಜಿ ಟ್ರೋಫಿ 2024-25 ರ ಲೀಗ್ ಹಂತದ ಎರಡನೇ ಹಂತವು ಇಂದಿನಿಂದ ಪ್ರಾರಂಭವಾಗಿದೆ. ಈ ಟೂರ್ನಿಯಲ್ಲಿ ಬಹಳ ವರ್ಷಗಳ ಬಳಿಕ ಟೀಂ ಇಂಡಿಯಾದ ಸ್ಟಾರ್ ಆಟಗಾರರಾದ ರೋಹಿತ್ ಶರ್ಮಾ, ರಿಷಬ್ ಪಂತ್, ಶುಭ್‌ಮನ್ ಗಿಲ್ ಆಡುತ್ತಿದ್ದಾರೆ. ಬಿಸಿಸಿಐನ ಖಡಕ್ ಸೂಚನೆ ಮೇರೆಗೆ ಟೀಂ ಇಂಡಿಯಾದ ಈ ಅನುಭವಿಗಳು ರಣಜಿ ಟ್ರೋಫಿಗೆ ಮರಳಿದ್ದಾರೆ. ಹೀಗಾಗಿ ಎಲ್ಲರ ಗಮನ ಈ ಖ್ಯಾತ ಆಟಗಾರರ ಮೇಲೆ ಕೇಂದ್ರೀಕೃತವಾಗಿರುವಾಗಲೇ 16 ವರ್ಷದ ಯುವ ಕ್ರಿಕೆಟರ್ ಅದ್ಭುತ ದಾಖಲೆ ಮಾಡಿದ್ದಾನೆ. 10ನೇ ತರಗತಿ ಓದುತ್ತಿರುವ ಅಂಕಿತ್ ಚಟರ್ಜಿ, ಅನುಭವಿ ಬ್ಯಾಟ್ಸ್‌ಮನ್ ಮತ್ತು ಮಾಜಿ ನಾಯಕ ಸೌರವ್ ಗಂಗೂಲಿ ಅವರ ದಾಖಲೆಯನ್ನು ಮುರಿದಿದ್ದಾನೆ.

ರಣಜಿ ಟ್ರೋಫಿಯ ಗುಂಪು ಹಂತದ ಪಂದ್ಯದಲ್ಲಿ ಇಂದು ಬಂಗಾಳ ಮತ್ತು ಹರಿಯಾಣ ತಂಡಗಳು ಪಶ್ಚಿಮ ಬಂಗಾಳದ ಕಲ್ಯಾಣಿಯಲ್ಲಿ ಮುಖಾಮುಖಿಯಾಗಿದ್ದವು. ಮೊದಲ ದಿನವೇ ಬೆಂಗಾಲ್ ಬೌಲರ್‌ಗಳು ಮಾರಕ ದಾಳಿ ನಡೆಸಿ ಹರಿಯಾಣವನ್ನು ಮೊದಲ ಇನ್ನಿಂಗ್ಸ್‌ನಲ್ಲಿ ಕೇವಲ 157 ರನ್‌ಗಳಿಗೆ ಆಲೌಟ್ ಮಾಡಿದರು. ಬಂಗಾಳದ ಬೌಲರ್‌ಗಳ ಈ ಪವಾಡಕ್ಕೂ ಮುನ್ನ ಅಂಕಿತ್ ಚಟರ್ಜಿ ವಿಶೇಷ ದಾಖಲೆ ಮಾಡಿದ್ದರು. ವಾಸ್ತವವಾಗಿ, ಅವರು ಮೈದಾನಕ್ಕೆ ಕಾಲಿಟ್ಟ ತಕ್ಷಣ, ಅಂಕಿತ್ ಬಂಗಾಳದ ಪರ ಪ್ರಥಮ ದರ್ಜೆ ಕ್ರಿಕೆಟ್ ಆಡಿದ ಅತ್ಯಂತ ಕಿರಿಯ ಆಟಗಾರ ಎನಿಸಿಕೊಂಡಿದ್ದಾರೆ.



**35 ವರ್ಷಗಳ ಹಳೆಯ ದಾಖಲೆ ಉಡೀಸ್:** ಈ ಪಂದ್ಯದಲ್ಲಿ ಆರಂಭಿಕ ಬ್ಯಾಟ್ಸ್‌ಮನ್ ಆಗಿ ಕಣಕ್ಕಿಳಿದಿದ್ದ ಅಂಕಿತ್, ಕೇವಲ 15 ವರ್ಷ ಮತ್ತು 361 ದಿನ ವಯಸ್ಸಿನಲ್ಲಿ ಬಂಗಾಳದ ಪರ ಪ್ರಥಮ ದರ್ಜೆ ಕ್ರಿಕೆಟ್ ಆಡಿದ ಅತ್ಯಂತ ಕಿರಿಯ ಆಟಗಾರನೆಂಬ ದಾಖಲೆ ಬರೆದಿದ್ದಾರೆ. ಈ ಮೂಲಕ ಅಂಕಿತ್, ಬಂಗಾಳದ ಶ್ರೇಷ್ಠ ಬ್ಯಾಟ್ಸ್‌ಮನ್ ಮತ್ತು ಭಾರತದ ಮಾಜಿ ನಾಯಕ ಸೌರವ್ ಗಂಗೂಲಿ ಅವರ ದಾಖಲೆಯನ್ನು ಮುರಿದಿದ್ದಾರೆ.

ಗಂಗೂಲಿ 35 ವರ್ಷಗಳ ಹಿಂದೆ ತಮ್ಮ 17 ನೇ ವಯಸ್ಸಿನಲ್ಲಿ 1990 ರ ರಣಜಿ ಟ್ರೋಫಿ ಫೈನಲ್‌ನಲ್ಲಿ ಪಾದಾರ್ಪಣೆ ಮಾಡಿದ ದಾಖಲೆಯನ್ನು ಮಾಡುವುದರ ಜೊತೆಗೆ, ಅವರು ಬಂಗಾಳದ ಪ್ರಶಸ್ತಿ ಗೆಲುವಿನ ಭಾಗವಾಗಿದ್ದರು. ಇದೀಗ ಅಂಕಿತ್, ಗಂಗೂಲಿ ಅವರ ದಾಖಲೆಯನ್ನು ಮುರಿದಿದ್ದಾರೆ. ವಿಶೇಷವೆಂದರೆ ಅಂಕಿತ್ ತಮ್ಮ ಹುಟ್ಟುಹಬ್ಬದ ಮುನ್ನವೇ (ಜನವರಿ 27) ಈ ಸಾಧನೆ ಮಾಡಿದ್ದಾರೆ.

**ಜೂನಿಯರ್ ಕ್ರಿಕೆಟ್‌ನಲ್ಲಿ ಅದ್ಭುತ ಪ್ರದರ್ಶನ:** ಅಂಕಿತ್ ಪ್ರಸ್ತುತ ಬಂಗಾಳದ ಶಾಲೆಯೊಂದರಲ್ಲಿ 10 ನೇ ತರಗತಿಯಲ್ಲಿ ಓದುತ್ತಿದ್ದಾನೆ. ಅವರು ಇತ್ತೀಚೆಗೆ ವಿನೂ ಮಂಕಡ್ ಟ್ರೋಫಿಯಲ್ಲಿ ತಮ್ಮ ಪ್ರದರ್ಶನದ ಮೂಲಕ ಎಲ್ಲರ ಗಮನ ಸೆಳೆದಿದ್ದರು. ಈ ಅವಧಿಯಲ್ಲಿ ಅವರು 42ರ ಸರಾಸರಿಯಲ್ಲಿ 376 ರನ್ ಗಳಿಸಿದ್ದರು. ಇದಲ್ಲದೆ, 2024 ರಲ್ಲಿ ನಡೆದ ಕೂಚ್ ಬೆಹಾರ್ ಟ್ರೋಫಿಯಲ್ಲಿ ಅವರ ಬ್ಯಾಟ್‌ನಿಂದ ಇದೇ ರೀತಿ ರನ್ ಬಂದಿದ್ದವು. ಈ ಟೂರ್ನಿಯಲ್ಲಿ ಅವರು 41 ರ ಸರಾಸರಿಯಲ್ಲಿ 325 ರನ್ ಗಳಿಸಿದ್ದರು.

# ರೋಹಿತ್ ವಿಕೆಟ್ ಪಡೆದು ಸಂಭ್ರಮಾಚರಣೆ ಮಾಡದಿರಲು ಕಾರಣ ತಿಳಿಸಿದ ಉಮರ್ ನಜೀರ್

ಸುದೀರ್ಘ ಕಾಯುವಿಕೆಯ ನಂತರ ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ ಅಂತಿಮವಾಗಿ ದೇಶೀಯ ಕ್ರಿಕೆಟ್‌ಗೆ ಮರಳಿದ್ದಾರೆ. ಬಹಳ ದಿನಗಳಿಂದ ತಮ್ಮ ಕಳಪೆ ಫಾರ್ಮ್‌ನೊಂದಿಗೆ ಹೋರಾಡುತ್ತಿರುವ ರೋಹಿತ್, ತಮ್ಮ ತವರು ತಂಡ ಮುಂಬೈ ಪರವಾಗಿ ಮೈದಾನಕ್ಕಿಳಿದರಾದರೂ ಅವರ ವಾಪಸಾತಿ, ನ್ಯೂಜಿಲೆಂಡ್ ಮತ್ತು ಆಸ್ಟ್ರೇಲಿಯಾ ವಿರುದ್ಧದ ಟೆಸ್ಟ್ ಸರಣಿಯಲ್ಲಿದ್ದಂತೆಯೇ ಇತ್ತು. 10 ವರ್ಷಗಳ ಬಳಿಕ ರಣಜಿ ಅಂಗಳಕ್ಕಿಳಿದ ರೋಹಿತ್ ಕೇವಲ 3 ರನ್ ಗಳಿಸಿ ಔಟಾದರು. ಒಂದೆಡೆ ರೋಹಿತ್ ವೈಫಲ್ಯದ ಬಗ್ಗೆ ಚರ್ಚೆಯಾಗುತ್ತಿದ್ದರೆ, ಇನ್ನೊಂದೆಡೆ ರೋಹಿತ್ ವಿಕೆಟ್ ಉರುಳಿಸಿದ ಜಮ್ಮು ಮತ್ತು ಕಾಶ್ಮೀರ ವೇಗಿ ಉಮರ್ ನಜೀರ್ ಕೂಡ ಅಷ್ಟೇ ಸುದ್ದಿಯಾಗುತ್ತಿದ್ದಾರೆ. ಅದರಲ್ಲೂ ಅವರು ರೋಹಿತ್ ವಿಕೆಟ್ ಪಡೆದರೂ ಸಂಭ್ರಮಿಸದಿರುವುದು ಎಲ್ಲರಿಗೂ ಅಚ್ಚರಿ ಮೂಡಿಸಿದೆ. ಆದರೆ ಇದೀಗ ಈ ಬೌಲರ್ ತಾನು ಏಕೆ ಸಂಭ್ರಮಾಚರಣೆ ಮಾಡಲಿಲ್ಲ ಎಂಬುದಕ್ಕೆ



ಕಾರಣವನ್ನೂ ನೀಡಿದ್ದಾರೆ.

**ಸಂಭ್ರಮಿಸಲಿಲ್ಲ ಏಕೆ?:** ಸುಮಾರು 6 ಅಡಿ 4 ಇಂಚು ಎತ್ತರದ ಈ ಬೌಲರ್ ಆರಂಭದಿಂದಲೂ ರೋಹಿತ್‌ಗೆ ಸಾಕಷ್ಟು ತೊಂದರೆ ನೀಡಿ ನಂತರ ಅವರನ್ನು ಔಟ್ ಮಾಡಿದರು. ಆದರೆ ರೋಹಿತ್‌ನಂತಹ ದಿಗ್ಗಜ ಬ್ಯಾಟ್ಸ್‌ಮನ್‌ನ ವಿಕೆಟ್ ಪಡೆದ ನಂತರವೂ ಉಮರ್ ಅಥವಾ ಅವರ ಸಹ ಆಟಗಾರರು ಯಾವುದೇ ರೀತಿಯಲ್ಲಿ ಸಂಭ್ರಮಿಸದಿರುವುದು ಎಲ್ಲರಿಗೂ ಆಶ್ಚರ್ಯ ತಂದಿತು. ದಿನದಾಟದ ಅಂತ್ಯದ ನಂತರ ಈ ಬಗ್ಗೆ ಮಾತನಾಡಿದ ಉಮರ್, 'ನಾನು ರೋಹಿತ್ ಶರ್ಮಾ ಅವರ ದೊಡ್ಡ ಅಭಿಮಾನಿಯಾದ ಕಾರಣ ಅವರ ವಿಕೆಟ್ ಪಡೆದ ನಂತರ ಸಂಭ್ರಮಾಚರಣೆ ಮಾಡಲಿಲ್ಲ. ಅವರ ವಿಕೆಟ್ ಪಡೆಯುವುದು ನನಗೆ ತುಂಬಾ ವಿಶೇಷವಾಗಿದೆ. ನಾನು ಮೊದಲ ಬಾರಿಗೆ ಅವರಿಗೆ ಬೌಲಿಂಗ್ ಮಾಡಿದೆ ಎಂದಿದ್ದಾರೆ.

**ಮುಂಬೈ ಬ್ಯಾಟಿಂಗ್ ವೈಫಲ್ಯ:** ರೋಹಿತ್ ಅವರ ವೈಫಲ್ಯವು ಅವರ ರೆಡ್ ಬಾಲ್ ವೃತ್ತಿಜೀವನದ ಮೇಲೆ ಮತ್ತೊಮ್ಮೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಆದರೆ, ರೋಹಿತ್‌ಗೆ ಎರಡನೇ ಇನ್ನಿಂಗ್ಸ್‌ನಲ್ಲಿ ಪುನರಾಗಮನದ ಅವಕಾಶವಿದೆ. ಅನುಭವಿ ಆಲ್ ರೌಂಡರ್ ಶಾರ್ದೂಲ್ ಠಾಕೂರ್ ಕಷ್ಟಕಾಲದಲ್ಲಿ 51 ರನ್‌ಗಳ ಇನ್ನಿಂಗ್ಸ್ ಆಡದೇ ಇದ್ದಿದ್ದರೆ ಮುಂಬೈ ತಂಡ 120 ರನ್‌ಗಳನ್ನು ತಲುಪಲು ಸಾಧ್ಯವಾಗುತ್ತಿರಲಿಲ್ಲ. ಮುಂಬೈನ ಅಗ್ರ-6 ಬ್ಯಾಟ್ಸ್‌ಮನ್‌ಗಳ ಪೈಕಿ ಉಮರ್ ನಜೀರ್ ಒಬ್ಬರೇ 4 ವಿಕೆಟ್ ಪಡೆದರು. ಇದಕ್ಕೆ ಉತ್ತರವಾಗಿ ಜಮ್ಮು ಮತ್ತು ಕಾಶ್ಮೀರ 7 ವಿಕೆಟ್ ಕಳೆದುಕೊಂಡು 174 ರನ್ ಗಳಿಸಿದೆ.

# 3 ದಿನಗೊಳಗಾಗಿ ಗುಡಿಸಲು ಕಳೆದುಕೊಂಡ ಬಡವರಿಗೆ ನ್ಯಾಯ ನೀಡಲಾಗುವುದು

**ಬೆಂಗಳೂರು:** ಬಡವರ, ದಲಿತರ, ನೊಂದವರ ಮೇಲೆ ಬಿಜೆಪಿ ಶಾಸಕ ಮುನಿರತ್ನ ಅವರು ನಡೆಸುತ್ತಿರುವ ಅಟ್ಟಹಾಸ, ದೌರ್ಜನ್ಯ ಬಹಳ ದಿನ ನಡೆಯುವುದಿಲ್ಲ ಹೊಟ್ಟೆ ಪಾಡಿಗಾಗಿ ಕೂಲಿನಾಲಿ ಮಾಡಿ ಜೀವನ ಸಾಗಿಸಲು ನೂರಾರು ಕಿ.ಮೀ.ದೂರದಿಂದ ಬಂದಿರುವ ಕೂಲಿಕಾರ್ಮಿಕರ ಗುಡಿಸಲು ತೆರವುಗೊಳಿಸಿದ್ದು ಭಗವಂತ ಶಿಕ್ಷೆ ನೀಡುತ್ತಾನೆ ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ಅವರು ಹೇಳಿದರು.

ಪೀಣ್ಯ ಪ್ರಥಮ ದರ್ಜೆಕಾಲೇಜು ಸಮೀಪದ ಸರ್ಕಾರಿ ಜಾಗದಲ್ಲಿ ಗುಡಿಸಲು ನಿರ್ಮಿಸಿಕೊಂಡು ಕೂಲಿನಾಲಿ ಮಾಡಿ ಜೀವನ ಸಾಗಿಸುತ್ತಿದ್ದ 60 ಕುಟುಂಬಗಳ ಗುಡಿಸಲುಗಳನ್ನು ನೆಲಸಮವಾಗಿರುವ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಸ್ಥಳದಲ್ಲಿ ಹಲವು ತಾಸು ಕಳೆದ ಅವರು ಸರ್ಕಾರಿ ಜಮೀನಿನಲ್ಲಿ ವಾಸಿಸುವ ಬಡವರ ಜೊತೆ ಕ್ರೂರವಾಗಿ ನಡೆದುಕೊಳ್ಳುವುದು ಎಷ್ಟು ಸರಿ? ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಭೇಟಿ ಮಾಡಿ 3 ದಿನಗಳಲ್ಲಿ ಶಾಶ್ವತ ಪರಿಹಾರ ನೀಡುವ ಭರವಸೆ ನೀಡಿ, ಉಪವಾಸ ಸತ್ಯಾಗ್ರಹ ಬಿಡುವಂತೆ ನೊಂದ ಕೂಲಿಕಾರ್ಮಿಕರು, ಮಾಜಿ ಸದಸ್ಯರಾದ ಲಗ್ಗೆರೆ ನಾರಾಯಣಸ್ವಾಮಿ, ವೇಲುನಾಯ್ಕರ್, ಎಚ್.ಎಸ್.ಸಿದ್ದೇಗೌಡ, ಬಿ.ಆರ್.ನಂಜುಂಡಪ್ಪ ಅವರಲ್ಲಿ ವಿನಂತಿಸಿ, ಬಡ ತಾಯಂದಿರು, ಅಂಗವಿಕಲ ಹೆಣ್ಣುಮಕ್ಕಳ ಬಗ್ಗೆ ಅವ್ಯಾಚ್ಯ ಶಬ್ದಗಳಿಂದ ಮುನಿರತ್ನ ನಿಂದಿಸಿರುವ ವಿಷಯ ತಿಳಿದು ಕಣ್ಣೀರಾದರು.

ಲಗ್ಗೆರೆ ನಾರಾಯಣಸ್ವಾಮಿ, ಬಡವರಿಗೆ ಖಾಯಂ ಮನೆ ನಿರ್ಮಿಸಿಕೊಡಬೇಕು, ಹೆಣ್ಣುಮಕ್ಕಳನ್ನು ನಿಂದಿಸಿರುವ ಗೂಂಡಾಗಳನ್ನು ಬಿಟ್ಟು ಗುಡಿಸಲು ತೆರವುಗೊಳಿಸಿರುವ ಶಾಸಕ ಮುನಿರತ್ನ ಬಂಧಿಸಿ, ಶಾಸಕ ಸ್ಥಾನದಿಂದ ಅನರ್ಹಗೊಳಿಸಬೇಕು, ಬಿಜೆಪಿಯವರು ಹಿಂದೂ, ದಲಿತರ ಬಗ್ಗೆ ಗೌರವವಿದ್ದರೆ ಕೂಡಲೇ ಪಕ್ಷದಿಂದ ಉಚ್ಚಾಟನೆ ಮಾಡುವಂತೆ ಆಗ್ರಹ ಪಡಿಸಿದರು.

ಪಾಲಿಕೆ ಮಾಜಿ ಸದಸ್ಯ ಆಶಾಸುರೇಶ್ ಮಾತನಾಡಿ ಮುನಿರತ್ನ ಹೆಣ್ಣು ಮಕ್ಕಳ ಬಗ್ಗೆ ಹಗುರವಾಗಿ ಮಾತನಾಡಿ ಸ್ತ್ರೀಕುಲಕ್ಕೆ ಪದೇಪದೇ ಅವಮಾನ ಮಾಡುತ್ತಿದ್ದಾರೆ. ಇಂತಹ ನೀಚ ಕೃತ್ಯಗಳನ್ನು ನಡೆಸುತ್ತಿರುವ ಶಾಸಕರಿಗೆ ಬಿಜೆಪಿ ಕಡಿವಾಣ ಹಾಕಬೇಕು, ಮುನಿರತ್ನ ಕೋಳಿಮೊಟ್ಟೆಯಿಂದ ಹೊಡೆಸಿಕೊಂಡಾಗ ಸಂಸದ ಡಾ.ಸಿ.ಎನ್.ಮಂಜುನಾಥ್ ದಿಢೀರ್ ಭೇಟಿ ನೀಡಿ ಕೂದಲು ಸುಟ್ಟು ಹೋಗಿದೆ ಎಂದು ಸುಳ್ಳು ಹೇಳಿ ಪ್ರಚಾರ ಪಡೆದವರು ಬಡವರ ಗುಡಿಸಲುಗಳು ನೆಲಸಮ ಮಾಡಿ ನಾಲ್ಕು ದಿನವಾದರೂ ಇಲ್ಲಿಗೆ ಭೇಟಿ ನೀಡಿ ಸಂತ್ವಾನ ಹೇಳಬಹುದಿತ್ತಲ್ಲಾ ಏಕೆ ಬಂದಿಲ್ಲಾ, ಮುನಿರತ್ನ ಕೈಗೊಂಬೆಯಾಗಿದ್ದಾರೆ ಎಂಬುದು ಸ್ಪಷ್ಟವಾಗಿ ಗೊತ್ತಾಗಿದೆ, ಅಭಿವೃದ್ಧಿ ಮಾಡದ ಸಂಸದರು ರಾಜಕೀಯ ಮಾಡಬಾರದು, ಒಂದು ಕಣ್ಣಿಗೆ ಬೆಣ್ಣೆ ಮತ್ತೊಂದು ಕಣ್ಣಿಗೆ ಸುಣ್ಣ ಹಚ್ಚುವುದನ್ನು ಜನರು ನೋಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಪಾಲಿಕೆ ಮಾಜಿ ಸದಸ್ಯ ವೇಲು ನಾಯ್ಕರ್, ಸರ್ಕಾರಿ ಜಮೀನನ್ನು ಲೂಟಿ ಮಾಡಲು ಬಿಡಿಎ, ಬಿಬಿಎಂಪಿ ಅಧಿಕಾರಿಗಳನ್ನು ಶಾಸಕ ಮುನಿರತ್ನ ಕರೆಸಿಕೊಂಡು ತನ್ನ ಗೂಂಡಾ ಪಡೆಗಳೊಂದಿಗೆ ನೆಲಸಮ ಮಾಡಿರುವುದು ನಾಗರೀಕ ಸಮಾಜ ತಲೆ ತಗ್ಗಿಸುವಂತಾಗಿದೆ ಎಂದರು.

ಗುಡಿಸಲು ಕಳೆದುಕೊಂಡ ಭೀಮಬಾಯಿ ಮಾತನಾಡಿ ಬಡವರು ಕೂಲಿಗೆ ಹೋಗಿದ್ದಾರೆ ಗುಡಿಸಲು ತೆರವುಗೊಳಿಸಿ ಬೇಡಿ, ಸಣ್ಣಸಣ್ಣ ಮಕ್ಕಳು ಇದ್ದಾರೆ ಅಂಗವಿಕಲಿದ್ದಾರೆ ಎಂದು ಕಾಲಿಗೆ ಬಿದ್ದರೂ ಜಾಡಿಸಿಒದ್ದರು, ಉತ್ತರ ಕರ್ನಾಟಕದವರು ಇಲ್ಲಿಂದ ಜಾಗ ಖಾಲಿಮಾಡಿ ಎಂದರು, ಇದಕ್ಕೂ ಮೊದಲು ಪಕ್ಕದಲ್ಲಿದ್ದ ಜಾಗದಿಂದ ಖಾಲಿಮಾಡಿಸಿದರು, ಇಲ್ಲಿಗೆ ಬಂದು ಹಲವು ವರ್ಷಗಳಾದ ನಂತರ ಮತ್ತೆ ಖಾಲಿಮಾಡಿಸುವುದು ಯಾವ ನ್ಯಾಯ ಎಂದು ಪ್ರಶ್ನಿಸಿದರು? ಸುರಪುರ ಶಾಸಕ ರಾಜ ವೇಣುಗೋಪಾಲ ನಾಯಕ್ ಮಾತನಾಡಿ ಉತ್ತರ ಕರ್ನಾಟಕದವರು ಸ್ವಾಭಿಮಾನಿಗಳು, ಶ್ರಮಜೀವಿಗಳು, ಮುಗ್ದರು, ಪ್ರಾಮಾಣಿಕರು, ಶ್ರಮಿಕರು ಮುಂದೆ ಇದೇ ಪ್ರವೃತ್ತಿ ನಡೆಸಿದರೆ ನಮ್ಮ ಪ್ರಾಣ ತ್ಯಾಗಮಾಡಿಯಾದರೂ ನಿಮ್ಮಂತಹ ಶಾಸಕರಿಗೆ ಬುದ್ಧಿಕಲಿಸುತ್ತೇವೆ ಎಂದರು.

ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹನುಮಂತರಾಯಪ್ಪ, ಬಿಬಿಎಂಪಿ ಮಾಜಿಸದಸ್ಯ ಬಿ.ಆರ್.ನಂಜುಂಡಪ್ಪ, ನಮ್ಮ ಕರ್ನಾಟಕ ಸೇನೆ ರಾಜ್ಯಘಟಕದ ಅಧ್ಯಕ್ಷ ಬಸವರಾಜು ಪಡುಕೋಟೆ, ಕಾಂಗ್ರೆಸ್ ಮುಖಂಡರಾದ ಯದಿಷ್ಟರರಾಮು, ಪೀಣ್ಯ ದಿನೇಶ್ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ವಿಠಲ್ ಯಾದವ್ ಮಾತನಾಡಿದರು.



**ಗುಡಿಸಲು ಕಳೆದುಕೊಂಡು ಸತ್ಯಾಗ್ರಹ ನಡೆಸುತ್ತಿದ್ದ ಸ್ಥಳಕ್ಕೆ ಮಾಜಿ ಸಂಸದ ಡಿ.ಕೆ.ಸುರೇಶ್ ಭೇಟಿ ನೀಡಿ ನೊಂದ ಬಡವರೊಂದಿಗೆ ಚರ್ಚಿಸಿದರು, ಶಾಸಕ ರಾಜ ವೇಣುಗೋಪಾಲ ನಾಯಕ್, ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹನುಮಂತರಾಯಪ್ಪ, ಪಾಲಿಕೆ ಮಾಜಿ ಸದಸ್ಯರಾದ ವೇಲು ನಾಯಕರ್, ಲಗ್ಗೆರೆ ನಾರಾಯಣಸ್ವಾಮಿ, ಎಚ್.ಎಸ್.ಸಿದ್ದೇಗೌಡ, ಆಶಾ ಸುರೇಶ್, ಕರ್ನಾಟಕ ಸೇನೆ ರಾಜ್ಯಘಟಕದ ಅಧ್ಯಕ್ಷ ಬಸವರಾಜು ಪಡುಕೊಟೆ ಇದ್ದಾರೆ.**



**ಗುಡಿಸಲುಗಳು ನೆಲಸಮವಾದ ಸ್ಥಳಕ್ಕೆ ಮಾಜಿ ಸಂಸದ ಡಿ.ಕೆ.ಸುರೇಶ್, ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹನುಮಂತರಾಯಪ್ಪ, ಸುರಪುರ ಶಾಸಕ ರಾಜ ವೇಣುಗೋಪಾಲ ನಾಯಕ್ ಅವರು ಸ್ಥಳ ಪರಿಶೀಲನೆ ನಡೆಸಿ ಪೊಲೀಸ್ ಅಧಿಕಾರಿಗಳಿಗೆ ಚರ್ಚಿಸಿ ಬಡವರಿಗೆ ರಕ್ಷಣೆ ನೀಡುವಂತೆ ಆಗ್ರಹಿಸಿದರು.**

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com